ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 35 RNI Number : KNKAN/25/A2770 08-02-2026 Sunday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :35 ರಾಯಚೂರು 08-02-2026 ರವಿವಾರ ಪುಟ 04 ಬೆಲೆ ರೂ.2/- ಮೊ:8660146563

ರಾಯಚೂರು ಕೇವಲ ಬಿಸಿಲುನಾಡಲ್ಲ, ಶಕ್ತಿಕೇಂದ್ರ : ಸಚಿವ ಶಿವರಾಜ ತಗಂಡಗಿ

ರಾಯಚೂರು: ರಾಯಚೂರು ಆಂಧ್ರಪ್ರದೇಶ ಹಾಗೂ ತೆಲಂಗಾಣದ ಗಡಿ ಭಾಗಕ್ಕೆ ಹೊಂದಿಕೊಂಡಿದ್ದು ಆದರೂ ಕನ್ನಡ ನಾಡು, ಕಲೆ, ಸಂಸ್ಕೃತಿಗೆ ಉತ್ತೇಜನ ನೀಡುವ ಕೆಲಸ ನಡೆಯುತ್ತಿದೆ. ಕಲೆ, ಜಾನಪದ ಉಳುವಿಗೆ ಪ್ರತಿ ವರ್ಷ ಜಿಲ್ಲಾ ಉತ್ಸ ವ ಮಾಡಲಾಗುವುದು ಎಂದು ಶಿವರಾಜ ತಂಗಡಗಿ ಹೇಳಿದರು



ರಾಯಚೂರು ಜಿಲ್ಲಾ ಉತ್ಸ ವದ ಸಮಾರೋಪ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಯಚೂರು ಕೇವಲ ಬಿಸಿಲುನಾಡು ಎನ್ನುವುದು ಸರಿಯಲ್ಲ. ಇದು ಶಕ್ತಿಕೇಂದ್ರ, ಬಂಗಾರದ ಜಿಲ್ಲೆ, ಹಟ್ಟಿಯಂತಹ ಚಿನ್ನದ ಗಣಿಯಿದೆ, ಅಶೋಕನ ಕಾಲದ ಶಾಸನಗಳು ಇಲ್ಲಿ ಪತ್ತೆಯಾಗಿವೆ. ಕೃಷ್ಣೆ ಮತ್ತು ತುಂಗಭದ್ರಾ ನದಿಗಳು ಹರಿಯುವ ಈ ಪ್ರದೇಶ ಭತ್ತದ ನಾಡು ಎಂದು ಹೇಳಿದರು.

ಉತ್ಸ ವಗಳ ಮೂಲಕ ಕಲೆ, ಕ್ರೀಡೆ ಹಾಗೂ ಕೃಷಿ ಮೇಳಗಳನ್ನು ಆಯೋಜಿಸಿ ಜಿಲ್ಲೆಯ ಸಾಮರ್ಥ್ಯವನ್ನು ಹೊರತರುವ ಅಗತ್ಯವಿದೆ. ನಮ್ಮ ಇಲಾಖೆಯಿಂದ ಸಂಪೂರ್ಣ ಸಹಕಾರ ದೊರೆಯಲಿದೆ. ಪ್ರತಿ ವರ್ಷ ಜಿಲ್ಲಾ ಉತ್ಸ ವವನ್ನು ಅದ್ದೂರಿಯಾಗಿ ಆಚರಿಸುವ ಯೋಜನೆ ಇದೆ ಎಂದು ತಿಳಿಸಿದರು.

ಕೊಪ್ಪಳ ಜಿಲ್ಲೆಯ ಉಸ್ತುವಾರಿ ಮಂತ್ರಿಯಾಗಿ ಡಿಸಿಎಂ ಅವರಿಗೆ ಮನವಿ ಮಾಡುತ್ತೇವೆ ಎಂದು ಹೇಳಿದ ಅವರು, ತುಂಗಭದ್ರಾ ಜಲಾಶಯದ ಗೇಟ್ ದುರಸ್ತಿ, ಲೆಫ್ಟ್ ಕೆನಾಲ್ ರಿಪೇರಿ ಸೇರಿದಂತೆ ರೈತರಿಗೆ ನೀಡಿದ ಭರವಸೆಗಳನ್ನು ಈಡೇರಿಸಲಾಗುವುದು. ಡ್ಯಾಂ ಗೇಟ್ ದುರಸ್ತಿಗೆ ಪ್ರಾಮುಖ್ಯತೆ ನೀಡಲಾಗುತ್ತಿದ್ದು, ಇದರಿಂದ ಎರಡು ಜಿಲ್ಲೆಗಳ ರೈತರಿಗೆ ಅನುಕೂಲವಾಗಲಿದೆ ಎಂದರು.

ರಾಯಚೂರಿನ ಗಡಿಭಾಗದಲ್ಲಿ ಕನ್ನಡ ಸಂಸ್ಥೆಗಳು ಹೆಚ್ಚಾಗುತ್ತಿದ್ದು, ಕನ್ನಡ ಭಾಷೆ ಮತ್ತು ಸಂಸ್ಕೃತಿಗೆ ಹೆಚ್ಚಿನ ಮಹತ್ವ ನೀಡಲಾಗುತ್ತಿದೆ. ಮುಂದಿನ

3ನೇ ಪುಟಕ್ಕೆ

ಇ-ಸ್ವತ್ತು ತಂತ್ರಾಂಶದಲ್ಲಿ ಬದಲಾವಣೆ ಸಾರ್ವಜನಿಕರಿಗೆ ತ್ವರಿತ ಸೇವೆಗೆ ಕ್ರಮ : ಪ್ರಿಯಾಂಕ್ ಖರ್ಗೆ

ಬೆಂಗಳೂರು,ಫೆ.07-

ಇ-ಸ್ವತ್ತು 2.0 ತಂತ್ರಾಂಶದಲ್ಲಿ ಕೆಲವು ಬದಲಾವಣೆಗಳನ್ನು ಮಾಡುವ ಮೂಲಕ ಸಾರ್ವಜನಿಕರಿಗೆ ತ್ವರಿತ ಸೇವೆಯನ್ನು ನೀಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.



ಶನಿವಾರ ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಅದರಂತೆ ನಮೂನೆ-11ಬಿ ಖಾತೆಗಳನ್ನು ನಮೂನೆ-11ಎ ಗಳಾಗಿ ಪರಿವರ್ತನೆ ಮಾಡಿಕೊಳ್ಳಲು ಗ್ರಾಮ ಪಂಚಾಯತಿ ಹಂತದಲ್ಲಿ ಅವಕಾಶ ನೀಡಲಾಗಿದೆ. ಹೊಸ ಬಹುಮಹಡಿ (ಅಪಾರ್ಟ್‌ಮೆಂಟ್) ಗಳಿಗೆ ಅರ್ಜಿಗಳನ್ನು ಸಲ್ಲಿಸಲು ಗ್ರಾಮ ಪಂಚಾಯತಿ ಹಂತದಲ್ಲಿ ಅವಕಾಶ ಕಲ್ಪಿಸಿಕೊಡುವ ಮೂಲಕ ತ್ವರಿತ ಸೇವೆಗೆ ಅವಕಾಶ ಒದಗಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಇ-ಸ್ವತ್ತು ತಂತ್ರಾಂಶದ ಸಿಟಿಜನ್ ಇಂಟರ್ ಫೇಸ್ ( ) ಮೂಲಕ ಅರ್ಜಿಗಳನ್ನು ಸಲ್ಲಿಸುವಲ್ಲಿ ಗುಂಟೆ ಮತ್ತು ಸೆಂಟ್ಸ್ ನಲ್ಲಿರುವ ವಿಸ್ತೀರ್ಣವನ್ನು ಚ.ಮೀ ನಲ್ಲಿ ಪರಿವರ್ತಿಸಿ, ಅರ್ಜಿಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿದೆ. ಹೊಸ ಬಡಾವಣೆಗಳಿಗೆ ಅರ್ಜಿಗಳನ್ನು ಸಲ್ಲಿಸಲು ಮತ್ತು ಇ-ಸ್ವತ್ತು ತಂತ್ರಾಂಶದ ಸಿಟಿಜನ್ ಇಂಟರ್ ಫೇಸ್ ಮೂಲಕ ಅರ್ಜಿಗಳನ್ನು ಸಲ್ಲಿಸುವಲ್ಲಿ ಉಂಟಾಗುತ್ತಿರುವ ತಾಂತ್ರಿಕ ಸಮಸ್ಯೆಗಳನ್ನು ಮುಂದಿನ 10 ದಿನದೊಳಗೆ ಬಗೆಹರಿಸಲಾಗುವುದು ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಇ-ಸ್ವತ್ತು 2.0 ತಂತ್ರಾಂಶದಡಿ ಸಾರ್ವಜನಿಕರಿಂದ ಇದುವರೆಗೆ ಒಟ್ಟು 1,16,296 ಅರ್ಜಿಗಳು ಸ್ವೀಕೃತವಾಗಿವೆ, ಪ್ರಸಕ್ತ 4,705 ಅರ್ಜಿಗಳು ಗ್ರಾಮ ಪಂಚಾಯತಿ ಕಾರ್ಯದರ್ಶಿಗಳ ಲಾಗಿನ್ ನಲ್ಲಿ, 12,378 ಅರ್ಜಿಗಳು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಲಾಗಿನ್ ನಲ್ಲಿ, 3,069 ಅರ್ಜಿಗಳು ಗ್ರಾಮ ಪಂಚಾಯತಿ ಅಧ್ಯಕ್ಷರ ಲಾಗಿನ್ ನಲ್ಲಿ ಹಾಗೂ 883 ಅರ್ಜಿಗಳು ತಾಲೂಕು ಪ ' ಂ ಚ ಾ ಯ ು ತಿ ಯ ು ಕಾರ್ಯನಿರ್ವಾಹಕ ಅಧಿಕಾರಿಗಳ ಲಾಗಿನ್ ನಲ್ಲಿ ಅನುಮೋದನೆಗಾಗಿ ಬಾಕಿ ಇವೆ ಎಂದು ಅವರು ಹೇಳಿದ್ದಾರೆ.

ಈ ರೀತಿ, ವಿವಿಧ ಹಂತಗಳಲ್ಲಿ ಒಟ್ಟು 21,035 ಅರ್ಜಿಗಳು

3ನೇ ಪುಟಕ್ಕೆ

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಕಾರ್ಯಾಗಾರ

ಬಡವರ ಆರ್ಥಿಕ ಸಬಲೀಕರಣಕ್ಕೆ ಪಂಚ ಗ್ಯಾರಂಟಿ ಯೋಜನೆಗಳ ಜಾರಿ

ರಾಯಚೂರು ಫೆಬ್ರುವರಿ 07ರಾಜ್ಯದ ಪ್ರಗತಿ ಜೊತೆಗೆ ಬಡವರ ಆರ್ಥಿಕತೆಯನ್ನು ಸುಧಾರಿಸಲು ನಮ್ಮ ಸರ್ಕಾರವು ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ನುಡಿದಂತೆ ನಡೆದಿದ್ದೇವೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಹೇಳಿದರು.



ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸ ವದ ನಿಮಿತ್ತ ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ರಾಯಚೂರು ಮಹಾನಗರ ಪಾಲಿಕೆ ಇವರುಗಳ ಸಂಯುಕ್ತಾಶ್ರಯದಲ್ಲಿ ಶನಿವಾರದಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಕುರಿತು ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಕಾರ್ಯಾಗಾರದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಶಕ್ತಿ, ಗೃಹಜ್ಯೋತಿ, ಗೃಹಲಕ್ಷ್ಮೀ, ಯುವನಿಧಿ ಮತ್ತು ಅನ್ನಭಾಗ್ಯ ಸೇರಿ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಸುಮಾರು ಒಂದು ಲಕ್ಷ ಕೋಟಿ ರೂ.ಗಳನ್ನು ಮಧ್ಯವರ್ತಿಗಳ ಹಾವಳಿಯಿಲ್ಲದೆರಾಜ್ಯದ ಜನರ ಮನೆ ಬಾಗಿಲಿಗೆ ನೇರವಾಗಿ ತಲುಪಿಸುವ ಕೆಲಸವಾಗುತ್ತಿದೆ. ನಮ್ಮ ಸರ್ಕಾರಕ್ಕೆ ಹೆಣ್ಣು ಮಕ್ಕಳ ಮೇಲೆ ಬಹಳಷ್ಟು ವಿಶ್ವಾಸವಿದೆ. ಮಹಿಳೆಯರ ಕೈಯಲ್ಲಿ ಹಣ ನೀಡಿದರೆ, ಅವರ ಕುಟುಂಬ ಸುಧಾರಿಸುತ್ತದೆ ಎಂಬ ನಂಬಿಕೆಯಿಂದ ಪಂಚ ಗ್ಯಾರಂಟಿ ಯೋಜನೆಗಳನ್ನು ವಿಶೇಷವಾಗಿ ಮಹಿಳೆಯರನ್ನು ಕೇಂದ್ರೀಕರಿಸಿ, ಅನುಷ್ಠಾನ ಮಾಡಲಾಗಿದೆ ಎಂದರು.

ಬಡವರು, ಹಿಂದುಳಿದವರು, ಮಧ್ಯಮ ವರ್ಗದವರು ಸೇರಿದಂತೆ ಪ್ರತಿಯೊಬ್ಬರೂ ನೆಮ್ಮದಿಯಿಂದ ಬದುಕಬೇಕು. ಪ್ರತಿಯೊಬ್ಬರ ಆದಾಯ ಹೆಚ್ಚಾಗಬೇಕು ಎಂಬುದು ನಮ್ಮ ಸರ್ಕಾರದ ಉದ್ದೇಶವಾಗಿದೆ. ಆದಾಯ ಹೆಚ್ಚಾದಂತೆ ಕುಟುಂಬದ ಅಭಿವೃದ್ಧಿ ಸಾಧ್ಯವಾಗುತ್ತದೆ. ಈ ಹಿನ್ನೆಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಪೂರಕವಾಗಿವೆ. ಉತ್ತಮ ಜನಾಭಿಪ್ರಾಯ ಇದ್ದಾಗ ಮಾತ್ರ ಸರ್ಕಾರಗಳು ಯಾವುದೇ ಯೋಜನೆಯನ್ನು ರೂಪಿಸಲು ಸಾಧ್ಯವಾಗುತ್ತದೆ. ಹಾಗಾಗಿ ಈ ಎಲ್ಲಾ ಯೋಜನೆಗಳ ಲಾಭ ಪಡೆದುಕೊಂಡ ಫಲಾನುಭವಿಗಳು ವಿಶೇಷವಾಗಿ ಮಹಿಳೆಯರು ಯೋಜನೆಯ ಅನುಕೂಲಗಳ ಬಗ್ಗೆ ಸ್ಪಷ್ಟವಾಗಿ ಮಾತನಾಡಬೇಕು. ಇದರಿಂದ

3ನೇ ಪುಟಕ್ಕೆ

ಬನ್ನಿ ಎಲ್ಲರೂ ಪಾಲ್ಗೊಳ್ಳೋಣ:

ಸಾಹಿತಿ, ಹೋರಾಟಗಾರ ಶಿವರಾಯ ಅಕ್ಕರಕಿ ಸರ್ವಾಧ್ಯಕ್ಷತೆಯಲ್ಲಿ ಸಮ್ಮೇಳನ ಜರುಗಲಿದೆ - ಕರೆಮ್ಮ ಜಿ.ನಾಯಕ



ದೇವದುರ್ಗ,ಫೆ,.07-

ಸಾಹಿತ್ಯ ಕ್ಷೇತ್ರದ ಅಭ್ಯುದಯ ಮತ್ತು ಅಧ್ಯಯನಕ್ಕೆ ಸಾಹಿತ್ಯ ಸಮ್ಮೇಳನಗಳು ಪೂರಕವಾಗಿ ಸೇವೆ ಸಲ್ಲಿಸುತ್ತವೆ. ಫೆ.14ರಂದು ದೇವದುರ್ಗದಲ್ಲಿ ಜರುಗಲಿರುವ 2ನೇ ತಾಲೂಕು ಚುಟುಕು ಸಾಹಿತ್ಯ ಸಮ್ಮೇಳನದಲ್ಲಿ ಎಲ್ಲರೂ ಪಾಲ್ಗೊಳ್ಳುವ ಮೂಲಕ ಯಶಸ್ವಿ ಸಮ್ಮೇಳನ ಮಾಡೋಣ. ಬನ್ನಿ ಎಲ್ಲರೂ ಪಾಲ್ಗೊಳ್ಳೋಣ ಎಂದು ಸಮ್ಮೇಳನದ ಸ್ವಾಗತ ಸಮಿತಿ ಅಧ್ಯಕ್ಷೆ, ಶಾಸಕಿ ಕರೆಮ್ಮ ಜಿ.ನಾಯಕ ತಿಳಿಸಿದರು.

ಪಟ್ಟಣದಲ್ಲಿ ಭಾನುವಾರ 2ನೇ ತಾಲೂಕು ಚುಟುಕು ಸಾಹಿತ್ಯ ಸಮ್ಮೇಳನದ ಆಹ್ವಾನ ಪತ್ರಿಕೆ ಬಿಡುಗಡೆಗೊಳಿಸಿ ಮಾತನಾಡಿದರು.

ಬಹುಜನ ಚಿಂತಕ, ಸಾಹಿತಿ,

3ನೇ ಪುಟಕ್ಕೆ

ರಾಜೇಶ್ ಕೃಷ್ಣನ್ ಹಾಡಿಗೆ ಮನಸೋತ ಯುವಜನತೆ

ರಾಯಚೂರು,ಫೆ.07-

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ2026ರ ಅಂಗವಾಗಿ ಫೆ.06ರಂದು ಕೃಷಿ ವಿಶ್ವವಿದ್ಯಾಲಯದ ಮುಖ್ಯ ವೇದಿಕೆಯಲ್ಲಿ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರೇಕ್ಷಕರ ಮನ ಗೆದ್ದವು. ಸಂಜೆ ಡಿ.ಕೆ.ಡಿ ತಂಡದಿಂದ ನೃತ್ಯ ಕಾರ್ಯಕ್ರಮ, ಆಳ್ವಾಸ್ ತಂಡದ ಸಾಂಸ್ಕೃತಿಕ ಪ್ರದರ್ಶನ ಹಾಗೂ ಬಳಿಕ ಡಿ.ಕೆ.ಡಿ ತಂಡದ ಮತ್ತೊಂದು ನೃತ್ಯ ಕಾರ್ಯಕ್ರಮ ಪ್ರೇಕ್ಷಕರನ್ನು ಬೆರಗುಗೊಳಿಸಿತು.



ರಾತ್ರಿ 9 ಗಂಟೆಯ ನಂತರ ಆರಂಭವಾದ ಮೆಲೋಡಿ ಕಿಂಗ್ ಖ್ಯಾತಿಯ ಗಾಯಕ ರಾಜೇಶ್ ಕೃಷ್ಣನ್ ಅವರ ಸಂಗೀತ ಕಾರ್ಯಕ್ರಮಕ್ಕೆ ಅಪಾರ ಸಂಖ್ಯೆಯಲ್ಲಿ ಪ್ರೇಕ್ಷಕರು ಹರಿದುಬಂದಿದ್ದು, ವೇದಿಕೆಯ ಮುಂದೆ ಜನಸಾಗರವೇ ನೆರೆದಂತಾಯಿತು.

ಮನಮೋಹಕ ಹಾಡುಗಳು, ತಾಳಮೇಳದ ಸಂಗೀತ ಮತ್ತು ಬೆಳಕಿನ ಅಲಂಕಾರ ವೇದಿಕೆಯನ್ನು ಉತ್ಸವದ ಕೇಂದ್ರಬಿಂದುವಾಗಿಸಿತು. ಕಾರ್ಯಕ್ರಮ ಆರಂಭವಾಗುತ್ತಿದ್ದಂತೆ ವೇದಿಕೆಯಿಂದ ಹರಿದ ಮೆಲೋಡಿ ಹಾಗೂ ಫಾಸ್ಟ್ ಬೀಟ್ ಹಾಡುಗಳು ಪ್ರೇಕ್ಷಕರನ್ನು ಕ್ಷಣಾರ್ಧದಲ್ಲೇ ಸೆಳೆದವು. ಹಳೆಯ ಹಾಗೂ ಹೊಸ ಚಲನಚಿತ್ರ ಗೀತೆಗಳನ್ನು ಸಮತೋಲನದಿಂದ ಪ್ರಸ್ತುತಪಡಿಸಿದ ರಾಜೇಶ್ ಕೃಷ್ಣನ್ ಹಾಗೂ ತಂಡಕ್ಕೆ ನಿರಂತರ ಚಪ್ಪಾಳೆ ಮತ್ತು ಹರ್ಷೋದ್ಗಾರಗಳು ಕೇಳಿಬಂದವು. ವಿಶೇಷವಾಗಿ ಯುವಜನತೆ ಹಾಡಿನ ತಾಳಕ್ಕೆ ತಾಳಮೇಳ ಹಾಕುತ್ತಾ ಕುಣಿದು ಸಂಭ್ರಮಿಸಿದರು.

ಹಾಡುಗಳ ಮಧ್ಯೆ ರಾಯಚೂರಿನ ಗುಣಗಾನ ಮಾಡುತ್ತಾ, ಗಾನಗಂಧರ್ವ ಎಸ್.ಪಿ. ಬಾಲಸುಬ್ರಹ್ಮಣ್ಯಂ ಅವರನ್ನು ಸ್ಮರಿಸಿ ಅವರ ಕೆಲ ಜನಪ್ರಿಯ ಹಾಡುಗಳನ್ನು ಹಾಡಿ ನಮನ ಸಲ್ಲಿಸಿದರು. ಬಣ್ಣ ಬಣ್ಣದ ಲೈಟಿಂಗ್, ಎಲ್‌ಇಡಿ ಪರದೆಗಳ ದೃಶ್ಯ ವೈಭವ ಹಾಗೂ ಅತ್ಯುತ್ತಮ ಸೌಂಡ್

3ನೇ ಪುಟಕ್ಕೆ

ಗ್ಯಾರಂಟಿ ಯೋಜನೆಗಳು ಬಿಟ್ಟಿ ಅಲ್ಲ, ನಮ್ಮ ಹಕ್ಕು; ಎಚ್.ಎಂ.ರೇವಣ್ಣ

ರಾಯಚೂರು,ಫೆ.07-

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳು ಬಿಟ್ಟಿ ಅಲ್ಲ ನಮ್ಮ ಹಕ್ಕು. ಐದು ಯೋಜನೆಗಳು ಜನಪರ ಯೋಜನೆಗಳಾಗಿದ್ದು ನುಡಿದಂತೆ ನಡೆದಿದ್ದೇವೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಾಜ್ಯಾಧ್ಯಕ್ಷ ಎಚ್.ಎಂ. ರೇವಣ್ಣ ಹೇಳಿದರು.

ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಮೈದಾನದಲ್ಲಿ ಹಮ್ಮಿಕೊಂಡಿದ್ದ ಪಂಚ ಗ್ಯಾರಂಟಿ ಮೇಳ ಯೋಜನೆಗಳ ಸಮಾವೇಶವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ಮಾರ್ಗದರ್ಶನದಲ್ಲಿ ಈ ಯೋಜನೆಗಳನ್ನು ಮೊದಲ ಸಂಪುಟದಲ್ಲಿಯೇ ಜಾರಿಗೆ ತರಲಾಗಿದ್ದು, ಐದು ಗ್ಯಾರಂಟಿ ಯೋಜನೆಗಳಿಗೆ ಒಟ್ಟಾರೆ 1 ಲಕ್ಷ 12 ಸಾವಿರ ಕೋಟಿ ವೆಚ್ಚವಾಗಿದೆ. ಶಕ್ತಿ ಯೋಜನೆ 11-06-2023 ರಂದು ಪ್ರಾರಂಭವಾಗಿದ್ದು, ಇದುವರೆಗೆ ಮಹಿಳೆಯರು ಬಸ್‌ಗಳಲ್ಲಿ 665 ಕೋಟಿ ಜನರು ಪ್ರಯಾಣ ಮಾಡಿದ್ದಾರೆ. ಇದು ಪ್ರಪಂಚದಲ್ಲೇ ದಾಖಲೆಯ ಸಾಧನೆಯಾಗಿದೆ ಎಂದು ಹೇಳಿದರು.

ಈ ಯೋಜನೆಯಿಂದ ಮಹಿಳೆಯರ ಜೀವನದಲ್ಲಿ ಸಂತೋಷ ಮತ್ತು ಸ್ವಾತಂ?????? ಹೆಚ್ಚಾಗಿದೆ. ಮನೆಮಧ್ಯೆ ಸೀಮಿತವಾಗಿದ್ದ ಮಹಿಳೆಯರು ಇದೀಗ ದೇವಸ್ಥಾನಗಳು, ಬಂಧು-ಬಳಗದ ಮನೆಗಳಿಗೆ ಮುಕ್ತವಾಗಿ ಸಂಚರಿಸುತ್ತಿರುವುದು ಕಾಣಸಿಗುತ್ತಿದೆ ಎಂದು ವಿವರಿಸಿದರು. ಶಕ್ತಿ ಯೋಜನೆಗೆ ರಾಜ್ಯದಲ್ಲಿ ಇದುವರೆಗೆ 17,258 ಕೋಟಿ ವೆಚ್ಚವಾಗಿದ್ದು, ರಾಯಚೂರು ಜಿಲ್ಲೆಯಲ್ಲಿ ಮಾತ್ರವೇ 11 ಕೋಟಿ 38 ಲಕ್ಷ ಜನರು ಉಚಿತವಾಗಿ ಪ್ರಯಾಣಿಸಿದ್ದಾರೆ. ಇದಕ್ಕೆ 465 ಕೋಟಿ ವೆಚ್ಚವಾಗಿದೆ ಎಂದು ಮಾಹಿತಿ ನೀಡಿದರು.

ಇದೇ ವೇಳೆ ಫಲಾನುಭವಿ ವೃದ್ಧೆ ಬಾಳಮ್ಮ ಅವರು ಗ್ಯಾರಂಟಿ ಯೋಜನೆಗಳನ್ನು ಸದುಪಯೋಗಪಡಿಸಿಕೊಂಡ ಅನುಭವವನ್ನು ಹಂಚಿಕೊಂಡರು. ನಾಗರತ್ನ ಅವರು ಅನ್ನಭಾಗ್ಯ ಯೋಜನೆಯಿಂದ ತಮ್ಮ ಕುಟುಂಬಕ್ಕೆ ಆಗಿರುವ ಲಾಭದ ಕುರಿತು ಮಾತನಾಡಿದರು. ಈ ಎಲ್ಲಾ ಗ್ಯಾರಂಟಿ ಯೋಜನೆಗಳಲ್ಲಿ ಯಾವುದೇ ಮಧ್ಯವರ್ತಿಗಳಿಲ್ಲ, ಏಜೆಂಟ್ ವ್ಯವಸ್ಥೆಯಿಲ್ಲ. ನೇರವಾಗಿ ಫಲಾನುಭವಿಗಳ ಖಾತೆಗೆ ಹಣ ಜಮೆಯಾಗುತ್ತಿದೆ. ಇದು ಇಡೀ ಭಾರತದಲ್ಲೇ ಮೊದಲ ಬಾರಿಗೆ ಜಾರಿಯಾದ ಪಾರದರ್ಶಕ ವ್ಯವಸ್ಥೆಯಾಗಿದೆ. ಮೊದಲು ಈ ಯೋಜನೆಗಳು ಸಾಧ್ಯವಿಲ್ಲ ಎಂದು ಟೀಕಿಸಿದವರೇ ಇಂದು ಬೇರೆ ರಾಜ್ಯಗಳಲ್ಲಿ ಅನುಸರಿಸುತ್ತಿದ್ದಾರೆ. ಆದರೆ ಚುನಾವಣೆ ಬಳಿಕ ಅನೇಕ ರಾಜ್ಯಗಳಲ್ಲಿ ಯೋಜನೆಗಳನ್ನು ನಿಲ್ಲಿಸಲಾಗಿದೆ. ಕರ್ನಾಟಕದಲ್ಲಿ ಮಾತ್ರ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ನೇತೃತ್ವದಲ್ಲಿ ನುಡಿದಂತೆ ನಡೆದು, ಮುಂದೆಯೂ ಈ ಯೋಜನೆಗಳನ್ನು ಮುಂದುವರಿಸಲಾಗುವುದು ಎಂಬ ಭರವಸೆಯನ್ನು ಸರ್ಕಾರ ನೀಡಿದೆ ಎಂದು ಎಚ್.ಎಂ. ರೇವಣ್ಣ ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಪ್ರಕಾಶ ಪಾಟೀಲ್, ಸಣ್ಣ ನೀರಾವರಿ ಸಚಿವ ಎನ್.ಎಸ್. ಬೋಸರಾಜು, ಸಂಸದ ಜಿ. ಕುಮಾರ ನಾಯಕ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ರಾಜ್ಯ ಉಪಾಧ್ಯಕ್ಷೆ ಪುಷ್ಪ ಅಮರನಾಥ, ಶಾಸಕರಾದ ಬಸನಗೌಡ ದದ್ದಲ್, ಬಸನಗೌಡ ತುರ್ವಿಹಾಳ, ಎಂಎಲ್‌ಸಿಗಳಾದ ಎ. ವಸಂತಕುಮಾರ, ಬಸನಗೌಡ ಬಾದರ್ಲಿ, ಎಪಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನ ಗೌಡ, ಆರ್‌ಡಿಎ ಅಧ್ಯಕ್ಷ ರಾಜಶೇಖರ ರಾಮಸ್ವಾಮಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾಧ್ಯಕ್ಷ ಪಾಮಯ್ಯ ಮುರಾರಿ, ಜಾಗೃತ ಕರ್ನಾಟಕದ ಸಂಚಾಲಕ ಪ್ರೊ. ಬಿ.ಸಿ. ಬಸವರಾಜ, ಪ್ರಮುಖರಾದ ನಾಗೇಂದ್ರಪ್ಪ ಮಟಮಾರಿ, ಬಷೀರ್ ಅಹ್ಮದ್ ಸೇರಿದಂತೆ ಅನೇಕರಿದ್ದರು.


ಸಿಂಧನೂರು ಮತ್ತು ಮಸ್ಕಿಯ ಸಂತೆ ನೋಡದ ನನಗೆ ಊರೂರು ಸುತ್ತಿ ದೇವಸ್ಥಾನಗಳ ದರ್ಶನಕ್ಕೆ ಶಕ್ತಿ ಯೋಜನೆ ಸಹಕಾರಿಯಾಯ್ತು: ಫಲಾನುಭವಿಯ ಮನದಾಳ ಮಾತು

ರಾಯಚೂರು ಫೆಬ್ರವರಿ 07-

ರಾಯಚೂರು ಜಿಲ್ಲೆಯ ಸಿಂಧನೂರು ಮತ್ತು ಮಸ್ಕಿಯ ಸಂತೆಯನ್ನೇ ನೋಡದೇ ಇದ್ದ ನನಗೆ ಊರೂರು ಸುತ್ತಿ ದೇವಸ್ಥಾನಗಳ ದರ್ಶನಕ್ಕೆ ರಾಜ್ಯ ಸರ್ಕಾರದ ಶಕ್ತಿ ಯೋಜನೆಯು ತುಂಬಾ ಸಹಕಾರಿಯಾಗಿದೆ ಎಂದು ಮಸ್ಕಿ ತಾಲ್ಲೂಕಿನ ಗ್ರಾಮವೊಂದರ ನಿವಾಸಿ ಬಾಳಮ್ಮ ಎಂಬ ಫಲಾನುಭವಿಯು ತಮ್ಮ ಮನದಾಳದ ಮಾತನ್ನು ಹೇಳಿದರು.

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸ ವದ ನಿಮಿತ್ತ ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ರಾಯಚೂರು ಮಹಾನಗರ ಪಾಲಿಕೆ ಇವರುಗಳ ಸಂಯುಕ್ತಾಶ್ರಯದಲ್ಲಿ ಶನಿವಾರದಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಕರ್ನಾಟಕ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಕುರಿತು ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಕಾರ್ಯಾಗಾರದಲ್ಲಿ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳು ಖುಷಿಯಿಂದ ಮಾತನಾಡಿದರು.

ಶಕ್ತಿ ಯೋಜನೆಯಡಿ ಉಚಿತ ಬಸ್ ಪ್ರಯಾಣದ ಮೂಲಕ



ಉಡುಪಿ, ಮಂಗಳೂರು ಸೇರಿದಂತೆ ಹಲವಾರು ಊರುಗಳನ್ನು ನೋಡಿದ್ದೇನೆ ಮತ್ತು ವಿಶೇಷವಾಗಿ ಕೃಷ್ಣ ದೇವಸ್ಥಾನ ಮತ್ತು ಇತರೆ ದೇವಸ್ಥಾನಗಳು ಸೇರಿದಂತೆ ನಮ್ಮ ರಾಜ್ಯದ ವಿವಿಧ ಪುಣ್ಯ ಕ್ಷೇತ್ರಗಳಿಗೆ ತೆರಳಿ ದೇವರ ದರ್ಶನ ಪಡೆದಿದ್ದೇನೆ. ಇದಕ್ಕಾಗಿ ಈ ಯೋಜನೆಯನ್ನು ಜಾರಿ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಧನ್ಯವಾದಗಳನ್ನು ಸಲ್ಲಿಸುತ್ತೇನೆ ಎಂದು ಬಾಳಮ್ಮ ಅವರು ಹೇಳುವಾಗ ಅವರ ಕಣ್ಣಿನಲ್ಲಿ ಧನ್ಯತಾಭಾವ ಎದ್ದು ಕಾಣುತ್ತಿತ್ತು.

ಅನ್ನಭಾಗ್ಯ ಯೋಜನೆಯ ಫಲಾನುಭವಿ ನಾಗರತ್ನ ಅವರು ಮಾತನಾಡಿ, ಅನ್ನಭಾಗ್ಯ ಕೇವಲ ಒಂದು ಯೋಜನೆಯಲ್ಲಾ. ಅದು ಬಡವರ ಹಸಿವನ್ನು ನೀಗಿಸುವಂತಹ ಮಾನವಿಯತೆಯ ಮಹಾನ್ ಕಾರ್ಯವಾಗಿದೆ. ಬೇರೆ ಬೇರೆ ವಿಷಯದಲ್ಲಿ ಆತ್ಮಹತ್ಯೆ ಮಾಡುವುದನ್ನು ಕಾಣುತ್ತೇವೆ. ಆದರೆ, ನಮ್ಮ ರಾಜ್ಯದಲ್ಲಿ ಹಸಿವಿನಿಂದ ಆತ್ಮಹತ್ಯೆ ಮಾಡಿಕೊಂಡಿರುವ ಯಾವುದೇ ಪ್ರಕರಣ ಕಂಡುಬಂದಿರುವುದಿಲ್ಲ. ಇದಕ್ಕೆ ಕಾರಣ ಸರ್ಕಾರ ಕೊಟ್ಟಿರುವ ಅನ್ನಭಾಗ್ಯ ಯೋಜನೆಯೇ ಆಗಿದೆ. ಇದರಿಂದ ನಮ್ಮಂತಹ ಬಡವರಿಗೆ ತುಂಬಾ ಅನುಕೂಲವಾಗಿದೆ. ಮೂರೊತ್ತು ನೆಮ್ಮದಿಯಿಂದ ಊಟ ಮಾಡುತ್ತಿದ್ದೇವೆ ಎಂದರು.

ಫಲಾನುಭವಿ ಬೂದೆಮ್ಮ ಅವರು ಮಾತನಾಡಿ, ಗೃಹಲಕ್ಷ್ಮೀ ಯೋಜನೆಯಡಿ ಪ್ರತಿ ತಿಂಗಳು ಬರುವಂತಹ ಹಣವನ್ನು ಕೂಡಿಟ್ಟು ಬಟ್ಟೆ ವ್ಯಾಪಾರವನ್ನು ಪ್ರಾರಂಭಿಸಿದ್ದೇನೆ. ಇದರಿಂದ ಬರುವ ಲಾಭವನ್ನು ಕುಟುಂಬ ನಿರ್ವಹಣೆಗೆ ಮತ್ತು ನನ್ನ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಬಳಕೆ ಮಾಡಿಕೊಳ್ಳುತ್ತಿದ್ದೇನೆ. ಈ ಯೋಜನೆಯಿಂದ ನಮ್ಮ ಕುಟುಂಬಕ್ಕೆ ಆರ್ಥಿಕವಾಗಿ ಶಕ್ತಿ ಸಿಕ್ಕಂತಾಗಿದೆ. ಯೋಜನೆಯಡಿ ಕಾಲಕಾಲಕ್ಕೆ ಸರ್ಕಾರ ನಮಗೆ ಹಣ ಹಾಕುವುದನ್ನು ನಾವು ಬಯಸುತ್ತೇವೆಎಂದು ಹೇಳಿದರು.

ಗೃಹಜ್ಯೋತಿ ಯೋಜನೆಯ ಫಲಾನುಭವಿ ನೇತ್ರಾವತಿ ಅವರು ಮಾತನಾಡಿ, ಈ ಹಿಂದೆ ನಮ್ಮ ಮನೆಯ ವಿದ್ಯುತ್ ಬಿಲ್ ಪ್ರತಿ ತಿಂಗಳು 700 ರಿಂದ 800 ರೂ. ಬರುತ್ತಿತ್ತು. ಗೃಹಜ್ಯೋತಿ ಯೋಜನೆ ಜಾರಿಯಾದಾಗಿನಿಂದ ವಿದ್ಯುತ್ ಬಿಲ್ ಶೂನ್ಯ ಬರುತ್ತಿದ್ದು, ಈ ಹಣ ನಮಗೆ ಉಳಿತಾಯವಾಗಿದೆ. ಇದಕ್ಕಾಗಿ ನಾನು ರಾಜ್ಯ ಸರ್ಕಾರಕ್ಕೆ ಧನ್ಯವಾದಗಳನ್ನು ತಿಳಿಸುತ್ತೇನೆ ಎಂದರು.

ಶಕ್ತಿ ಯೋಜನೆಯ ಫಲಾನುಭವಿ ನಾಗರತ್ನ ಅವರು ಮಾತನಾಡಿ, ನಾನು ದೇವದಾಸಿ ಮಹಿಳೆಯರ ಪುನರ್ವಸತಿ ಕಾರ್ಯಕರ್ತೆ ಯಾಗಿ ಕೆಲಸ

3ನೇ ಪುಟಕ್ಕೆ

12ರಿಂದ ಉದ್ಭವಲಿಂಗ ಅಮರೇಶ್ವರ ಜಾತ್ರೆ ಆರಂಭ : ಪಟ್ಟಣ ಸಿಂಗರಿಸಲು ಶಾಸಕ ಪ್ರಭು ಚವ್ಹಾಣ ಸೂಚನೆ

ಔರಾದ್,ಫೆ,07-

ಔರಾದನಲ್ಲಿ ಫೆ.12ರಿಂದ ಆರಂಭವಾಗಲಿರುವ ಐತಿಹಾಸಿಕ ಉದ್ಭವಲಿಂಗ ಅಮರೇಶ್ವರ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಪಟ್ಟಣವನ್ನು ಸ್ವಚ್ಛ, ಸುಂದರ ಹಾಗೂ ಆಕರ್ಷಕವಾಗಿ ಸಜ್ಜುಗೊಳಿಸಲು ಮಾಜಿ ಸಚಿವರು ಹಾಗೂ ಔರಾದ (ಬಿ) ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಕಠಿಣ ಸೂಚನೆ ನೀಡಿದರು. ಜಾತ್ರೆ ಹಿನ್ನೆಲೆ ಔರಾದ (ಬಿ) ತಾಲ್ಲೂಕು ಪಂಚಾಯತ ಕಛೇರಿ ಯಲ್ಲಿ ಗುರುವಾರ ಪೂರ್ವ ಸಿದ್ದತಾ ಸಭೆ ನಡೆಸಿ ಜಾತ್ರೆಯ ಪೂರ್ವ ಸಿದ್ಧತೆಗಳ ಬಗ್ಗೆ ಮಾಹಿತಿ ಪಡೆದರು.



ಮುಖ್ಯ ರಸ್ತೆ, ದೇವಾಲಯ ಸುತ್ತಮುತ್ತ, ಪಲ್ಲಕ್ಕಿ ಮೆರವಣಿಗೆ ನಡೆಯುವ ಬೀದಿಗಳು, ಅಂಗಡಿ ತುಂಬುವ ಸ್ಥಳಗಳು, ಪ್ರಮುಖ ವೃತ್ತಗಳು ಸೇರಿದಂತೆ ಇಡೀ ಪಟ್ಟಣವನ್ನು ಸ್ವಚ್ಛಗೊಳಿಸಬೇಕು. ಫಾಗಿಂಗ್ ಮತ್ತು ಬ್ಲೀಚಿಂಗ್ ಪೌಡರ್ ಸಿಂಪಡಿಸಬೇಕು. ಎಲ್ಲ ರಸ್ತೆ ಮತ್ತು ಚರಂಡಿಗಳು ಶುಚಿಯಾಗಬೇಕು. ಮುಖ್ಯಾಧಿಕಾರಿ, ಹೆಲ್ತ್ ಇನ್ಸ್‌ಪೆಕ್ಟರ್ ಹಾಗೂ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಸ್ಥಳೀಯವಾಗಿ ಲಭ್ಯವಿದ್ದು ಸ್ವಚ್ಛತಾ ಕಾರ್ಯಗಳನ್ನು ಸಮರ್ಪಕವಾಗಿ ಕೈಗೊಳ್ಳಬೇಕು ಎಂದು ಹೇಳಿದರು.

ಬೀದಿ ದೀಪಗಳು, ಹೈಮಾಸ್ಟ್ ದೀಪಗಳನ್ನು ಪರಿಶೀಲಿಸಿ ಎಲ್ಲವನ್ನು ಸರಿಪಡಿಸಬೇಕು. ಜಾತ್ರೆಗೆ ಆಗಮಿಸುವ ಭಕ್ತರಿಗೆ ಯಾವುದೇ ತೊಂದರೆ ಆಗದಂತೆ ಕುಡಿಯುವ ನೀರು, ಬೆಳಕು, ಶೌಚಾಲಯ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಬೇಕೆಂದು ಪುರಸಭೆ ಅಧಿಕಾರಿಗಳಿಗೆ ಸೂಚಿಸಿದರು. ಉದ್ಭವಲಿಂಗ ಅಮರೇಶ್ವರ ದೇವಸ್ಥಾನ ಐತಿಹಾಸಿಕ ಮಹತ್ವ ಹೊಂದಿದ್ದು, ಇಲ್ಲಿ ಶರಣಾಗುವ ಎಲ್ಲ ಭಕ್ತರ ಇಷ್ಟಾರ್ಥಗಳು ಈಡೇರುತ್ತವೆ. ಹಾಗಾಗಿ ಕರ್ನಾಟಕ ಮಾತ್ರವಲ್ಲದೇ ಮಹಾರಾಷ್ಟ್ರ ತೆಲಂಗಾಣದಿಂದಲೂ ಬಹಳಷ್ಟು ಭಕ್ತರು ಆಗಮಿಸುತ್ತಾರೆ. ಜಾತ್ರೆಯಲ್ಲಿ ಲಕ್ಷಾಂತರ ಜನ ಸೇರುವುದರಿಂದ ಯಾರೊಬ್ಬರಿಗೂ ಅನಾನುಕೂಲ ಆಗದಂತೆ ನೋಡಿಕೊಳ್ಳಬೇಕು. ಆಕರ್ಷಕ ಸ್ವಾಗತ ಕಮಾನುಗಳು, ವಿದ್ಯುತ್ ಅಲಂಕಾರ ಹಾಗೂ ಧ್ವಜಪತಾಕೆಗಳ ಮೂಲಕ ಸಿಂಗರಿಸಬೇಕು ಎಂದು ತಿಳಿಸಿದರು.

ಭಕ್ತರ ಸುರಕ್ಷತೆ ದೃಷ್ಟಿಯಿಂದ ಪೊಲೀಸ್ ಇಲಾಖೆ ಸೂಕ್ತ ಬಂದೋಬಸ್ತ್ ಕೈಗೊಳ್ಳಬೇಕು. ಅಗ್ನಿಶಾಮಕ ದಳ ಜಾಗೃತವಾಗಿರಬೇಕು. ಆರೋಗ್ಯ ಇಲಾಖೆ ಎಂಬ್ಯುಲೆನ್ಸ್ ಮತ್ತು ಸಿಬ್ಬಂದಿಯೊಂದಿಗೆ ಸಜ್ಜಾಗಿರಬೇಕು. ಜೆಸ್ಕಾಂ ಅಧಿಕಾರಿಗಳು ವಿದ್ಯುತ್ ತಂತಿಗಳನ್ನು ಸರಿಪಡಿಸಿ ವಿದ್ಯುತ್ ಕೊರತೆಯಾಗದಂತೆ ಮತ್ತು ವಿದ್ಯುತ್ ಅವಘಡಗಳಿಗೆ ಆಸ್ಪದ ನೀಡದಂತೆ ವ್ಯವಸ್ಥೆ ಮಾಡಿಕೊಳ್ಳಬೇಕಂದು ಹೇಳಿದರು. ಉದ್ಭವಲಿಂಗ ಅಮರೇಶ್ವರ ಜಾತ್ರೆ ಔರಾದ(ಬಿ) ತಾಲೂಕಿನ ಗೌರವದ ಹಬ್ಬವಾಗಿದ್ದು, ಜಾತ್ರಾ ಮಹೋತ್ಸವ ಸಮಿತಿಯಲ್ಲಿ ಎಲ್ಲ ಅಧಿಕಾರಿಗಳನ್ನು ಸೇರಿಸಿ ಜವಾಬ್ದಾರಿಗಳನ್ನು ಹಂಚಿಕೆ ಮಾಡ ಬೇಕು. ಎಲ್ಲರೂ ಸಮನ್ವಯದಿಂದ ಕಾರ್ಯ ನಿರ್ವಹಿಸಿ ಜಾತ್ರೆಯನ್ನು ಯಶಸ್ವಿಯಾಗಿ ನಡೆಸಲು ಅಗತ್ಯ ತಯಾರಿಗಳನ್ನು ಮಾಡಿಕೊಳ್ಳಬೇ ಕೆಂದು ಶಾಸಕರು ನಿರ್ದೇಶನ ನೀಡಿದರು. ಈ ಸಂದರ್ಭದಲ್ಲಿ ತಹಸೀಲ್ದಾರ ಮಹೇಶ ಪಾಟೀಲ, ತಾ.ಪಂ.ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ, ಪುರಸಭೆ ಮುಖ್ಯಾಧಿಕಾರಿ ಸ್ವಾಮಿದಾಸ, ತಾಲ್ಲೂಕು ಆರೋಗ್ಯ ಅಧಿಕಾರಿ ಡಾ.ಗಾಯತ್ರಿ, ಜೆಸ್ಕಾಂ ಸಹಾಯಕ ಕಾರ್ಯಪಾಲಕ ಅಭಿಯಂತರ ರವಿ ಕಾರಬಾರಿ, ತಾ.ಪಂ. ಸಹಾಯಕ ನಿರ್ದೇಶಕ ಶಿವಕುಮಾರ ಘಾಟೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮಾಜಿ ದೇವದಾಸಿಯರಿಗೆ ಸರ್ಕಾರಿ ಸೌಲತ್ತು ಒದಗಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುವೆ: ಡಾ.ನಾಗಲಕ್ಷ್ಮೀ ಚೌಧರಿ

ಕೊಪ್ಪಳ,ಫೆ.07-

ಸಮಾಜದಲ್ಲಿ ಅನೇಕ ಸವಾಲುಗಳನ್ನು ಎದುರಿಸುತ್ತಿರುವ ಮಾಜಿ ದೇವದಾಸಿಯರಿಗೆ ಸರ್ಕಾರಿ ಸೌಲತ್ತು ಒದಗಿಸುವಲ್ಲಿ ಪ್ರಾಮಾಣಿಕವಾಗಿ ಪ್ರಯತ್ನಿಸುವುದಾಗಿ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಹೇಳಿದರು.

ಶುಕ್ರವಾರದಂದು ಕೊಪ್ಪಳ ತಾಲೂಕ ಪಂಚಾಯತ ಆವರಣದಲ್ಲಿ ಆಯೋಜಿಸಿದ್ದ ಮಾಜಿ ದೇವದಾಸಿ ಯರೊಂದಿಗೆ ಸಂವಾದ ಕಾರ್ಯ ಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಮಾಜಿ ದೇವದಾಸಿಯರ ಬಗ್ಗೆ ಈಗಾಗಲೇ ಸಮೀಕ್ಷೆ ಕೈಗೊಳ್ಳಲಾಗಿದ್ದು, ಸಮೀಕ್ಷೆಯಿಂದ ಯಾರು ಕೂಡಾ ಹೊರಗುಳಿಯದಂತೆ ಕ್ರಮವಹಿಸಲು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗುವುದು. ವಿವಿಧ ವಸತಿ ಯೋಜನೆಯಡಿ ಮಾಜಿ ದೇವದಾಸಿಯರಿಗೆ ಮನೆ ಮಂಜೂರಾತಿಗೆ ಕ್ರಮ ವಹಿಸಲಾಗುವುದು. ಮಾಜಿ ದೇವದಾಸಿಯರು ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ.

ಅವುಗಳನ್ನು ಈಗಾಗಲೇ ಅವಹಾಲು ಗಳ ಮೂಲಕ ಸ್ವೀಕರಿಸಲಾಗಿದ್ದು, ಆಯೋಗದ ಮೂಲಕ ಸಮಸ್ಯೆ ಬಗೆಹರಿಸುವಲ್ಲಿ ಕ್ರಮವಹಿಸಲಾಗು ವುದು ಎಂದರು. ಮಾಜಿ ದೇವದಾ ಸಿಯರ ಮಕ್ಕಳಿಗೆ ಶಿಕ್ಷಣ, ಉದ್ಯೋಗ, ಸರ್ಕಾರಿ ಮೀಸ ಲಾತಿ ಸೌಲಭ್ಯ ಕುರಿತು ಸರ್ಕಾರಕ್ಕೆ ಗಮನಕ್ಕೆ ತರುವಲ್ಲಿ ಕಾರ್ಯಪ್ರವೃತ್ತಳಾಗುತ್ತೇನೆ ಎಂದರು.

ಸಂವಾದದ ಮೂಲಕ ಸಮಸ್ಯೆಗಳ ಸ್ವೀಕಾರ: ಸಂವಾದದಲ್ಲಿ ಹಾಜರಿದ್ದ ಮಾಜಿ ದೇವದಾಸಿಯರು ಸಮಾಜ ದಲ್ಲಿ ತಾವು ಎದುರಿಸುತ್ತಿರುವ ಸಮಸ್ಯೆಗಳಾದ ವಸತಿ ಮಂಜೂರಾತಿ, ಮಾಶಾಸನ ಹೆಚ್ಚಳ, ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹಧನ, ಸರ್ಕಾರಿ ಉದ್ಯೋಗದಲ್ಲಿ ಮೀಸಲಾತಿ ಇತ್ಯಾದಿಗಳ ಕುರಿತು ಅಧ್ಯಕ್ಷರ ಮುಂದೆ ಸಮಸ್ಯೆ ಹೇಳಿಕೊಂಡರು.

ಸರಳತೆ ಮೆರೆದ ಮಹಿಳಾ ಆಯೋಗದ ಅಧ್ಯಕ್ಷರು: ವೇದಿಕೆ ಮೇಲಿದ್ದ ಮಹಿಳಾ ಆಯೋಗದ ಅಧ್ಯಕ್ಷರು, ಮಾಜಿ ದೇವದಾಸಿಯರ ಬಳಿಯೇ ಬಂದು ಅವರ ಸಮಸ್ಯೆ ಆಲಿಸಿ, ಅವರ ಸಮಸ್ಯೆಗಳಿಗೆ ಸ್ಪಂದಿಸುವುದಾಗಿ ಭರವಸೆ ಮೂಡಿಸಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪರಶುರಾಮ ಶೆಟ್ಟೆಪ್ಪನವರ, ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ತಹಶೀಲ್ದಾರ ಬಸವರಾಜ ತೆನ್ನಳ್ಳಿ, ನಗರಸಭೆ ಆಯುಕ್ತ ವೆಂಕಟೇಶ ನಾಗನೂರು, ಸ್ನೇಹಾ ಸಂಸ್ಥೆಯ ಭಾರತಿ ಮಠದ, ನಗರ ಪೊಲೀಸ್ ಠಾಣೆಯ ಪೊಲೀಸ್ ಇನ್ಸಪೆಕ್ಟರ್ ಜಯಪ್ರಕಾಶ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೋಹಿಣಿ ಕೊಟಗಾರ, ದೇವದಾಸಿ ಪುನರ್ವಸತಿ ನಿಗಮ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಸುಮಾರು 300ಕ್ಕೂ ಹೆಚ್ಚು ಮಾಜಿ ದೇವದಾಸಿಯರು ಹಾಜರಿದ್ದರು.



ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಗೆ ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಿ: ಎಡಿಸಿ ಸಿದ್ರಾಮೇಶ್ವರ

ಕೊಪ್ಪಳ,ಫೆ.07-

ಫೆಬ್ರವರಿ 23 ರಂದು ಜಿಲ್ಲಾ ಕೇಂದ್ರದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾ ಮೇಶ್ವರ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಅವರು ಶುಕ್ರ ವಾರ ಛತ್ರಪತಿ ಶಿವಾಜಿ ಮಹಾ ರಾಜರ ಜಯಂತಿ ಆಚರಣೆ ಕುರಿತು ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕರೆಯಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾ ಡಿದರು.

ಸಮಾಜದ ಮುಖಂಡರ ಕೋರಿಕೆಯ ಮೇರೆಗೆ ಕೊಪ್ಪಳ ಜಿಲ್ಲಾ ಮಟ್ಟದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಣೆಯನ್ನು ಫೆ.19ರ ಬದಲಿಗೆ ಫೆ. 23 ರಂದು ಆಚರಿಸಲಾಗುವುದು. ಅಂದು ಬೆಳಿಗ್ಗೆ 10 ಗಂಟೆಗೆ ನಗರದ ಸಾಹಿತ್ಯ ಭವನದಲ್ಲಿ ವೇದಿಕೆ ಸಮಾರಂಭ ನಡೆಯಲಿದ್ದು, ಕಾರ್ಯಕ್ರಮದಲ್ಲಿ ಪೂಜೆ, ಛತ್ರಪತಿ ಶಿವಾಜಿ ಕುರಿತು ವಿಶೇಷ ಉಪನ್ಯಾಸ ಹಾಗೂ ಇತರೆ ಕಾರ್ಯಕ್ರಮಗಳು ನಡೆಯಲಿದೆ. ವೇದಿಕೆ ಕಾರ್ಯಕ್ರಮದ ಬಳಿಕ ಛತ್ರಪತಿ ಶಿವಾಜಿ ಮಹಾರಾಜರ ಭಾವಚಿತ್ರದ ಮೆರವಣಿಗೆಯು ಸಾಹಿತ್ಯ ಭವನದಿಂದ ಪ್ರಾರಂಭಗೊಂಡು ಜವಾಹರ ರಸ್ತೆ ಮೂಲಕ ಗಡಿಯಾರ ಕಂಬದ ಹತ್ತಿರದ ಕೋಟೆ ರಸ್ತೆಯಲ್ಲಿರುವ ಛತ್ರಪತಿ ಶಿವಾಜಿ ವೃತ್ತದವರೆಗೆ ಜರುಗಲಿದೆ ಎಂದು ಅವರು ತಿಳಿಸಿದರು.

ಸಮಾರಂಭ ದಿನದಂದು, ಮೆರವಣಿಗೆ ಮಾರ್ಗದ ಸ್ವಚ್ಛತೆ, ಕಾರ್ಯಕ್ರಮದ ಸ್ಥಳದ ಸ್ವಚ್ಛತೆ, ಮೆರವಣಿಗೆಯಲ್ಲಿ ಹಾಗೂ ವೇದಿಕೆ ಸಮಾರಂಭದಲ್ಲಿ ಪಾಲ್ಗೊಳ್ಳುವ ಜನರಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ನಗರಸಭೆಯಿಂದ ಒದಗಿಸಬೇಕು. ಜಿಲ್ಲಾ ಮಟ್ಟದ ಜಯಂತಿ ಆಚರಣೆ ಕಾರ್ಯಕ್ರಮಕ್ಕಾಗಿ ಸಂಬಂಧಿಸಿದ ಎಲ್ಲ ಇಲಾಖೆಗಳ ಅಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಯಂತಿ ಕಾರ್ಯಕ್ರಮ ಯಶಸ್ವಿಗೆ ಸಮಾಜದ ಎಲ್ಲಾ ಮುಖಂಡರು, ಸಾರ್ವಜನಿಕರು ಸಹಕರಿಸಬೇಕು ಎಂದು ಅವರು ಮನವಿ ಮಾಡಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇ ಶಕ ಕರ್ಣಕುಮಾರ, ಜಿಲ್ಲಾ ದೈಹಿಕ ಶಿಕ್ಷಣ ಪರಿವೀಕ್ಷಕ ಎ. ಬಸವರಾಜ, ಸಮಾಜದ ಮುಖಂಡರಾದ ಮಾರುತಿ ಎನ್., ಉಮೇಶ ಸುರ್ವೆ, ವಿಶ್ವನಾಥ ಅರಿಕೇರಿ, ಗವಿಸಿದ್ದಪ್ಪ ನಿಂಬಾಲ್ಕರ, ರಮೇಶ ಘೋರ್ಪಡೆ, ಹನುಮಂತ ಕಾರಟಗಿ, ಕೃಷ್ಣಾಜಿ ಬೋಸಲೆ ಸೇರಿದಂತೆ ಮತ್ತಿತರರು ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾ ಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

12 ರಿಂದ ಡಿ.ಇ.ಸಿ. ಸಾಮೂಹಿಕ ಗುಳಿಗೆ ನುಂಗಿಸುವ ಕಾರ್ಯಕ್ರಮ ಶೇ.100ರಷ್ಟು ಪ್ರಗತಿ ಸಾಧಿಸುವಂತೆ ಅಧಿಕಾರಿಗಳಿಗೆ ಡಿ.ಸಿ. ಸೂಚನೆ

ಕಲಬುರಗಿ,ಫೆ.07-

ಆನೆಕಾಲು ರೋಗ ಬಾರದಂತೆ ತಡೆಗಟ್ಟುವ ನಿಟ್ಟನಲ್ಲಿ ಇದೇ ಫೆಬ್ರವರಿ 12 ರಿಂದ 28ರ ವರೆಗೆ ಜಿಲ್ಲೆಯ ಐದು ತಾಲೂಕಿನಲ್ಲಿ ಸಾಮೂಹಿಕ ಔಷಧಿ ಸೇವನೆಯ (ಎಂ.ಡಿ.ಎ) ಕಾರ್ಯ ಕ್ರಮ ನಡೆಯಲಿದ್ದು, ಯಾವೊಬ್ಬ ಅರ್ಹ ಶಾಲಾ-ಕಾಲೇಜು ಮಕ್ಕಳು, ವಯಸ್ಕರು ಗುಳಿಗೆ ನುಂಗುವ ಕಾರ್ಯದಿಂದ ಬಿಟ್ಟು ಹೋಗದಂತೆ ಶೇ.100ರಷ್ಟು ಪ್ರಗತಿ ಸಾಧಿಸಬೇಕು ಎಂದು ಆರೋಗ್ಯ ಇಲಾಖೆಯ ಕಾರ್ಯಕ್ರಮ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಸೂಚನೆ ನೀಡಿದರು.



ಗುರುವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಾಮೂಹಿಕ ಔಷಧ ನುಂಗಿಸುವ ಕಾರ್ಯಕ್ರಮದ ಜಿಲ್ಲಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯ ಕಲಬುರಗಿ ಗ್ರಾಮೀಣ, ಅಫಜಲ ಪೂರ, ಆಳಂದ, ಚಿಂಚೋಳಿ, ಸೇಡಂ ತಾಲೂಕಿನ 13 ಪಿ.ಎಚ್.ಸಿ. ಮತ್ತು 63 ಉಪ ಆರೋಗ್ಯ ಕೇಂದ್ರಗಳ ವ್ಯಾಪ್ತಿಯ 222 ಗ್ರಾಮಗಳಲ್ಲಿ ಈ ಕಾರ್ಯಕ್ರಮ ನಡೆಯಲಿದ್ದು, 16,373 ಅಂಗನವಾಡಿ ಮಕ್ಕಳು, 63,350 ಶಾಲಾ ಮಕ್ಕಳು, 2,307 ಕಾಲೇಜು ವಿದ್ಯಾರ್ಥಿಗಳು ಒಳಗೊಂಡಂತೆ ಒಟ್ಟು 3,14,689 ಜನರಿಗೆ ಡಿ.ಇ.ಸಿ., ಅಲ್ಬೆಂಡೋಜಾಲ್ ಹಾಗೂ ಐವರಮೆಕ್ಟಿನ್ ತ್ರಿವಳಿ ಮಾತ್ರೆ ವಿತರಿಸುವ ಗುರಿ ಹೊಂದಲಾಗಿದೆ ಎಂದರು.

ಇನ್ನು ಕಾರ್ಯಕ್ರಮ ಯಶಸ್ಸಿಗೆ ಎಲ್ಲಾ ಭಾಗಿದಾರರ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ವಿಶೇಷವಾಗಿ ಶಾಲಾ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಮೆಡಿಕಲ್ ಕಾಲೇಜ್, ನರ್ಸಿಂಗ್ ಕಾಲೇಜುಗಳು, ಹಾಸ್ಟೆಲ್‌ಗಳು ಮುಂಚಿತವಾಗಿ ವಿದ್ಯಾರ್ಥಿಗಳಿಗೆ ಮತ್ತು ಪಾಲಕರಿಗೆ ಯಾವುದೇ ಆತಂಕವಿಲ್ಲದೆ ಮಾತ್ರೆ ತೆಗೆದುಕೊಳ್ಳುವ ಬಗ್ಗೆ ಅರಿವು ಮೂಡಿ ಸಬೇಕು. ಮಾತ್ರೆ ನುಂಗುವುದರಿಂದ ಯಾವುದೇ ಅಡ್ಡ ಪರಿಣಾಮ ಇಲ್ಲ ಎಂಬುದನ್ನು ಅವರಿಗೆ ಮನವರಿಕೆ ಮಾಡಬೇಕು ಎಂದು ಅಧಿಕಾರಿಗಳಿಗೆ ಡಿ.ಸಿ. ನಿರ್ದೇಶನ ನೀಡಿದರು.

699 ತಂಡ ರಚನೆ:ಸಾಮೂಹಿಕ ಔಷಧಿ ಸೇವನೆಯ (ಎಂ.ಡಿ.ಎ) ಕಾರ್ಯಕ್ರಮ ಹಿನ್ನೆಲೆಯಲ್ಲಿ ಮಕ್ಕಳು ಮತ್ತು ವೃದ್ಧರಿಗೆ ಒಟ್ಟಾರೆಯಾಗಿ 8,55,133 ಡಿ.ಇ.ಸಿ., 8,55,133 ಐವರಮೆಕ್ಟಿನ್ ಹಾಗೂ 3,42,053 ಅಲ್ಬೆಂಡೋಜಾಲ್ ಮಾತ್ರೆ ವಿತರಿಸಲಾಗುತ್ತಿದ್ದು, ಅಷ್ಟು ಪ್ರಮಾಣ ದಾಸ್ತಾನು ಮಾಡಿ ಇಟ್ಟುಕೊಳ್ಳಲಾಗಿದೆ. ಸಾಮೂಹಿಕವಾಗಿ ಮಾತ್ರೆ ನುಂಗಿಸಲು 699 ತಂಡ ರಚಿಸಲಾಗಿದ್ದು, 36 ಜನ ಇದರ ಮೇಲ್ವಿಚಾರಣೆ ಮಾಡಲಿದ್ದಾರೆ. 41 ಅಂಗನವಾಡಿ ಕಾರ್ಯ ಕರ್ತೆ, 304 ಆಶಾ ಕಾರ್ಯಕರ್ತೆ ಯರ ನೆರವು ಸಹ ಪಡೆಯಲಾಗಿದೆ ಎಂದು ಡಿ.ಸಿ. ತಿಳಿಸಿದರು.

ಮಾತ್ರೆ ಯಾರೆಲ್ಲ ತೆಗದುಕೊಳ್ಳಬೇಕು?ಹೇಗೆ?: 2 ರಿಂದ 5 ವರ್ಷದೊಳಗಿನವರಿಗೆ ಡಿ.ಇ.ಸಿ. 100 ಮಿ.ಗ್ರಾಂ ಒಂದು ಗುಳಿಗೆ, 6 ರಿಂದ 14 ವರ್ಷದೊಳಗಿನವರಿಗೆ ಡಿ.ಇ.ಸಿ. 100 ಮಿ.ಗ್ರಾಂ ಎರಡು ಗುಳಿಗೆ ಮತ್ತು 15 ವರ್ಷ ಮೇಲ್ಪಟ್ಟವರಿಗೆ ಡಿ.ಇ.ಸಿ. 100 ಮಿ.ಗ್ರಾಂ ಮೂರು ಗುಳಿಗೆ ನೀಡಲಾಗುತ್ತಿದೆ. 2 ವರ್ಷದಿಂದ ಮೇಲ್ಪಟ್ಟ ಎಲ್ಲರಿಗೂ 400 ಮಿ.ಗ್ರಾಂ ಚಪ್ಪರಿಸುವ ಅಲ್ಬೆಂಡಾಜೋಲ್ ಒಂದು ಗುಳಿಗೆ ನೀಡಲಾಗುತ್ತದೆ. ಇನ್ನು ಐವರಮೆಕ್ಟಿನ್ ಮಾತ್ರೆ ಎತ್ತರಕ್ಕನುಗುಣವಾಗಿ ನೀಡಲಾಗುತ್ತದೆ.

2 ವರ್ಷದೊಳಗಿನ ಮಕ್ಕಳಿಗೆ ಡಿ.ಇ.ಸಿ. ಮತ್ತು ಅಲ್ಬೆಂಡಾಜೋಲ್ ಮಾತ್ರೆ, ಮತ್ತು 5 ವರ್ಷದೊಳಗಿನ ಮಕ್ಕಳಿಗೆ ಐವರಮೆಕ್ಟಿನ್ ಮಾತ್ರೆ ನೀಡಬಾರದು. ಅಲ್ಲದೆ ಡಿ.ಇ.ಸಿ., ಅಲ್ಬೆಂ ಡೋಜಾಲ್ ಹಾಗೂ ಐವರ ಮೆಕ್ಟಿನ್ ತ್ರಿವಳಿ ವಿಧದ ಮಾತ್ರೆಗಳು ಗರ್ಭಿಣಿಯರು, ಹೃದಯ, ಶ್ವಾಸ ಕೋಶ, ಮೂತ್ರಪಿಂಡ ಸಂಬಂಧಿ ದೀರ್ಘಾವಧಿ ಕಾಯಿಲೆಯಿಂದ ಬಳಲುತ್ತಿರುವವರು ಸಹ ಸೇವನೆ ಮಾಡಬಾರದು.

ಜಿಲ್ಲಾ ಕೀಟಶಾಸ್ತ್ರಜ್ಞ ಚಾಮರಾಜ ದೊಡ್ಮನಿ ಅವರು ಸಾಮೂಹಿಕ ಔಷಧಿ ನುಂಗಿಸುವ ಕಾರ್ಯಕ್ರಮದ ಹೆಚ್ಚುವರಿ ಸುತ್ತಿನ ಕುರಿತು ಇಲಾಖೆ ಮಾಡಿಕೊಂಡಿರುವ ಸಿದ್ಧತೆ ಕುರಿತು ಪಿ.ಪಿ.ಟಿ. ಮೂಲಕ ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಡಿ.ಎಚ್.ಓ. ಡಾ.ಶರಣಬಸಪ್ಪ ಕ್ಯಾತನಾಳ, ಆರ್.ಸಿ.ಎಚ್.ಓ. ಡಾ.ಸಿದ್ರಾಮ ಪಾಟೀಲ, ಜಿಲ್ಲಾ ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಡಾ.ರವಿಕಾಂತಿ ಕ್ಯಾತನಾಳ, ಜಿಲ್ಲಾ ಶಸ್ತ್ರಜ್ಞ ಡಾ. ಅಸ್ನಾ ರುಕಿಯಾ ರಬಾ, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಚಂದ್ರಕಾಂತ ನರಿಬೋಳ, ಮಹಾನಗರರ ಪಾಲಿಕೆಯ ಹಿರಿಯ ವೈದ್ಯಾಧಿಕಾರಿ ಡಾ.ರಾಜೇಂದ್ರ ಭಾಲ್ಕಿ, ಡಿ.ಪಿ.ಎಂ. ವ್ಯವಸ್ಥಾಪಕ ವೀರೇಶ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಮುರುಗೇಶ ಗುಣಾರಿ, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪ ನಿರ್ದೇಶಕ ಸುರೇಶ ಅಕ್ಕಣ್ಣ, ಶಾಲಾ ಶಿಕ್ಷಣ ಇಲಾಖೆಯ ದೈಹಿಕ ಶಿಕ್ಷಣಾಧಿಕಾರಿ ರಾಜಶೇಖರ, ತಾಲೂಕಾ ಆರೋಗ್ಯಾಧಿಕಾರಿಗಳಾದ ಡಾ. ಮಾರುತಿರಾವ ಕಾಂಬ್ಳೆ, ಡಾ.ಸಂಜು ಪಾಟೀಲ ಯಡಗಾ, ಜಿಲ್ಲಾ ಸಮಾ ಲೋಚಕ ಕರಣಿಕ್ ಕೋರೆ, ಹಿರಿಯ ಆರೋಗ್ಯ ನಿರೀಕ್ಷಕ ಖಯ್ಯೂಮ್ ಸೇರಿದಂತೆ ಆರೋಗ್ಯ ಇಲಾಖೆಯ ಇನ್ನಿತರ ಅಧಿಕಾರಿ-ಸಿಬ್ಬಂದಿಗಳು ಭಾಗವಹಿಸಿದ್ದರು.

ಇದೇ ಸಂದರ್ಭದಲ್ಲಿ ಸಾಮೂಹಿಕ ಔಷಧಿ ಸೇನೆಯ (ಎಂ.ಡಿ.ಎ) ಕಾರ್ಯಕ್ರಮ ಮತ್ತು ರಾಷ್ಟ್ರೀಯ ಜಂತು ಹುಳು ನಿವಾರಣಾ ದಿನ ಕಾರ್ಯಕ್ರಮದ ಪೋಸ್ಟರ್‌ಗಳನ್ನು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಕಾರ್ಯಕ್ರಮ ಅಧಿಕಾರಿಗಳೊಂದಿಗೆ ಬಿಡುಗಡೆ ಮಾಡಿ ದರು.

ತಹಶೀಲ್ದಾರ ಕಚೇರಿಗೆ ಡಿಸಿ, ಎಡಿಸಿ ಭೇಟಿ : ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಪರಿಶೀಲನೆ

ಬಾಗಲಕೋಟೆ ,ಫೆ.07-

ಮುಂಬರುವ ಬಾಗಲಕೋಟೆ ವಿಧಾನಸಭಾ ಮತಕ್ಷೇತ್ರದ ಉಪಚುನಾವಣೆ ಹಿನ್ನಲೆಯಲ್ಲಿ ಬಾಗಲಕೋಟೆ ತಹಶೀಲ್ದಾರ ಕಚೇರಿಯ ಚುನಾವಣಾ ವಿಭಾಗಕ್ಕೆ ಜಿಲ್ಲಾಧಿಕಾರಿ ಸಂಗಪ್ಪ ಭೇಟಿ ನೀಡಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವನ್ನು ಪರಿಶೀಲಿಸಿದರು.



ಭೇಟಿ ನೀಡಿದ ಸಮಯದಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಅವಧಿಯಲ್ಲಿ ಸ್ವೀಕೃತಿಯಾಗಿರುವ ನಮೂನೆ 6, 7 8ಕ್ಕೆ ಸಂಬಂಧಿಸಿದ ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ, ನಿಗಧಿತ ಅವಧಿಯಲ್ಲಿ ವಿಲೇವಾರಿಗೊಳಿಸಲು ತಿಳಿಸಿದ ಜಿಲ್ಲಾಧಿಕಾರಿಗಳು ಬರುವ ಉಪ ಚುನಾವಣೆಯನ್ನು ಯಶಸ್ವಿಯಾಗಿ ಜರುಗಿಸುವ ನಿಟ್ಟಿನಲ್ಲಿ ಅಗತ್ಯ ಪೂರ್ವ ಸಿದ್ಧತೆ ಕೈಗೊಳ್ಳು ವಂತೆ ತಹಶೀಲ್ದಾರ ವಾಸುದೇವ ಸ್ವಾಮಿ ಅವರಿಗೆ ಸೂಚಿಸಿದರು. ಮತದಾರರ ಪಟ್ಟಿಯು ಸಂಪೂ ರ್ಣವಾಗಿ ಪಾರದರ್ಶಕವಾಗಿ ದ್ದು, ಯಾವುದೇ ಅರ್ಹ ಮತದಾರ ವಂಚಿತರಾಗಬಾರದು. ಈ ಬಗ್ಗೆ ನಿರ್ಲಕ್ಷ್ಯ ವಹಿಸದೇ ಜವಾಬ್ದಾರಿಯಿಂದ ಕೆಲಸ ನಿರ್ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಇದರ ಜೊತೆಗೆ ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ತಹಶೀಲ್ದಾರ ಮತ್ತು ಚುನಾವಣಾ ವಿಭಾಗದ ಸಿಬ್ಬಂದಿಗಳಿಗೆ ಸೂಚಿಸಿದರು. ನಂತರ ಕಛೇರಿಯ ಸಿಬ್ಬಂದಿ ಶಾಖೆಗೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು ವಿವಿಧ ಶಾಖೆಗಳ ಕಡತಗಳನ್ನು ಪರಿಶೀಲಿಸಿ ಬಾಕಿ ಉಳಿದ ಕಡತಗಳನ್ನು ತ್ವರಿತವಾಗಿ ವಿಲೇವಾರಿ ಮಾಡುವಂತೆ ಸಿಬ್ಬಂಧಿ ಗಳಿಗೆ ಸೂಚಿಸಿದರು. ಕಛೇರಿಗೆ ಬೇಟಿ ನೀಡುವ ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಸಿ, ಅವರ ಕುಂದು ಕೊರತೆಗಳನ್ನು ಆಲಿಸಬೇಕು. ಹೊತ್ತು ತಂದ ಸಮಸ್ಯೆಗಳಿಗೆ ಶೀಘ್ರವಾಗಿ ಪರಿಹರಿಸುವ ಕೆಲಸವಾಗಬೇಕೆಂದು ತಿಳಿಸಿದರು. ಕಚೇರಿಯಲ್ಲಿ ಸಾರ್ವಜನಿಕರಿಗೆ ಕುಳಿತುಕೊಳ್ಳಲು ಆಸನ ವ್ಯವಸ್ಥೆ ಮತ್ತು ಕಚೇರಿಯ ಒಳಾಂಗಣ ಹಾಗೂ ಹೊರಾಂಗಣದಲ್ಲಿ ಸ್ವಚ್ಛತೆ ಕಾಪಾಡಿಕೊಳ್ಳಲು ತಿಳಿಸಿದರು. ಭೇಟಿ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ, ತಹಶೀಲ್ದಾರ ಮಹಾದೇವ ಸ್ವಾಮಿ, ಗ್ರೇಡ್-2 ತಹಶೀಲ್ದಾರ ಮಹಾದೇವಪ್ಪಗೌಡ ಬಿರಾದಾರ, ಜಿಲ್ಲಾಧಿಕಾರಿಗಳ ಕಾರ್ಯಾಲಯದ ಚುನಾವಣಾ ಶಿರಸ್ತೇದಾರ ಮಹೇಶ ಪಾಂಡವ ಸೇರಿದಂತೆ ಇತರರು ಇದ್ದರು.

ಶ್ರೀ ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಿ: ಎಡಿಸಿ ಸಿದ್ರಾಮೇಶ್ವರ

ಕೊಪ್ಪಳ,ಫೆ.07-

ಜಿಲ್ಲಾಡಳಿತದ ವತಿಯಿಂದ ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಮಾರ್ಚ್ 1 ರಂದು ಶ್ರೀ ರೇಣುಕಾಚಾರ್ಯ ಜಯಂತಿಯನ್ನು ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ಸಂಬಂಧಿಸಿದ ಅಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು.



ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದ ಶ್ರೀ ರೇಣುಕಾ ಚಾರ್ಯ ಜಯಂತಿ ಆಚರಣೆ ಕುರಿತಾದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಮಾಜದ ಮುಖಂಡರ ಆಶಯದಂತೆ ಜಿಲ್ಲಾ ಮಟ್ಟದ ಶ್ರೀ ರೇಣುಕಾಚಾರ್ಯ ಜಯಂತಿ ಆಚರಣೆಯನ್ನು ಅದ್ದೂರಿಯಾಗಿ ಆಚರಿಸಲಾಗುವುದು. ಅಂದು ಬೆಳಿಗ್ಗೆ 8 ಗಂಟೆಗೆ ಶ್ರೀ ರೇಣುಕಾಚಾರ್ಯ ಅವರ ಭಾವಚಿತ್ರದ ಮೆರವಣಿಗೆಯು ನಗರದ ಗವಿಮಠದಿಂದ ಪ್ರಾರಂಭ ಗೊಂಡು ಜವಾಹರ ರಸ್ತೆ ಮೂಲಕ ಅಶೋಕ ವೃತ್ತದವರೆಗೆ ಜರುಗಲಿದೆ. ಬಳಿಕ 10.30 ಗಂಟೆಗೆ ನಗರದ ಸಾಹಿತ್ಯ ಭವನದಲ್ಲಿ ವೇದಿಕೆ ಸಮಾರಂಭ ನಡೆಯಲಿದ್ದು, ಈ ಕಾರ್ಯಕ್ರಮದಲ್ಲಿ ಪೂಜೆ, ಶ್ರೀ ರೇಣುಕಾಚಾರ್ಯರ ಕುರಿತು ವಿಶೇಷ ಉಪನ್ಯಾಸ ಹಾಗೂ ಇತರೆ ಕಾರ್ಯ ಕ್ರಮಗಳು ನಡೆಯಲಿದೆ ಎಂದು ಅವರು ತಿಳಿಸಿದರು.

ಸಮಾರಂಭ ದಿನದಂದು, ಮೆರವಣಿಗೆ ಮಾರ್ಗದ ಸ್ವಚ್ಛತೆ, ಕಾರ್ಯಕ್ರಮದ ಸ್ಥಳದ ಸ್ವಚ್ಛತೆ, ಮೆರವಣಿಗೆಯಲ್ಲಿ ಹಾಗೂ ವೇದಿಕೆ ಸಮಾರಂಭದಲ್ಲಿ ಪಾಲ್ಗೊಳ್ಳುವ ಜನರಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ನಗರಸಭೆಯಿಂದ ಒದಗಿಸಬೇಕು. ಜಿಲ್ಲಾ ಮಟ್ಟದ ಜಯಂತಿ ಆಚರಣೆ ಕಾರ್ಯಕ್ರಮಕ್ಕಾಗಿ ಸಂಬಂಧಿಸಿದ ಎಲ್ಲ ಇಲಾಖೆಗಳ ಅಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಯಂತಿ ಕಾರ್ಯಕ್ರಮ ಯಶಸ್ವಿಗೆ ಸಮಾಜದ ಎಲ್ಲಾ ಮುಖಂಡರು, ಸಾರ್ವಜನಿಕರು ಸಹಕರಿಸಬೇಕು ಎಂದು ಅವರು ಮನವಿ ಮಾಡಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ, ಜಿಲ್ಲಾ ದೈಹಿಕ ಶಿಕ್ಷಣ ಪರಿವೀಕ್ಷಕ ಎ. ಬಸವರಾಜ, ರೇಣು ಕಾಚಾರ್ಯರ ಸಮಾಜದ ಮುಖಂಡರಾದ ಹಂಪಯ್ಯ ಮೆತಗಲ್ಲ, ಬಸವರಾಜ ಗೌರಿಮಠ, ಶಿವಕುಮಾರ್ ಹಿರೇಮಠ, ನೀಲಕಂಠಯ್ಯ ಹಿರೇಮಠ, ನಾಗಭೂಷಣ ಸಾಲಿ ಮಠ, ಎಸ್.ಎಸ್. ಹಿರೇಮಠ, ಗಿರೀಶ ಹಿರೇಮಠ, ದಯಾನಂದ ಸಿ.ಎಸ್., ನಾಗಬಸಯ್ಯ, ರವಿ ಹಿರೇಮಠ್, ಅರುಣಕುಮಾರ್, ಶರಣಯ್ಯ ಹಿರೇಮಠ, ಸೇರಿದಂತೆ ಮತ್ತಿತರರು ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ರಾಯಚೂರು ಕೇವಲ ಬಿಸಿಲುನಾಡಲ್ಲ, ಶಕ್ತಿಕೇಂದ್ರ : ಸಚಿವ ಶಿವರಾಜ ತಗಂಡಗಿ

ದಿನಗಳಲ್ಲಿ ಉತ್ಸ ವಗಳನ್ನು ಇನ್ನಷ್ಟು ಅದ್ದೂರಿಯಾಗಿ ನಡೆಸಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣು ಪ್ರಕಾಶ್ ಪಾಟೀಲ್ , ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸರಾಜು, ಶಾಸಕರಾದ ಬಸವನಗೌಡ ದದ್ದಲ್ , ಹಂಪನಗೌಡ ಬಾದರ್ಲಿ , ಬಸವಗೌಡ ತುರುವಿಹಾಳ್ , ಸಂಸದ ಜಿ.ಕುಮಾರ್ ನಾಯಕ್, ಹಟ್ಟಿ ಚಿನ್ನದ ಗಣಿ ಕಂಪನಿ ಪ್ರಾಧಿಕಾರ ಅಧ್ಯಕ್ಷ ಜಿ.ಟಿ ಪಾಟೀಲ್ , ವಿಧಾನ ಪರಿಷತ್ ಸದಸ್ಯರಾದ ಎ.ವಸಂತಕುಮ್ಾರ್, ಬಸವನಗೌಡ ಬಾದರ್ಲಿ, ಎಪಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನಗೌಡ ತಲಮಾರಿ , ಉಪಾಧ್ಯಕ್ಷರಾದ ಬಷೀರ್ ಅಹ್ಮದ್, ಎಸ್ ಪಿ ಅರುಣಾಂಗ್ಷುಗಿರಿ,ಜಿ.ಪಂ ಸಿಇಒ ಈಶ್ವರ ಕುಮಾರ ಕಾಂದೂ ಮತ್ತಿತರರು ಇದ್ದರು. ಜಿಲ್ಲಾಧಿಕಾರಿ ನಿತಿಶ್ ಕೆ. ಅವರು ಸ್ವಾಗತಿಸಿದರು.

ಇ-ಸ್ವತ್ತು ತಂತ್ರಾಂಶದಲ್ಲಿ ಬದಲಾವಣೆ ಸಾರ್ವಜನಿಕರಿಗೆ ತ್ವರಿತ ಸೇವೆಗೆ ಕ್ರಮ : ಪ್ರಿಯಾಂಕ್ ಖರ್ಗೆ

ಅನುಮೋದನೆಗಾಗಿ ಬಾಕಿ ಇವೆ. ಅಲ್ಲದೆ, ಇದುವರೆಗೆ ಇ-ಸ್ವತ್ತು 2.0 ತಂತ್ರಾಂಶದಡಿ ಒಟ್ಟು 95,261 ಅರ್ಜಿಗಳು ಅನುಮೋದನೆಗೊಂಡು ವಿಲೇವಾರಿ ಮಾಡಲಾಗಿದೆ. ಇ-ಸ್ವತ್ತು 2.0 ತಂತ್ರಾಂಶದ ಸಿಟಿಜನ್ ಇಂಟರ್ ಫೇಸ್ ಮೂಲಕ ಅರ್ಜಿಗಳನ್ನು ಸಲ್ಲಿಸುವಲ್ಲಿ ಮತ್ತು ಬಳಕೆದಾರರು ಅರ್ಜಿಗಳನ್ನು ಅನುಮೋದನೆ ಮಾಡುವಂತಹ ಸಂದರ್ಭದಲ್ಲಿ ಉಂಟಾಗುತ್ತಿರುವ ತಾಂತ್ರಿಕ ಸಮಸ್ಯೆಗಳು ಸರಕಾರದ ಗಮನಕ್ಕೆ ಬಂದಿದೆ ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಕೇಂದ್ರ ಸರಕಾರ ನಿರ್ವಹಿಸುತ್ತಿರುವ ಎನ್.ಐ.ಸಿ ತಂತ್ರಾಂಶದಲ್ಲಿನ ತೊಡಕುಗಳಿಂದ ಇ-ಸ್ವತ್ತು ಮಂಜೂರಾತಿಯಲ್ಲಿ ವಿಳಂಬವಾಗುತ್ತಿದ್ದು, ಈಗಾಗಲೆ ಭಾರತ ಸರಕಾರದ ಮಾಹಿತಿ ತಂತ್ರಜ್ಞಾನ ಸಚಿವರಿಗೆ ಪತ್ರ ಬರೆದು, ಇ-ಸ್ವತ್ತು 2.0 ತಂತ್ರಾಂಶದ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸಲು ಮತ್ತು ಉಳಿದ ಮಾಡ್ಯುಲ್ ಗಳನ್ನು ಆದ್ಯತೆ ಮೇರೆಗೆ ಅಭಿವೃದ್ದಿಪಡಿಸಲು ಕೋರಲಾಗಿದೆ ಎಂದು ಅವರು ಹೇಳಿದ್ದಾರೆ.

ಸಾರ್ವಜನಿಕರಿಗೆ ಅರ್ಜಿ ಸಲ್ಲಿಸಲು ಯಾವುದೇ ಕಾಲಾವಧಿ ಯನ್ನು ನಿಗದಿಪಡಿಸಲಾಗಿಲ್ಲ, ಸಾವ ರ್ಜನಿಕರು ಗ್ರಾಮ ಪಂಚಾಯಿತಿಗೆ ಭೇಟಿ ನೀಡದೆಯೆ ತಾವಿರುವಲ್ಲಿಯೆ ತಮ್ಮ ಆಸ್ತಿಗೆ ಸಂಬಂಧಿಸಿದಂತೆ ನಮೂನೆಗಳನ್ನು ಇ-ಸ್ವತ್ತು ತಂತ್ರಾಂಶದ ಮೂಲಕ ಪಡೆಯಲು ಅವಕಾಶ ಕಲ್ಪಿಸಲಾಗಿದ್ದು ಸಮಸ್ಯೆ, ಸಂದೇಹಗಳನ್ನು ಬಗೆಹರಿಸಲು ಸರಕಾರ ಬದ್ದವಾಗಿದ್ದು, ಈ ಬಗ್ಗೆ ಸಾರ್ವಜನಿಕರು ಸಹಕರಿಸಬೇಕೆಂದು ಪ್ರಿಯಾಂಕ್ ಖರ್ಗೆ ಕೋರಿದ್ದಾರೆ.

ನಿಯಮಗಳಿಗೆ ಹಾಗೂ ಇ-ಸ್ವತ್ತು ತಂತ್ರಾಂಶದ ಬಳಕೆಗೆ ಸಂಬಂಧಿಸಿದಂತೆ ಸಾರ್ವಜನಿಕರ ಸಹಾಯಕ್ಕಾಗಿ ಇಲಾಖೆಯಿಂದ ಸಹಾಯವಾಣಿ (ಮೊಬೈಲ್ ಸಂಖ್ಯೆ: 9483476000) ಪ್ರಾರಂಭಿಸಲಾಗಿದೆ. ಇ-ಸ್ವತ್ತು 2.0 ರಡಿ ಅರ್ಜಿ ಸಲ್ಲಿಸಲು, ಸಂಬಂಧಿತ ದಾಖಲಾತಿ, ಪ್ರಕ್ರಿಯೆಯಲ್ಲಿ ತಂತ್ರಾಂಶದ ಬಳಕೆಯ ಕುರಿತು ಸಂದೇಹಗಳಿದ್ದಲ್ಲಿ ತಮ್ಮ ಜಿಲ್ಲಾ ಸಹಾಯವಾಣಿಗೆ ಕರೆ ಮಾಡಬಹುದಾಗಿದೆ ಎಂದು ಅವರು ಹೇಳಿದ್ದಾರೆ.

ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಕಾರ್ಯಾಗಾರ

ಬಡವರ ಆರ್ಥಿಕ ಸಬಲೀಕರಣಕ್ಕೆ ಪಂಚ ಗ್ಯಾರಂಟಿ ಯೋಜನೆಗಳ ಜಾರಿ

ಯಾರೂ ಈ ಯೋಜನೆಗಳ ಬಗ್ಗೆ ಅಪಪ್ರಚಾರ ಮಾಡುಲು ಸಾಧ್ಯವಾಗುವುದಿಲ್ಲ ಎಂದು ಹೇಳಿದರು.

ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ. ರೇವಣ್ಣ ಅವರು ಮಾತನಾಡಿ, ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ನೇತೃತ್ವದ ನಮ್ಮ ರಾಜ್ಯ ಸರ್ಕಾರವು ಪಂಚ ಗ್ಯಾರಂಟಿ ಯೋಜನೆಗಳನ್ನು ಅತ್ಯಂತ ಯಶಸ್ವಿಯಾಗಿ ಅನುಷ್ಠಾನಗೊಳಿಸುತ್ತಿರುವ ಮೂಲಕ 25 ತಿಂಗಳುಗಳನ್ನು ಯಶಸ್ವಿಯಾಗಿ ಪೂರೈಸಿದೆ. ಯಾವುದೇ ಮಧ್ಯವರ್ತಿಗಳಿಲ್ಲದೇ ನೇರವಾಗಿ ಫಲಾನುಭವಿಗಳಿಗೆ ತಲುಪುವ ಯೋಜನೆಗಳಾಗಿವೆ. ಇವು ಇಡೀ ಭಾರತದಲ್ಲೇ ಮೊದಲ ಬಾರಿಗೆ ಜಾರಿಯಾದ ಪಾರದರ್ಶಕ ವ್ಯವಸ್ಥೆಯಾಗಿದೆ. ಪಂಚ ಗ್ಯಾರಂಟಿ ಯೋಜನೆಗಳಿಗಾಗಿ 1 ಲಕ್ಷದ 12 ಸಾವಿರ ಕೋಟಿ ರೂ.ಗಳನ್ನು ಒದಗಿಸುತ್ತಿದೆ ಎಂದರು.

ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಸೌಲಭ್ಯ ಕಲ್ಪಿಸುವ ಶಕ್ತಿ ಯೋಜನೆಯು 665 ಕೋಟಿ ಟ್ರಿಪ್ ಗಳಲ್ಲಿ ಮಹಿಳೆಯರ ಉಚಿತ ಬಸ್ ಪ್ರಯಾಣವು ವಿಶ್ವ ದಾಖಲೆಯನ್ನು ನಿರ್ಮಿಸಿದೆ. ಈ ಯೋಜನೆಯಿಂದ ಮಹಿಳೆಯರ ಜೀವನದಲ್ಲಿ ಸಂತೋಷ ಮತ್ತು ಸ್ವಾತಂತ್ರ್ಯ ಹೆಚ್ಚಾಗಿದೆ. ಮನೆಮಧ್ಯೆ ಸೀಮಿತವಾಗಿದ್ದ ಮಹಿಳೆಯರು ಇದೀಗ ದೇವಸ್ಥಾನಗಳು, ಬಂಧು, ಬಳಗದ ಮನೆಗಳಿಗೆ, ಪ್ರವಾಸಿ ತಾಣಗಳಿಗೆ ಮುಕ್ತವಾಗಿ ಸಂಚರಿಸುತ್ತಿರುವುದು ಕಾಣಸಿಗುತ್ತಿದೆ. ನಮ್ಮ ದೇಶದ ಬೇರೆ ಬೇರೆ ರಾಜ್ಯಗಳಲ್ಲಿ ಗ್ಯಾರಂಟಿ ಯೋಜನೆಗಳ ಮಾದರಿಯಲ್ಲಿ ಜಾರಿಗೆ ತಂದ ಯೋಜನೆಗಳನ್ನು ಕೆಲವೇ ಕೆಲವು ತಿಂಗಳಲ್ಲಿ ನಿಲ್ಲಿಸಿದ್ದಾರೆ. ಆ ಎಲ್ಲಾ ರಾಜ್ಯಗಳಿಗೆ ನಮ್ಮ ರಾಜ್ಯ ಒಂದು ಮಾದರಿಯಾಗಿದೆ ಎಂದು ಹೇಳಿದರು.

ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ (ಮೈಸೂರು ವಿಭಾಗದ) ಉಪಾಧ್ಯಕ್ಷೆ ಡಾ. ಪುಷ್ಪ ಅಮರನಾಥ ಅವರು ಮಾತನಾಡಿ, ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯ ಸರ್ಕಾರವು ಭದ್ರತೆಯ ಭರವಸೆ ನೀಡಿದೆ. ಮಹಿಳೆಯರ ಬದುಕಿಗೆ ಆರ್ಥಿಕ ಮತ್ತು ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳು ಮಹಿಳೆಯರಲ್ಲಿ ಆತ್ಮವಿಶ್ವಾಸ ಹೆಚ್ಚಿಸಿವೆ ಇದು ಅಭಿನಂದನಾರ್ಹವಾಗಿದೆ. ಗ್ಯಾರಂಟಿ ಯೋಜನೆಗಳು ಅರ್ಹ ಪ್ರತಿಯೊಬ್ಬರಿಗೂ ತಲುಪುವಂತೆ ನಾವೆಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು. ಶಯೋಜನೆಯಡಿ ಉಚಿತ ಬಸ್ ಪ್ರಯಾಣ ಸೌಲಭ್ಯ ಕಲ್ಪಿಸಿರುವುದರಿಂದ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ರಾಯಚೂರು ಉತ್ಸ ವದಲ್ಲಿ ಭಾಗವಹಿಸಲು ಸಾಧ್ಯವಾಗಿದೆ ಎಂದರು.

ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ರಾಯಚೂರು ಜಿಲ್ಲೆಯಲ್ಲಿ ಗೃಹಲಕ್ಷ್ಮೀ ಯೋಜನೆಯಡಿ 4,37,355 ಫಲಾನುಭವಿಗಳಿಗೆ ಸಹಾಯಧನ ಒದಗಿಸಲಾಗಿದ್ದು, ಇದಕ್ಕಾಗಿ 2045.376 ಕೋಟಿ ರೂ.ಗಳ ವೆಚ್ಚ ಭರಿಸಲಾಗಿದೆ. ಶಕ್ತಿ ಯೋಜನೆಯಡಿ 11.28 ಕೋಟಿ ಫಲಾನುಭವಿಗಳು ಉಚಿತ ಬಸ್ ಪ್ರಯಾಣದ ಸೌಲಭ್ಯ ಪಡೆದುಕೊಂಡಿದ್ದಾರೆ. 4,53,891 ಪಡಿತರ ಚೀಟಿಗಳಿಗೆ ಅನ್ನಭಾಗ್ಯ ಯೋಜನೆಯಿಂದ ಅನುಕೂಲವಾಗಿದೆ. ಗೃಹಜ್ಯೋತಿ ಯೋಜನೆಯಡಿ ಶೇ. 95ರಷ್ಟು ಪ್ರಗತಿ ಸಾಧಿಸಲಾಗಿದೆ. ಯುವನಿಧಿ ಯೋಜನೆಯಲ್ಲಿ ರಾಯಚೂರು ಜಿಲ್ಲೆ 4ನೇ ಸ್ಥಾನದಲ್ಲಿದೆ. ಇಲ್ಲಿಯವರೆಗೆ ಜಿಲ್ಲೆಯಲ್ಲಿ 12,056 ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ್ ಕಾಂದೂ ಅವರು ಕಾರ್ಯಕ್ರಮದ ರೂಪರೇಷಗಳ ಕುರಿತು ತಿಳಿಸಿದರು. ಜಾಗೃತ ಕರ್ನಾಟಕದ ಸಂಚಾಲಕರಾದ ಪ್ರೊ. ಬಿ.ಸಿ.ಬಸವರಾಜ ಅವರು ಪಂಚ ಗ್ಯಾರಂಟಿ ಯೋಜನೆಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರದ ಎನ್.ಎಸ್.ಬೋಸರಾಜು, ರಾಯಚೂರು ಸಂಸದರಾದ ಜಿ.ಕುಮಾರ ನಾಯಕ, ಶಾಸಕರಾದ ಬಸನಗೌಡ ದದ್ದಲ್, ಹಂಪನಗೌಡ ಬಾದರ್ಲಿ, ಆರ್.ಬಸನಗೌಡ ತುರ್ವಿಹಾಳ, ವಿಧಾನ ಪರಿಷತ್ ಸದಸ್ಯ ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಎಪಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನ ಗೌಡ, ಆರ್‌ಡಿಎ ಅಧ್ಯಕ್ಷ ರಾಜಶೇಖರ ರಾಮಸ್ವಾಮಿ, ಜಿಲ್ಲಾಧಿಕಾರಿಗಳಾದ ಕೆ.ನಿತೀನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ ಸೇರಿದಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಉಪಾಧ್ಯಕ್ಷರು, ವಿವಿಧ ತಾಲೂಕುಗಳ ಅಧ್ಯಕ್ಷರು, ಸದಸ್ಯರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಸಿಂಧನೂರು ಮತ್ತು ಮಸ್ಕಿಯ ಸಂತೆ ನೋಡದ ನನಗೆ ಊರೂರು ಸುತ್ತಿ ದೇವಸ್ಥಾನಗಳ ದರ್ಶನಕ್ಕೆ ಶಕ್ತಿ ಯೋಜನೆ ಸಹಕಾರಿಯಾಯ್ತು: ಫಲಾನುಭವಿಯ ಮನದಾಳ ಮಾತು

ಮಾಡುತ್ತಿದ್ದು, ಕೆಲಸ ನಿಮಿತ್ತ ಜಿಲ್ಲೆಯ ವಿವಿಧ ತಾಲ್ಲೂಕುಗಳಿಗೆ ಭೇಟಿ ನೀಡಲು ಪ್ರತಿ ತಿಂಗಳು 4 ಸಾವಿರ ರೂ.ಗಳು ಖರ್ಚಾಗುತ್ತಿದ್ದವು. ಶಕ್ತಿ ಯೋಜನೆ ಜಾರಿಯಿಂದ ನಾನು ಉಚಿತವಾಗಿ ಬಸ್ ಪ್ರಯಾಣವನ್ನು ಮಾಡುತ್ತಿದ್ದು, ಈ ಮೊತ್ತ ನನಗೆ ಉಳಿಯುತ್ತಿದೆ. ಇದಕ್ಕಾಗಿ ನಾನು ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ಹೇಳಿದರು.

ಯುವನಿಧಿ ಯೋಜನೆಯಡಿ ಗರೀಬ್ ನವಾಜ್ ಅವರು ಮಾತನಾಡಿ, ಪದವಿ ಮುಗಿಸಿದ ನಂತರ ಏನು ಮಾಡಬೇಕೆಂಬ ಪ್ರಶ್ನೆಗೆ ಪರಿಹಾರವೇ ಯುವನಿಧಿ ಯೋಜನೆಯಾಗಿದೆ. ಇದು ನಮ್ಮಂತ ನಿರುದ್ಯೋಗಿ ಯುವಕರಿಗೆ ಆರ್ಥಿಕ ಭದ್ರತೆಯನ್ನು ನೀಡುವಂತಹ ಕಾರ್ಯಕ್ರಮ. ನನಗೆ ಈವರೆಗೆ ಬಂದ ಯುವನಿಧಿಯ ಸಹಾಯಧನ ಮೊತ್ತವನ್ನು ಕೂಡಿಟ್ಟು ಅದನ್ನು ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗಾಗಿ ಉಪಯೋಗಿಸಿ ಕೊಳ್ಳುತ್ತಿದ್ದೇನೆ ಎಂದುರು.

ಪಂಚ ಗ್ಯಾರಂಟಿ ಯೋಜನೆಗಳಿಗೆ ಲಾಭ ಪಡೆದು ಅದನ್ನು ಇತರರಿಗೆ ಮಾದರಿಯಾದ ರಾಯಚೂರು ಜಿಲ್ಲೆಯ ಫಲಾನುಭವಿಗಳಿಗೆ ಇದೇ ಸಂದರ್ಭದಲ್ಲಿ ಅಭಿನಂದನಾ ಪ್ರಮಾಣ ಪತ್ರವನ್ನು ವಿತರಣೆ ಮಾಡಲಾಯಿತು.

ಈ ಕಾರ್ಯಾಗಾರದ ಉದ್ಘಾಟನೆಯನ್ನು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ನೆರವೇರಿಸಿದರು.

ಈ ಸಂದರ್ಭದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರದ ಎನ್.ಎಸ್.ಬೋಸರಾಜು, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ಎಂ. ರೇವಣ್ಣ, ರಾಯಚೂರು ಸಂಸದರಾದ ಜಿ.ಕುಮಾರ ನಾಯಕ, ಶಾಸಕರಾದ ಬಸನಗೌಡ ದದ್ದಲ್, ಹಂಪನಗೌಡ ಬಾದರ್ಲಿ, ಆರ್.ಬಸನಗೌಡ ತುರ್ವಿಹಾಳ, ವಿಧಾನ ಪರಿಷತ್ ಸದಸ್ಯ ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ (ಮೈಸೂರು ವಿಭಾಗದ) ಉಪಾಧ್ಯಕ್ಷೆ ಡಾ. ಪುಷ್ಪ ಅಮರನಾಥ, ರಾಯಚೂರು ಜಿಲ್ಲಾ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ, ಜಿಲ್ಲಾಧಿಕಾರಿಗಳಾದ ಕೆ.ನಿತೀನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಸು ಗಿರಿ, ಎಪಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನ ಗೌಡ, ಆರ್‌ಡಿಎ ಅಧ್ಯಕ್ಷ ರಾಜಶೇಖರ ರಾಮಸ್ವಾಮಿ, ಜಾಗೃತ ಕರ್ನಾಟಕದ ಸಂಚಾಲಕರಾದ ಪ್ರೊ. ಬಿ.ಸಿ.ಬಸವರಾಜ ಸೇರಿದಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಉಪಾಧ್ಯಕ್ಷರು, ವಿವಿಧ ತಾಲೂಕುಗಳ ಅಧ್ಯಕ್ಷರು, ಸದಸ್ಯರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ನಕಲಿ ಜನನ ಪ್ರಮಾಣ ಪತ್ರ ಸಲ್ಲಿಕೆ: ಮಹಿಳೆ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲು

ಬಳ್ಳಾರಿ,ಫೆ.07-

ಸರ್ಕಾರಿ ಸೌಲಭ್ಯ ಪಡೆಯಲು ನಕಲಿ ಜನನ ಪ್ರಮಾಣ ಪತ್ರ ದಾಖಲೆ ಸೃಷ್ಟಿಸಿ ಸಲ್ಲಿಕೆ ಮಾಡಿದ ಮಹಿಳೆಯೊಬ್ಬರ ವಿರುದ್ಧ ಇಲ್ಲಿನ ಬ್ರೂಸ್‌ಪೇಟೆ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಘಟನೆಯ ಹಿನ್ನೆಲೆ: ಸಹಾಯಕ ಆಯುಕ್ತರ ನ್ಯಾಯಾಲಯದಲ್ಲಿ ವಂಶವೃಕ್ಷ ಪ್ರಮಾಣ ಪತ್ರ ಕೋರಿ ರಾಧಾ ಎಂಬುವವರು ಮೇಲ್ಮನವಿ ಸಲ್ಲಿಸಿದ್ದರು.

ಈ ಪ್ರಕರಣದ ವಿಚಾರಣೆ ವೇಳೆ ಪ್ರತಿವಾದಿಯಾದ ಹಸೀನಾ ಅಲಿಯಾಸ್ ಅಶ್ವಿನಿ ಎಂಬುವವರು ಸಲ್ಲಿಸಿದ್ದ ಜನನ ಪ್ರಮಾಣ ಪತ್ರವನ್ನು ಪರಿಶೀಲಿಸಿದಾಗ ಅದು ನಕಲಿ ಎಂಬುದು ಬೆಳಕಿಗೆ ಬಂದಿದೆ.

ದಾಖಲೆ ತಿದ್ದಿದ ಆರೋಪ: ಮೊಹಮ್ಮದ್ ಅಯಾನ್ (ತಂದೆ ಚಾಂದ್ ಬಾಷಾ) ಎಂಬುವವರ ಹೆಸರಿನಲ್ಲಿದ್ದ ಅಸಲಿ ಜನನ ಪ್ರಮಾಣ ಪತ್ರವನ್ನು ಅಕ್ರಮವಾಗಿ ತಿದ್ದಿ, ಶ್ರಾವಣಿ (ತಂದೆ ಮೊದಲ ಚೆಂಚಯ್ಯ, ತಾಯಿ ಅಶ್ವಿನಿ) ಎಂಬ ಹೆಸರಿಗೆ ನಿಯಮಬಾಹಿರವಾಗಿ ತಿದ್ದುಪಡಿ ಮಾಡಲಾಗಿದೆ ಎಂದು.

ಈ ವಂಚನೆಯನ್ನು ಗಂಭೀರವಾಗಿ ಪರಿಗಣಿಸಿದ್ದು, ಹಸೀನಾ ವಿರುದ್ಧ ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ಪೊಲೀಸರು ಬಿ.ಎನ್.ಎಸ್ ಕಾಯ್ದೆ ಕಲಂ 138(4) ಜೊತೆಗೆ 3(5) ಅಡಿ ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಸಾರ್ವಜನಿಕರು ಯಾವುದೇ ಸರ್ಕಾರಿ ಸೌಲಭ್ಯ ಪಡೆಯಲು ದಾಖಲೆಗಳನ್ನು ಸಲ್ಲಿಸುವ ಮುನ್ನ ಅವುಗಳ ನೈಜತೆಯನ್ನು ಸ್ವತಃ ಪರಿಶೀಲಿ ಸಿಕೊಳ್ಳಬೇಕು. ಮಧ್ಯವರ್ತಿ ಗಳ ಮಾತನ್ನು ನಂಬಿ ನಕಲಿ ದಾಖ ಲೆಗಳನ್ನು ಸಲ್ಲಿಸಿದರೆ ಅಂತಹವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೃಭಾಜ ನಿಗಮದ ಕಬಳಿಸಿದ ಆಸ್ತಿ ಬಿಟ್ಟು ಕೊಡುವಂತೆ ನೋಟಿಸ್ ನೀಡಿ ಸೂಚನೆ

ಸುರಪುರ ,ಫೆ.07-

ನಗರದ ತಿಮ್ಮಾಪುರದ ಮಹಿಬೂಬ ಸುಭಾನಿ ಬ ದರ್ಗಾ ದಿಂದ ವಣಕಿಹಾಳ ವರೆಗೆ ಇರುವ ಕಾಡಾ ಕಾಲುವೆ ಜಾಗ ಒತ್ತುವರಿ ಮಾಡಲಾಗಿದೆ ಎಂದು ಅಧಿಕಾರಿಗಳಿಂದ ಒತ್ತುವರಿದಾರರಿಗೆ ಜಾಗ ಬಿಟ್ಟು ಕೊಡುವಂತೆ ನೋಟಿಸ್ ನೀಡಲಾಗಿದೆ.

ಈ ಸಂದರ್ಭದಲ್ಲಿ ಕೃಷ್ಣಾ ಭಾಗ್ಯ ಜಲ ನಿಗಮದ ಹಸನಾಪುರ ಉಪ ವಿಭಾಗ ಸಂಖ್ಯೆ 10ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತ ರರಾದ ದೀಪಾ ಅವರು ಮಾಹಿತಿ ನೀಡಿ, ಕೃಷ್ಣಾ ಭಾಗ್ಯ ಜಲ ನಿಗಮ ಇಲಾಖೆಯಿಂದ ವಣಕಿಹಾಳ ದಿಂದ ಹಸನಾಪುರ ವರೆಗೆ ಸುಮಾರು 6 ಕಿಲೋಮೀಟರ್ ಕಾಲುವೆ ನಿರ್ಮಿಸಲಾಗಿದ್ದ ಜಾಗವನ್ನು ಕೆಲವರು ಒತ್ತುವರಿ ಮಾಡಿಕೊಂಡಿದ್ದು ಅದನ್ನು ಇಲಾಖೆಗೆ ಬಿಟ್ಟು ಕೊಡುವಂತೆ ನೋಟಿಸ್ ನೀಡಲಾಗಿದೆ ಎಂದು ತಿಳಿಸಿದರು .

ಕಾಲುವೆ ಹಾಗೂ ರಸ್ತೆ ಸೇರಿ 15 ಮೀಟರ್ ಅಗಲದ ಆಸ್ತಿ ನಮ್ಮ ಇಲಾಖೆಗೆ ಸೇರಿದ ನಿಗಮದ



ಆಸ್ತಿಯಾಗಿದ್ದು,ಕಾಲುವೆ ಮುಚ್ಚಿ ಅದರ ಮೇಲೆ ಮನೆಗಳನ್ನು ಕಟ್ಟಿಕೊಂಡಿದ್ದಾರೆ.ಕೆಲವ್ರು ಸೆಡ್‌ಗಳ ನಿರ್ಮಾಣ ಮಾಡಿಕೊಂಡಿದ್ದಾರೆ.ಈಗ ಎರಡು ದಿನಗಳಿಂದ ಮಹಿಬೂಬ ಸುಭಾನಿ ದರ್ಗಾ ದಿಂದ ವಣಕಿಹಾಳ ವರೆಗಿನ ಸುಮಾರು 30 ಕುಟುಂಬಗಳಿಗೆ ನೋಟಿಸ್ ನೀಡಿ ಒತ್ತುವರಿ ಮಾಡಿರುವ ಆಸ್ತಿಯನ್ನು ನಿಗಮಕ್ಕೆ ಬಿಟ್ಟು ಕೊಡುವಂತೆ ತಿಳಿಸಲಾಗಿದೆ.ಒಂದು ವೇಳೆ ಬಿಟ್ಟು ಕೊಡದೆ ವಿಳಂಬ ಮಾಡಿದಲ್ಲಿ ಕರ್ನಾಟಕ ನೀರಾವರಿ ಕಾಯ್ದೆ 1965ರ ಅಡಿಯಲ್ಲಿ ಕಾನೂನು ರಿತ್ಯ ಕ್ರಮ ಜರುಗಿಸಲಾಗುವುದು ಎಂದು ನೋಟಿಸ್ ಮೂಲಕ ಎಚ್ಚರಿಸಿದ್ದಾರೆ. ಈ ಸಂದರ್ಭದಲ್ಲಿ ಕಚೇರಿಯ ಹಿರಿಯ ಬರೆಳಚ್ಚುಗಾರ ಶ್ರೀನಿವಾಸ ಧಾಯಪುಲೆ,ವಾಹನ ಚಾಲಕ ಸುಭಾನ್,ಸಿಪಾಯಿ ಮಾನಪ್ಪ ಭಾಗವಹಿಸಿದ್ದರು. ಈ ಕಚೇರಿಗೆ ಇದುವರೆಗೆ ಬಂದಿ ರುವ ಯಾವುದೇ ಅಧಿಕಾರಿಗಳು ನಿಗಮದ ಆಸ್ತಿ ಕಬಳಿಕೆ ವಿರುದ್ಧ ಕ್ರಮಕ್ಕೆ ಹೆಚ್ಚು ಆಸಕ್ತಿ ತೋರಿರಲಿಲ್ಲ ಆದರೆ ಈಗ ಬಂದಿ ರುವ ಮಹಿಳಾ ಅಧಿಕಾರಿ ಎಇಇ ದೀಪಾ ಅವರು ಒತ್ತುವರಿದಾರರ ವಿರುದ್ಧ ಕ್ರಮಕ್ಕೆ ನೋಟಿಸ್ ನೀಡಿ ರುವುದು ಉತ್ತಮ ಕಾರ್ಯವಾಗಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆ ತಾಲೂಕ ಅಧ್ಯಕ್ಷ ವೆಂಕಟೇಶ ನಾಯಕ ಬೈರಿಮಡ್ಡಿ ಅಧಿಕಾರಿ ಎಇಇ ದೀಪಾ ಅವರ ದಿಟ್ಟತನದ ಕಾರ್ಯದ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.


ಬಾಲ್ಯ ವಿವಾಹ ಮತ್ತು ಪೋಕ್ಸೋ ಪ್ರಕರಣಗಳು ಕಂಡುಬಂದಲ್ಲಿ ಅಧಿಕಾರಿಗಳು ಹೆಚ್ಚಿನ ನಿಗಾ ವಹಿಸಬೇಕು-ಡಿಸಿ ಫೌಜಿಯಾ ತರನ್ನುಮ್

ಕಲಬುರಗಿ,ಫೆ.07-

ಬಾಲ್ಯವಿವಾಹ, ಮತ್ತು ಫೋಕ್ಸೋ ಪ್ರಕರಣಗಳು ಕಂಡು ಬಂದಲ್ಲಿ ಸಂಬಂಧಿಸಿದಂತೆ ಅಧಿಕಾರಿಗಳ ಅತಿ ಹೆಚ್ಚಿನ ನಿಗಾ ವಹಿಸ ಬೇಕೆಂದು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶುಕ್ರವಾರದಂದು ಜಿಲ್ಲಾಧಿ ಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ, ಮಕ್ಕಳ ಸಹಾಯವಾಣಿ -1098, ಸಲಹಾ ಮಂಡಳಿ, ಮುಖ್ಯಮಂತ್ರಿ ಬಾಲ ಸೇವಾ ಯೋಜನೆ ಮತ್ತು ಪಿ.ಎಮ್.ಕೇರ, ಹೆಣ್ಣು ಮಕ್ಕಳ ಅನುಪಾಲನಾ ಗೃಹ ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅದೇ ರೀತಿಯಾಗಿ ಮಕ್ಕಳು ಹೆಚ್ಚು ಹೆಚ್ಚು ಕುಟುಂಬಗಳಿಗೆ ದತ್ತು ಹೋಗುತ್ತಿರುವುದು ತುಂಬಾ ಸಂತೋ ಷವಾಗಿದೆ ಎಂದು ತಿಳಿಸಿದರು. 2023 ರಲ್ಲಿ ಪೋಕ್ಸೋ ಪ್ರಕರಣದಲ್ಲಿ ನ್ಯಾಯಾಲಯ ಜೀವಾವಧಿ ಶಿಕ್ಷೆಯ ನ್ನು ಹಾಗೂ ಬಾಲ್ಯವಿವಾಹ ಪ್ರಕರ ಣಗಳಲ್ಲಿ ನ್ಯಾಯಾಲಯವು ಕುಟುಂ ಬದ 4 ಜನ ಸದಸ್ಯರಿಗೆ ಶಿಕ್ಷೆಯನ್ನು ವಿಧಿಸಿರುತ್ತದೆ. ಇಂತಹ ಇತ್ಯರ್ಥ



ಗೊಂಡ ನ್ಯಾಯಾಲಯಗಳ ಪ್ರಕರಣಗಳನ್ನು ಎಲ್ಲಾ ಜಿಲ್ಲೆಯ ಅಧಿಕಾರಿಗಳಿಗೆ ಜನರಿಗೆ ಅರಿವು ನೀಡಬೇ ಕೆಂದು ಸೂಚಿಸಿದರು.

ಬಾಲಗರ್ಭಿಣಿ ಪ್ರಕರಣಗಳಲ್ಲಿ ಆರೋಗ್ಯ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಕಡ್ಡಾಯವಾಗಿ ಪ್ರಥಮ ವರ್ತಮಾನ ವರದಿಯನ್ನು ಮಾಡಬೇಕು. ಕೇವಲ ಹೇಳಿಕೆಗಳನ್ನು ನೀಡದೆ ಸಂಬಂಧಪಟ್ಟ ಠಾಣೆಗೆ ತೆರಳಿ ವರದಿ ಮಾಡಲು ತಿಳಿಸಿದರು.

ಸಂಬಂಧಪಟ್ಟ ಅಧಿಕಾರಿಗಳು ತಮ್ಮ ಅಧೀನದಲ್ಲಿ ಬರುವ ಕಚೇರಿ ಗಳಿಗೆ ಅಥವಾ ಮಕ್ಕಳ ವಸತಿ ನಿಲಯಗಳಿಗೆ ಮುಂಚಿತವಾಗಿ ಭೇಟಿ ನೀಡುವ ಮಾಹಿತಿಯನ್ನು ತಿಳಿಸದೆ ಭೇಟಿ ನೀಡಿದಾಗ ಮಾತ್ರ ಅಲ್ಲಿಯ ನಿಜಸ್ಥಿತಿ ತಿಳಿಯುತ್ತದೆ ಎಲ್ಲಾ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಲು ಸೂಚಿನೆ ನೀಡಿದರು.

ಇದೇ ಸಂದರ್ಭದಲ್ಲಿ ಕೋವಿಡ್‌ನಲ್ಲಿ ತಂದೆ ತಾಯಿಯನ್ನು ಕಳೆದುಕೊಂಡಿರುವ ಪಿ.ಎಂ.ಕೇರ್ ಯೋಜನೆ ಅಡಿ ದಾಖಲಾಗಿರುವ ಮಕ್ಕಳಿಗೆ ಸ್ನೇಹ ಪತ್ರವನ್ನು ಜಿಲ್ಲಾಧಿಕಾರಿಗಳು ನೀಡಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಜಿಲ್ಲಾಮಕ್ಕಳ ರಕ್ಷಣಾಧಿಕಾರಿ ವಿ. ಮಂಜುಳಾ ಪಾಟೀಲ ಅವರು ಪಿ.ಪಿ.ಟಿ. ಮೂಲಕ ಪ್ರತಿಯೊಂದು ಇಲಾಖೆಯ ಮಾಹಿತಿ ನೀಡಿದರು.

ಸಭೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ, ಮಹಾನಗರ ಪಾಲಿಕೆ ಆಯುಕ್ತರಾದ ಅವಿನಾಶ ಶಿಂಧೆ, ಹೆಚ್ಚುವರಿ ಎಸ್.ಪಿ. ಮಹೇಶ ಮೇಘಣ್ಣನವರ್ ಸೇರಿದಂತೆ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಪ್ರೀತಿ ದೊಡ್ಡಮನಿ, ಡಿ.ಹೆಚ್.ಓ. ಡಾ.ಶರಣಬಸಪ್ಪ ಕ್ಯಾತನಾಳ, ಶಿಕ್ಷಣ ಇಲಾಖೆ ಉಪನಿರ್ದೇಶಕಿ ಶಂಕ್ರಮ ಡವಳಗಿ, ಪೊಲೀಸ್ ಅಧಿಕಾರಿಗಳು, ಜಿಲ್ಲಾಮಟ್ಟದ ಅಧಿಕಾರಿಗಳು ತಾಲೂಕ ಮಟ್ಟದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಆಪ್ತ ಸಮಾಲೋಚಕರು, ಸಂಘ ಸಂಸ್ಥೆಗಳು ಭಾಗವಹಿಸಿದ್ದರು.

ಖಾದಿ ಉಡುಪು ಧರಿಸುವಿಕೆ, ಮಾರಾಟ ಮಳಿಗೆ ಆರಂಭ

ಯಾದಗಿರಿ,ಫೆ.07-

ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಸಂಸ್ಥೆಗಳು, ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ವಿಶ್ವವಿದ್ಯಾಲಯಗಳ ಅಧಿಕಾರಿಗಳು ಮತ್ತು ನೌಕರರು ಪ್ರತಿ ತಿಂಗಳ ಮೊದಲ ಶನಿವಾರದಂದು ಸ್ವಯಂ ಪ್ರೇರಣೆಯಿಂದ ಖಾದಿ ಉಡುಪನ್ನು ಧರಿಸಲು ಸೂಚಿಸಲಾಗಿದೆ. ಅಲ್ಲದೆ, ಸ್ವಾತಂತ್ರ್ಯ ದಿನಾಚರಣೆ, ಗಣರಾಜ್ಯೋತ್ಸವ ಸೇರಿದಂತೆ ಎಲ್ಲಾ ಅಧಿಕೃತ ಸರ್ಕಾರಿ ಕಾರ್ಯಕ್ರಮಗಳಲ್ಲಿ ಕಡ್ಡಾಯವಾಗಿ ಖಾದಿ ಉಡುಪನ್ನು ಧರಿಸುವಂತೆ ನಿರ್ದೇಶನ ನೀಡಲಾಗಿದೆ ಎಂದು ಯಾದಗಿರಿ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅವರು ತಿಳಿಸಿದ್ದಾರೆ.

2026ರ ಫೆಬ್ರವರಿ 7 ರಂದು ಶನಿವಾರ ರಂದು ಬೆಳಿಗ್ಗೆ 10 ಗಂಟೆಗೆ ಯಾದಗಿರಿ ಜಿಲ್ಲಾ ಆಡಳಿತ ಭವನ ಆಡಿಟೋರಿಯಂ ಪಕ್ಕದಲ್ಲಿ ಸರ್ಕಾರದ ಈ ಆಶಯವನ್ನು ಬೆಂಬಲಿಸಲು ಮತ್ತು ನೌಕರರಿಗೆ ಅನುಕೂಲ ಮಾಡಿಕೊಡಲು ಯಾದಗಿರಿ ಜಿಲ್ಲಾ ಆಡಳಿತ ಭವನದಲ್ಲಿ ವಿಶೇಷ ಮಾರಾಟ ವ್ಯವಸ್ಥೆ ಮಾಡಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕ್ಯಾನ್ಸರ್ ಲಕ್ಷಣ ಕಂಡುಬಂದಲ್ಲಿ ಸಮೀಪದ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ:ಡಾ.ಕಿರಣ ಪಾಟೀಲ್

ಬೀದರ, ಫೆ.06

ಪ್ರತಿ ವರ್ಷ ಭಾರತದಾದ್ಯಂತ 14-15 ಲಕ್ಷ ಕ್ಯಾನ್ಸರ್‌ನ ಹೊಸ ಪ್ರಕರಣಗಳು ವರದಿಯಾಗುತ್ತಿದ್ದು 8-9 ಲಕ್ಷ ಸಾವುಗಳು ಸಂಭವಿಸುತ್ತಿವೆ.ಆದ್ದರಿಂದ ಯಾವುದೆ ತರಹದ ಕ್ಯಾನ್ಸರ್ ಲಕ್ಷಣಗಳು ಕಂಡುಬಂದಲ್ಲಿ ಜನರು ತಮ್ಮ ಸಮೀಪದ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ಪರೀಕ್ಷಿಸಿ ಕೊಳ್ಳಬೇಕೆಂದು ಜಿಲ್ಲಾ ಅಸಾಂಕ್ರಮಿಕ ರೋಗಗಳ ನಿಯಂತ್ರಣಾಧಿಕಾರಿ ಕಿರಣ್ ಪಾಟೀಲ್ ತಿಳಿಸಿದರು.

ಅವರು ಶುಕ್ರವಾರ ವಿಶ್ವ ಕ್ಯಾನ್ಸರ್ ದಿನಾಚರಣೆ 2026ರ ಪ್ರಯುಕ್ತ ಜಿಲ್ಲಾ ಎನ್.ಸಿ.ಡಿ. ಕೋಶ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬೀದರ ವತಿಯಿಂದ ಜನರಲ್ಲಿ ಕ್ಯಾನ್ಸರ ಕುರಿತು ಅರಿವು ಮೂಡಿಸುವ ಬೃಹತ್ ಜಾಥವನ್ನು ಉದ್ಘಾಟಿಸಿ ಹಸಿರು ಧ್ವಜ ತೋರಿಸುವ ಮೂಲಕ ಜಾಗೃತಿ ಅಭಿಯಾನಕ್ಕೆ ಚಾಲನೆ ನೀಡಿದರು.

ಈ ವರ್ಷವು ಕ್ಯಾನ್ಸರ್ ದಿನಾಚರಣೆಯನ್ನು ಜನರಲ್ಲಿ ಕ್ಯಾನ್ಸರ್ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಹಮ್ಮಿಕೊಳ್ಳಲಾಗಿದ್ದು, ಈ ವರ್ಷದ ಘೋಷವಾಕ್ಯ ''ವಿಶಿಷ್ಟತೆಯಿಂದ ಏಕತೆ'' ಆಗಿದೆ. ಜನರಲ್ಲಿ ಕ್ಯಾನ್ಸರ್ ಕುರಿತ ರೋಗ ಕಾರಣಗಳು, ಲಕ್ಷಣಗಳು, ತಪಾಸಣೆ ಹಾಗೂ ಆರೈಕೆ ಕುರಿತ ಅರಿವು ಬಹುಮುಖ್ಯವಾಗಿದೆ ಎಂದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಶಂಕ್ರೆಪ್ಪಾ ಬೊಮ್ಮಾ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಕ್ಯಾನ್ಸರ್ ರೋಗ ಗಳ ಪ್ರಮಾಣವು ಜಗತ್ತಿನಾದ್ಯಾಂತ ಅತಿ ತೀವ್ರವಾಗಿ ಹೆಚ್ಚುತ್ತಿದೆ, ಆದ್ದ ರಿಂದ ಜನರಲ್ಲಿ ಭಯದ ಬದಲು ರೋಗದ ಅರಿವು ತುಂಬಾ ಮುಖ್ಯ ವಾಗಿದ್ದು, ಇದಕ್ಕೆ ಪ್ರಮುಖವಾಗಿ ತಂಬಾಕು ಪದಾರ್ಥಗಳ ಸೇವನೆ, ಅನಾರೋಗ್ಯಕರ ಜೀವನ ಶೈಲಿ, ಅಧಿಕ ತೂಕ ಮತ್ತು ಮಧ್ಯಪಾನ ಸೇವನೆ ಆದಿ ಮುಖ್ಯ ಕಾರಣಗಳಾಗಿದ್ದು. ಪುರುಷರಲ್ಲಿ ಪ್ರಮುಖವಾಗಿ ಬಾಯಿ, ಗಂಟಲು, ಶ್ವಾಸಕೋಶ, ಜಠರ ಮತ್ತು ಅನ್ನನಾಳದ ಕ್ಯಾನ್ಸರಗಳು ಹಾಗೂ ಮಹಿಳೆಯರಲ್ಲಿ ಅಧಿಕವಾಗಿ ಸ್ತನ ಮತ್ತು ಗರ್ಭಕಂಠವು ಕ್ಯಾನ್ಸರನ ಪ್ರಮುಖ ತಾಣಗಳಾಗಿವೆ. ಜನರು ಆರೋಗ್ಯಕರ ಜೀವನ ಶೈಲಿಯನ್ನು ಅನುಸರಿಸಬೇಕು. ಜೊತೆಗೆ 30 ವರ್ಷ ಮೇಲ್ಪಟ್ಟವರು ಪ್ರತಿ 5 ವರ್ಷಕ್ಕೊಮ್ಮೆ ಪುರುಷರು ಬಾಯಿ ಕ್ಯಾನ್ಸರ್ ಹಾಗೂ ಮಹಿಳೆಯು ಸ್ತನ ಮತ್ತು ಗರ್ಭ ಕಂಠದ ಕ್ಯಾನ್ಸರ್‌ಗಳ ಪೂರ್ವಭಾವಿ ತಪಾಸಣೆಯನ್ನು ಸರ್ಕಾರಿ ಆಸ್ಪತ್ರೆ ಗಳಲ್ಲಿ ಮಾಡಿಸಿಕೊಳ್ಳಬೇಕು, ಕ್ಯಾನ್ಸರ್ ರೋಗವನ್ನು ಆರಂಭಿಕ ಹಂತದಲ್ಲಿ ಪತ್ತೆ ಹಚ್ಚಿದಲ್ಲಿ ಪರಿಣಾಮಕಾರಿ ಚಿಕಿತ್ಸೆಯನ್ನು ನೀಡಬಹುದೆಂದು ತಿಳಿಸಿದರು. ನಗರದ ವಿವಿಧ ಮಾರ್ಗವಾಗಿ ಸಂಚರಿಸಿದ ಜಾಥಾ:ಈ ಜಾಗೃತಿ ಅಭಿಯಾನ ಇಂಡಿಯನ್ ಕ್ಯಾನ್ಸರ್ ಸೊಸೈಟಿ (ಕರ್ನಾಟಕ) ಪ್ರಾದೇಶಿಕ ಕಚೇರಿ ಕಲಬುರಗಿ ಸಹಯೋಗ ದೊಂದಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಬೀದರನಿಂದ ಪ್ರಾರಂಭವಾಗಿ ಜನವಾಡ ರಸ್ತೆ ಮಾರ್ಗವಾಗಿ ಅಂಬೇಡ್ಕರ್ ವೃತ್ತದ ಮೂಲಕ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯಲ್ಲಿ ಮುಕ್ತಾ ಯಗೊಳಿಸ ಲಾಯಿತು. ಜಾಥದು ದ್ದಕ್ಕೂ ಕ್ಯಾನ್ಸರ್ ಕುರಿತು ಅರಿವು ಮೂಡಿಸುವ ಫಲಕಗಳು, ಘೋಷ ಣೆಗಳು ಹಾಗೂ ಧ್ವನಿವರ್ಧಕಗಳ ಮೂಲಕ ಜನರಿಗೆ ಅರಿವು ಮೂಡಿಸ ಲಾಯಿತು.

ಸಾಹಿತಿ, ಹೋರಾಟಗಾರ ಶಿವರಾಯ ಅಕ್ಕರಕಿ ಸರ್ವಾಧ್ಯಕ್ಷತೆಯಲ್ಲಿ ಸಮ್ಮೇಳನ ಜರುಗಲಿದೆ - ಕರೆಮ್ಮ ಜಿ.ನಾಯಕ

ಹೋರಾಟಗಾರರಾಗಿರುವ ಶಿವರಾಯ ಅಕ್ಕರಕಿಯವರ ಸರ್ವಾಧ್ಯಕ್ಷತೆಯಲ್ಲಿ 2ನೇ ಚುಟುಕು ಸಾಹಿತ್ಯ ಸಮ್ಮೇಳನ ಜರುಗಲಿದೆ.

ಸಾಹಿತ್ಯ ಕ್ಷೇತ್ರವೂ ಅಭಿವೃದ್ಧಿ ಮೇಲೆ ಪರಿಣಾಮ ಬೀರುತ್ತದೆ. ಸ್ಥಳೀಯ ಕವಿಗಳಿಗೆ, ಸಾಹಿತಿಗಳಿಗೆ ಹೆಚ್ಚು ಆದ್ಯತೆ ನೀಡಬೇಕು. ವಿದ್ಯಾರ್ಥಿಗಳಲ್ಲಿ ಅಧ್ಯಯನಶೀಲತೆ ಹೆಚ್ಚಾಗಲಿದೆ. ಸಮ್ಮೇಳನದಲ್ಲಿ ಸಾಹಿತ್ಯದ ಚರ್ಚೆಯ ಜೊತೆಗೆ ರೈತರ ಜೀವನಾಡಿಯಾಗಿರುವ ನಾರಾಯಣಪೂರ ಬಲದಂಡೆ ನಾಲೆ ನೀರಾವರಿ ಸೌಲಭ್ಯಗಳ ಮತ್ತು ಸಮಸ್ಯೆಗಳ ಕುರಿತು ವಿಷಯ ಮಂಡನೆಯಾಗಲಿದೆ.

ಕವಿಗೋಷ್ಠಿ, ಸಾಧಕರಿಗೆ ಸನ್ಮಾನ, ಸಾಂಸ್ಕೃತಿಕ ಕಾರ್ಯಕ್ರಗಳು ಸೇರಿದಂತೆ ಅನೇಕ ಉಪಯುಕ್ತ ವಿಷಯಗಳ ಕುರಿತಾಗಿ ಸಮ್ಮೇಳನದಲ್ಲಿ ಗಮನಸೆಳೆಯಲಿವೆ. ಕಾರಣ ಕ್ಷೇತ್ರದ ಎಲ್ಲಾ ಯುವಕರು, ವಿದ್ಯಾರ್ಥಿಗಳು, ಸಾಹಿತಿಗಳು, ಪ್ರಗತಿಪರ ಚಿಂತಕರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಪಾಲ್ಗೊಂಡು ಸಮ್ಮೇಳನವನ್ನು ಯಶಸ್ವಿಗೊಳಿಸಬೇಕೆಂದು ಸಮ್ಮೇಳನದ ಸ್ವಾಗತ ಸಮಿತಿ ಅಧ್ಯಕ್ಷೆ ಹಾಗೂ ಶಾಸಕಿ ಕರೆಮ್ಮ ಜಿ.ನಾಯಕ ಕರೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತು ಅಧ್ಯಕ್ಷ ನರಸಿಂಗರಾವ್ ಸರಕೀಲ್, ಪ್ರಧಾನ ಕಾರ್ಯದರ್ಶಿ ಬಸವರಾಜ ಬ್ಯಾಗವಾಟ, ತಾಲೂಕು ಘಟಕ ಅಧ್ಯಕ್ಷ ಪ್ರಕಾಶ ಪಾಟೀಲ್ ಅಮರಾಪೂರ, ಪ್ರಧಾನ ಕಾರ್ಯದರ್ಶಿ ಹನುಮಂತ ಅಂಚೆಸೂಗೂರ, ಕಚೇರಿ ಕಾರ್ಯದರ್ಶಿ ಗುರುನಾಥ ಇಂಗಳದಾಳ, ಮುಖಂಡರಾದ ಮಂಜುನಾಥ ಮಾತ್ಪಳ್ಳಿ, ಪ್ರಭು ದೊರೆ, ರಂಗಣ್ಣ ಬೊಮ್ಮನಹಳ್ಳಿ, ರಂಗನಾಥ ಜಾಲಹಳ್ಳಿ ಸೇರಿದಂತೆ ಮತ್ತಿತರರಿದ್ದರು.

ರಾಜೇಶ್ ಕೃಷ್ಣನ್ ಹಾಡಿಗೆ ಮನಸೋತ ಯುವಜನತೆ

ವ್ಯವಸ್ಥೆ ಕಾರ್ಯಕ್ರಮಕ್ಕೆ ಇನ್ನಷ್ಟು ಮೆರುಗು ನೀಡಿತು. ಪ್ರತಿಯೊಂದು ಹಾಡಿನ ಮಧ್ಯೆ ಪ್ರೇಕ್ಷಕರೊಂದಿಗೆ ಸಂವಾದ ನಡೆಸಿದ ಗಾಯಕನ ಸರಳತೆ ಮತ್ತು ಉತ್ಸಾಹ ಎಲ್ಲರ ಮನಗೆದ್ದಿತು.

ಮಕ್ಕಳು, ಮಹಿಳೆಯರು ಹಾಗೂ ಹಿರಿಯರು ಸೇರಿದಂತೆ ಎಲ್ಲ ವಯೋಮಾನದ ಪ್ರೇಕ್ಷಕರು ಸಂಗೀತ ರಸಾಸ್ವಾದದಲ್ಲಿ ತಲ್ಲೀನರಾಗಿದ್ದು, ಕೆಲವರು ಕೈತಟ್ಟಿ ಸಂಭ್ರಮಿಸಿದರೆ, ಇನ್ನೂ ಕೆಲವರು ಮೊಬೈಲ್‌ನಲ್ಲಿ ದೃಶ್ಯಗಳನ್ನು ಸೆರೆಹಿಡಿಯುವ ದೃಶ್ಯ ಕಂಡುಬಂತು. ಕಾರ್ಯಕ್ರಮದ ಅಂತ್ಯದಲ್ಲಿ ಜನಪ್ರಿಯ ಗೀತೆಗಳಿಗೆ ವೇದಿಕೆಯ ಮುಂದೆ ಜನಸಾಗರವೇ ನೆರೆದಂತಾಯಿತು.

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾದ ಈ ಸಂಗೀತ ಕಾರ್ಯಕ್ರಮ ರಾಯಚೂರು ಉತ್ಸವದ ಪ್ರಮುಖ ಆಕರ್ಷಣೆಯಾಗಿ ಮೂಡಿಬಂತು. ರಾತ್ರಿ 11.30 ಗಂಟೆಯಾದರೂ ಜನಸಂದಣಿ ಕಿಕ್ಕಿರಿದಿದ್ದು, ಹೊರ ಹೋಗಲು ಸಾಧ್ಯವಾಗದೆ ಜನರು ಗೊಂದಲಕ್ಕೀಡಾದರು. ಕೃಷಿ ವಿಶ್ವವಿದ್ಯಾಲಯದ ಆವರಣದ ಮುಂದೆ ಟ್ರಾಫಿಕ್ ಜಾವ್ ಉಂಟಾಗಿದ್ದು, ಜನರನ್ನು ನಿಯಂತ್ರಿಸಲು ಪೊಲೀಸರು ಹಾಗೂ ಹೋಮ್‌ಗಾರ್ಡ್ ಸಿಬ್ಬಂದಿ ಹರಸಾಹಸ ಪಟ್ಟರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಜನಪ್ರತಿನಿಧಿಗಳ ಘನತೆ ಇಲ್ಲದ ಮಾತಿಗೆ ಲಗಾಮು ಬೀಳಬೇಕು



ವಿಧಾನಸಭೆಯಲ್ಲಿ ಬಿಜೆಪಿ ಶಾಸಕರು ಅಬಕಾರಿ ಸಚಿವರ ರಾಜೀನಾಮೆಗೆ ಒತ್ತಾಯಿಸಿ, ಬಾವಿಗಿಳಿದು ಕೂಗಾಟ ನಡೆಸುತ್ತಿದ್ದಾಗ ಅರಸೀಕೆರೆ ಶಾಸಕ ಶಿವಲಿಂಗೇಗೌಡ ಆಡಿದ ಮಾತು ಘನತೆ ಮೀರಿತ್ತು. ವಿರೋಧ ವ್ಯಕ್ತವಾಗುತ್ತಿದ್ದಂತೆ ಅವರು ಪತ್ರಿಕಾಗೋಷ್ಠಿ ಕರೆದು ವಿಷಾಧ ವ್ಯಕ್ತಪಡಿಸಿದ್ದರು. ಅಷ್ಟೇ ಅಲ್ಲ ವಿಧಾನ ಪರಿಷತ್ತಿನ ಸದಸ್ಯ ನಸೀರ್ ಅಹಮದ್ ಅವರು ಪ್ರಧಾನಿಯವರ ಕುರಿತು ದೇಶದ್ರೋಹಿ ಎಂಬ ಪದ ಬಳಕೆ ಮಾಡಿದ್ದಕ್ಕೆ ಅಷ್ಟೇ ಬೇಗ ವಿಷಾಧ ವ್ಯಕ್ತಪಡಿಸಿದ್ದಾರೆ. ಆದರೆ, ನಸೀರ್ ಬಗ್ಗೆ ಸಿ ಟಿ ರವಿ ನೀಡಿದ ಪಾಕಿಸ್ತಾನದ ನಾಲಗೆ ಎಂಬ ಹೇಳಿಕೆ ಬಗ್ಗೆ ಕ್ಷಮೆ ಕೇಳಲು ನಿರಾಕರಿಸಿದ್ದಾರೆ.

''ಕೆಟ್ಟು ಕೆರ ಹಿಡಿಯೋದು'' ಎಂಬ ಮಾತು ಇಂದಿನ ರಾಜಕಾರಣಿಗಳಿಗೆ ಸರಿ ಹೊಂದುವ ಪದ. ಇತ್ತೀಚಿನ ದಶಕಗಳಲ್ಲಿ ಗ್ರಾಮ ಪಂಚಾಯ್ತಿಯಿಂದ ಸಂಸತ್ತಿನವರೆಗೆ ಜನಪ್ರತಿನಿಧಿಗಳಾಗಿ ಆಯ್ಕೆಯಾಗುತ್ತಿರುವವರ ಸಾಮಾಜಿಕ, ವೈಯಕ್ತಿಕ ಹಿನ್ನೆಲೆಯೇ ಇದಕ್ಕೆಲ್ಲ ಕಾರಣ ಎಂದು ನಿಸ್ಸಂದೇಹವಾಗಿ ಹೇಳಬಹುದು. ಹಣ, ಜಾತಿ, ತೋಳ್ಬಲ ಇರುವ ಕ್ರಿಮಿನಲ್ ಹಿನ್ನೆಲೆಯ ರಾಜಕಾರಣಿಗಳು ಜನಪ್ರತಿನಿಧಿಗಳೆಂದು ಆಯ್ಕೆಯಾಗಿ ವಿಧಾನ ಮಂಡಲ, ಸಂಸತ್ತಿನಲ್ಲಿ ಮೆರೆಯುತ್ತಿದ್ದಾರೆ. ಅವರು ಬಳಸುವ ಪದಗಳು, ಅವರ ಅಸಂಸದೀಯ ನಡವಳಿಕೆಗಳು, ವಿರೋಧಿ ಪಕ್ಷದ ನಾಯಕರಿಗೆ ಘನತೆಯೇ ಇಲ್ಲ ಎಂಬಂತೆ ಮಾನಹಾನಿಕರ ಹೇಳಿಕೆ ನೀಡುವುದು, ಚರ್ಚೆಯನ್ನೇ ನಡೆಸದಂತೆ ದೊಂಬಿ ಎಬ್ಬಿಸುವುದು ಇದೆಲ್ಲವನ್ನೂ ಹೊರಗಿಂದ ನೋಡುವ ಸಾಮಾನ್ಯ ಜನರೂ ಜನಪ್ರತಿನಿಧಿಗಳ ಬಗ್ಗೆ ಗೌರವದ ಭಾವನೆ ಕಳೆಯುವಂತೆ ಮಾಡಿದೆ.

ರಾಜ್ಯದಲ್ಲಿ ಎರಡು ವಾರ ನಡೆದ ವಿಶೇಷ ಅಧಿವೇಶನ ಹಲವು ಅಪಸವ್ಯಗಳಿಗೆ ಕೆಟ್ಟ ಘಟನೆಗಳಿಗೆ ಕಾರಣವಾಗಿದೆ. ಮನರೇಗಾ ಕಾಯ್ದೆಯನ್ನು ತಿದ್ದುಪಡಿ ಮಾಡಿ ವಿಬಿ-ಜಿ-ರಾಮ್-ಜಿ ಕಾಯ್ದೆ ಎಂದು ಹೆಸರು ಬದಲಾಯಿಸಿದ ಮೋದಿ ಸರ್ಕಾರದ ವಿರುದ್ಧ ನಿರ್ಣಯ ಕೈಗೊಳ್ಳುವ ಸರ್ಕಾರದ ನಿರ್ಧಾರ ಈ ವಿಶೇಷ ಅಧಿವೇಶನ ಕರೆಯಲು ಕಾರಣವಾಗಿತ್ತು. ಆದರೆ ಜಂಟಿ ಅಧಿವೇಶನ ಉದ್ದೇಶಿಸಿ ರಾಜ್ಯಪಾಲರು ಸರ್ಕಾರದ ಭಾಷಣ ಓದದೇ ಎರಡು ಸಾಲು ಓದಿ ರಾಷ್ಟ್ರಗೀತೆಗೂ ನಿಲ್ಲದೇ ಹೊರಟು ಹೋಗಿದ್ದು, ಅವರು ಹೋಗುವಾಗ ಕಾಂಗ್ರೆಸ್ ಸದಸ್ಯರು ವಿರೋಧ ವ್ಯಕ್ತಪಡಿಸಿದ್ದು ವಿಪಕ್ಷಗಳಿಗೆ ದೊಂಬಿ ನಡೆಸಲು ಚರ್ಚೆಯ ಹಾದಿ ತಪ್ಪಿಸಲು ಕಾರಣವಾಯಿತು. ಒಂದು ವಾರ ರಾಜ್ಯಪಾಲರಿಗೆ ಅವಮಾನ ಎಂದು ಬಿಜೆಪಿಯವರು ಹೇಳಿದರೆ, ರಾಜ್ಯಪಾಲರಿಂದ ಸಂವಿಧಾನದ ನಿಯಮ ಉಲ್ಲಂಘನೆ ಎಂದು ಆಡಳಿತ- ಪ್ರತಿಪಕ್ಷ ವಾಕ್ಸಮರದಲ್ಲಿ ಮತ್ತೊಂದು ವಾರ ಕಳೆದು ಹೋಗಿತ್ತು. ಮತ್ತೆ ಎರಡು ದಿನ ಅಧಿವೇಶನ ಮುಂದುವರಿದು ಕೇಂದ್ರ ಸರ್ಕಾರದ ವಿಬಿ ಜಿ ರಾಮ್ ಜಿ ಕಾಯ್ದೆ ತಿರಸ್ಕರಿಸುವ ನಿರ್ಣಯದೊಂದಿದೆ ಬುಧವಾರ ಮುಕ್ತಾಯಗೊಂಡಿದೆ.

ವಿಶೇಷ ಅಧಿವೇಶನದಲ್ಲಿ ಕಾಯ್ದೆಯ ಬಗ್ಗೆ ಚರ್ಚೆ ನಡೆಯಲೇ ಇಲ್ಲ. ಚರ್ಚೆ ನಡೆಯಲೇ ಬಾರದು ಎಂದು ವಿಪಕ್ಷಗಳ ನಾಯಕರು ನಿರ್ಧಾರ ಮಾಡಿಕೊಂಡೇ ಬಂದಿದ್ದರು. ಮೊದಲ ವಾರ ರಾಜ್ಯಪಾಲರ ಪರ ವಿರೋಧಕ್ಕೆ ವ್ಯರ್ಥವಾದರೆ, ಎರಡನೇ ವಾರ ಅಧಿವೇಶನದ ಸಮಯದಲ್ಲಿಯೇ ಬಯಲಾದ ಅಬಕಾರಿ ಇಲಾಖೆಯ ಬ್ರಹ್ಮಾಂಡ ಭ್ರಷ್ಟಾಚಾರದ ವಿಚಾರ ವಿಪಕ್ಷಗಳ ಅಹೋರಾತ್ರಿ ಧರಣಿಗೆ ಕಾರಣವಾಯಿತು. ವಿಶೇಷ ಅಧಿವೇಶನ ಪ್ರಜಾಪ್ರಭುತ್ವದ ದೇವಾಲಯ ಎಂದು ಕರೆಸಿಕೊಳ್ಳುವ ವಿಧಾನಮಂಡಲ ಕೊಳಕು ಮಾತುಗಳಿಂದ ಸುದ್ದಿಯಾಯಿತು.

ವಿಧಾನಸಭೆಯಲ್ಲಿ ಬಿಜೆಪಿ ಶಾಸಕರು ಅಬಕಾರಿ ಸಚಿವರ ರಾಜೀನಾಮೆಗೆ ಒತ್ತಾಯಿಸಿ, ಬಾವಿಗಿಳಿದು ಕೂಗಾಟ ನಡೆಸುತ್ತಿದ್ದಾಗ ಅರಸೀಕೆರೆ ಶಾಸಕ ಶಿವಲಿಂಗೇಗೌಡ ಆಡಿದ ಮಾತು ಘನತೆ ಮೀರಿತ್ತು. ಸಹ ಶಾಸಕರೊಬ್ಬರನ್ನು ಉದ್ದೇಶಿಸಿ ಅವರ ಪತ್ನಿಯ ಚಾರಿತ್ರ್ಯದ ಬಗ್ಗೆ ವೈಯಕ್ತಿಕ ನಿಂದನೆ ಮಾಡಿರುವುದು, ಕೂಗಾಡಿದ ರೀತಿ ಸಭಾ ಮರ್ಯಾದೆ ಕಳೆಯುವಂಥದ್ದು. ಆದರೆ, ವಿರೋಧ ವ್ಯಕ್ತವಾಗುತ್ತಿದ್ದಂತೆ ಅವರು ಮರುದಿನ ಪತ್ರಿಕಾಗೋಷ್ಠಿ ಕರೆದು ವಿಷಾಧ ವ್ಯಕ್ತಪಡಿಸಿದ್ದರು. ಅಷ್ಟೇ ಅಲ್ಲ ವಿಧಾನ ಪರಿಷತ್ತಿನ ಸದಸ್ಯ ನಸೀರ್ ಅಹಮದ್ ಅವರು ಪ್ರಧಾನಿಯವರ ಕುರಿತು ದೇಶದ್ರೋಹಿ ಎಂಬ ಪದ ಬಳಕೆ ಮಾಡಿದ್ದಕ್ಕೆ ಅಷ್ಟೇ ಬೇಗ ವಿಷಾಧ ವ್ಯಕ್ತಪಡಿಸಿದ್ದಾರೆ. ಆದರೆ, ನಸೀರ್ ಬಗ್ಗೆ ಸಿ ಟಿ ರವಿ ಪಾಕಿಸ್ತಾನದ ನಾಲಗೆ ಎಂಬ ಹೇಳಿಕೆ ನೀಡಿರುವುದರ ಬಗ್ಗೆ ಕ್ಷಮೆ ಕೇಳಲು ನಿರಾಕರಿಸಿದ್ದಾರೆ. ಒಂದು ದಿನದ ಮಟ್ಟಿಗೆ ಅವರನ್ನು ಅಮಾನತು ಮಾಡುವಾಗ ಅಧಿವೇಶನ ಮುಗಿದೇ ಹೋಗಿತ್ತು. ಇಂಥವರಿಗೆ ಸಕಾಲದಲ್ಲಿ ಶಿಕ್ಷೆ ಆಗದಿರುವ ಕಾರಣ ಪದೇ ಪದೇ ಅದೇ ಚಾಳಿಯನ್ನು ಮುಂದುವರಿಸುತ್ತಿದ್ದಾರೆ. ಬಿಜೆಪಿಯವರು ಸದಾ ಮುಸ್ಲಿಂ ಶಾಸಕರನ್ನು ಪಾಕಿಸ್ತಾನದ ಬೆಂಬಲಿಗರು ಎಂದು ಸದನದೊಳಗೇ ನಿಂದಿಸುತ್ತಲೇ ಬಂದಿದ್ದಾರೆ. ಮತ್ತೆ ಅಂತಹ ಮಾತುಗಳಿಗೆ ಸಮರ್ಥನೆಯನ್ನೂ ನೀಡುತ್ತಾರೆ.

ಹಾಗಂತ ಇದು ಮೊದಲ ಪ್ರಕರಣವೇನಲ್ಲ. ಕಳೆದ ವರ್ಷ ಬೆಳಗಾವಿಯ ಅಧಿವೇಶನದ ಕೊನೆಯ ದಿನ ಕಲಾಪ ಮುಗಿಯುತ್ತಿದ್ದಂತೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮತ್ತು ಎಂಎಲ್‌ಸಿ ಸಿ ಟಿ ರವಿ ನಡುವೆ ನಡೆದ ಬಿರುಸಿನ ಮಾತುಕತೆಯ ಮಧ್ಯೆ ಸಿ ಟಿ ರವಿ ಬಳಸಿದ ಪದ ಮತ್ತು ಪರಿಷತ್ತಿನ ಸಭಾಪತಿ ಹೊರಟ್ಟಿ ಸಾಹೇಬರು ಈ ಪ್ರಕರಣದಲ್ಲಿ ಆತನ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದಿರುವುದು; ಒಟ್ಟಾಗಿ ರಾಜಕಾರಣಿಗಳ ಘನತೆ ಮಾತ್ರವಲ್ಲ, ಇಡೀ ವ್ಯವಸ್ಥೆಯ ಬಗ್ಗೆ ರೇಜಿಗೆ ಹುಟ್ಟಿಸುವಂತಿದೆ.

ವಿಶೇಷ ಅಧಿವೇಶನದ ಕೊನೆಯ ದಿನ ಖುದ್ದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಅತ್ಯಂತ ಹಿರಿಯ ಸದಸ್ಯೆ, ಮಾಜಿ ಸಚಿವೆ, ಖ್ಯಾತ ಕಲಾವಿದೆ ಉಮಾಶ್ರೀ ಅವರ ಬಗ್ಗೆ ಕೇವಲವಾಗಿ ಏಕವಚನದಲ್ಲಿ ಮಾತನಾಡಿರುವುದು ಕೂಡ ಮಹಿಳೆಯರ ಬಗ್ಗೆ ಇರುವ ಪುರುಷಹಂಕಾರದ ಮಾದರಿಯಾಗಿದೆ.

ವಿಧಾನಸೌಧದ ಒಳಗೂ ಹೊರಗೂ ನಾಲಿಗೆ ಹರಿಬಿಡುವ ಜನಪ್ರತಿನಿಧಿಗಳಿಗೆ ಸಭ್ಯತೆಯ ಪಾಠ ಮಾಡೋರು ಯಾರು ಎಂಬುದು ಯಕ್ಷಪ್ರಶ್ನೆ. ಐಎಎಸ್ ಐಪಿಎಸ್ ಅಧಿಕಾರಿಗಳನ್ನು ಏಕವಚನದಲ್ಲಿ ಮಾತನಾಡಿಸುವುದು, ನಿಯಮ ಮೀರಿ ತಮ್ಮ ಅಕ್ರಮಗಳಿಗೆ ಸಹಕರಿಸದಿದ್ದರೆ ಬೆದರಿಕೆಯೊಡ್ಡುವ ರೀತಿಯಲ್ಲಿ ಜನಪ್ರತಿನಿಧಿಗಳ ವರ್ತನೆ ಇವೆಲ್ಲದಕ್ಕೂ ಕಡಿವಾಣ ಬೀಳಬೇಕಿದೆ. ಸಾರ್ವಜನಿಕ ಸಭ್ಯತೆ ಎಂಬುದು ರಾಜಕಾರಣಿಗಳಿಗೆ ಎಷ್ಟು ಮುಖ್ಯ ಎಂಬ ಅರಿವು ಇದ್ದಂತಿಲ್ಲ.

ನಿನ್ನೆ ಪ್ರಧಾನಿ ಮೋದಿಯವರು ಕಾಂಗ್ರೆಸ್ ನವರೆಲ್ಲ ಕಳ್ಳರು ಎಂದು ರಾಜ್ಯಸಭೆಯಲ್ಲಿ ಹೇಳಿದ್ದಾರೆ. ಗುಜರಾತಿನ ಗಾಂಧಿಯ ಹೆಸರನ್ನೂ ನೆಹರೂ ಕುಟುಂಬ ಕದ್ದಿದೆ ಎಂದು ಹೇಳಿದ್ದಾರೆ. ಸದಾ ನೆಹರು, ಇಂದಿರಾ ಅವರನ್ನು ಟೀಕಿಸುವ ಚಾಳಿ ಪ್ರಧಾನಿ ಮೋದಿಯವರಿಗಿದೆ. ಲೋಕಸಭೆಯಲ್ಲಿ ಬುಧವಾರ ಮೋದಿಯವರ ಆಸನದ ಬಳಿ ಮಹಿಳಾ ಸಂಸದರು ಪ್ರತಿಭಟನೆ ಮಾಡಿದ್ದನ್ನೇ ಹಲ್ಲೆಗೆ ಯತ್ನ ಎಂದು ಸ್ವತಃ ಸ್ಪೀಕರ್ ಓಂ ಬಿರ್ಲಾ ಅವರೇ ಸುಳ್ಳು ಹೇಳಿದ್ದಾರೆ. ಗುರುವಾರ ರಾಷ್ಟ್ರಪತಿ ಭಾಷಣದ ವಂದನಾ ನಿರ್ಣಯ ಭಾಷಣ ಪ್ರಧಾನಿ ಮೋದಿಯವರು ಮಾಡಬೇಕಿತ್ತು. ಆದರೆ ಅವರು ಲೋಕಸಭೆಗೆ ಗೈರಾಗಿದ್ದರು. ''ನಾನೇ ಪ್ರಧಾನಿಯವರಿಗೆ ಸಂಸತ್ತಿಗೆ ಬರುವುದು ಬೇಡ ಅಂತ ತಿಳಿಸಿದೆ. ಅವರ ಮೇಲೆ ಹಲ್ಲೆಗೆ ಯತ್ನ ನಡೆಯುವ ಸಾಧ್ಯತೆ ಇತ್ತು'' ಎಂದು ಸ್ಪೀಕರ್ ಓಂ ಬಿರ್ಲಾ ಸಂಸತ್ತಿಗೆ ತಿಳಿಸಿದ್ದಾರೆ. ಆದರೆ, ಪ್ರಧಾನಿ ರಾಜ್ಯಸಭೆಯಲ್ಲಿ ಭಾಷಣ ಮಾಡಿದ್ದಾರೆ. ಅದು ರಾಷ್ಟ್ರಪತಿಯ ಭಾಷಣದ ಬಗ್ಗೆ ಆಗಿರಲಿಲ್ಲ. ನೂರು ನಿಮಿಷದ ಭಾಷಣ ಕೇವಲ ಕಾಂಗ್ರೆಸ್ ಟೀಕೆಗೆ ಮೀಸಲಾಗಿತ್ತು. ಇದೇ ಬಿಜೆಪಿಯವರು ತಾವು ಸೋಲುವ ರಾಜ್ಯಗಳಲ್ಲಿ ವಿಪಕ್ಷಗಳ ಕಡು ಭ್ರಷ್ಟರನ್ನೆಲ್ಲ ಕರೆ ತಂದು ಸ್ವಚ್ಛ ಮಾಡುತ್ತಿರುವುದು ಪ್ರಧಾನಿಗಳ ಅರಿವಿನಲ್ಲಿ ಇಲ್ಲವೇ? ಎಲ್ಲಾ ಪಕ್ಷಗಳ ಕಳ್ಳರನ್ನು ತಮ್ಮ ಪಕ್ಷಕ್ಕೆ ಸೇರಿಸಿಕೊಂಡಿದ್ದು ಯಾವ ನಡವಳಿಕೆ?

ಮೋದಿಯವರು ಯಾವುದೇ ಸಂದರ್ಭದಲ್ಲಿ ಭಾಷಣ ಮಾಡಿದರೂ ಅವರಿಗೆ ನೆಹರು ಕಾಡುತ್ತಾರೆ. ಕಾಂಗ್ರೆಸ್ ಅರವತ್ತು ವರ್ಷಗಳಲ್ಲಿ ದೇಶವನ್ನು ಲೂಟಿ ಹೊಡೆದಿದೆ ಎಂದು ಹೇಳುವುದು ಸಾಮಾನ್ಯ ಕಾರ್ಯಕರ್ತನಿಂದ ಮೋದಿಯವರವರೆಗೆ ಎಲ್ಲರಿಗೂ ಅಂಟಿದ ಚಾಳಿ. ಬ್ರಿಟಿಷರು ಖಾಲಿ ನೆಲ ಬಿಟ್ಟು ಹೋದಾಗ ನೆಹರು ಪ್ರಧಾನಿಯಾದರು. ಆ ನಂತರ ದೇಶದ ಇಂದಿನ ಬೆಳವಣಿಗೆಗೆ ಅವರು ಆಗ ಹಾಕಿದ ಬುನಾದಿಯೇ ಕಾರಣ. ಆದರೆ ಸದಾ ಕಾಂಗ್ರೆಸ್ ಏನೂ ಮಾಡಿಲ್ಲ ಎಂಬ ಸುಳ್ಳು ಹರಡುತ್ತಾರೆ. ಮೋದಿಯವರು ಹನ್ನೆರಡು ವರ್ಷಗಳಿಂದ ಪ್ರಧಾನಿಯಾಗಿದ್ದಾರೆ. ಅವರು ಆ ಸ್ಥಾನಕ್ಕೇರುವಾಗ ದೇಶದಲ್ಲಿ ಏನೇನಿತ್ತು ಅದರಲ್ಲಿ ಬಹುಪಾಲು ಕಾಂಗ್ರೆಸ್ ಕೊಡುಗೆ ಅಲ್ಲವೇ ಎಂದು ಯೋಚಿಸಬೇಕಿದೆ. ನೆಹರು ಕಟ್ಟಿದ ಸಂಸ್ಥೆಗಳ ಒಂದಂಶವನ್ನೂ ಮೋದಿಯವರು ಕಟ್ಟಿಲ್ಲ. ಕಾಂಗ್ರೆಸ್ ಯೋಜನೆಗಳಿಗೆ ಹೆಸರು ಬದಲಾಯಿಸಿದ್ದೇ ಅವರ ಸಾಧನೆ.

ದೇಶದ ಪ್ರಧಾನಿಯಾಗಿ ಎಲ್ಲರನ್ನೂ ಒಂದೇ ಭಾವನೆಯಲ್ಲಿ ನೋಡಬೇಕಿರುವ ಮೋದಿಯವರು ಚುನಾವಣೆಯ ಸಮಯದಲ್ಲಿ ತಮ್ಮ ಸ್ಥಾನದ ಘನತೆ ಮೀರಿ ದ್ವೇಷ ಭಾಷಣ ಮಾಡುವುದರಲ್ಲಿ ಮುಂಚೂಣಿಯಲ್ಲಿರುತ್ತಾರೆ. ಲೋಕಸಭಾ ಚುನಾವಣೆಯ ಪ್ರಚಾರ ಭಾಷಣದಲ್ಲಿ ''ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಈ ದೇಶದ ಸಂಪತ್ತನ್ನು ಹೆಚ್ಚು ಮಕ್ಕಳಿರುವವರಿಗೆ ಹಂಚುತ್ತಾರೆ'' ಎಂದು ತೀರಾ ಕೆಳ ಮಟ್ಟಕ್ಕಿಳಿದು ಟೀಕಿಸಿದ್ದರು. ಬಿಜೆಪಿಗರಿಗೆ ಇಂದಿರಾ ಕುಟುಂಬಕ್ಕೆ ಗಾಂಧಿ ಉಪನಾಮ ಇರುವುದೇ ದೊಡ್ಡ ಸಂಕಟ. ಆ ಕುಟುಂಬವನ್ನು ಸಂಸತ್ತಿನ ಒಳಗೂ ಹೊರಗೂ ಹೀನಾಮಾನ ಟೀಕೆ ಮಾಡಲಾಗುತ್ತಿದೆ. ದ್ವೇಷ ಭಾಷಣ, ವಿಪಕ್ಷಗಳನ್ನು ನಿಂದಿಸುವ ಮೇಲ್ಪಂಕ್ತಿ ಹಾಕಿಕೊಟ್ಟವರು ಪ್ರಧಾನಿ ಮೋದಿ. ಅವರ ಅನುಯಾಯಿಗಳು ಅದನ್ನು ದೇಶದೆಲ್ಲೆಡೆ ಹರಡುತ್ತಿದ್ದಾರೆ. ಅವರ ಪ್ರಚೋದನೆ ಅನ್ಯರಿಗೂ ಪ್ರೇರಣೆ ನೀಡುತ್ತಿದೆ. ಒಟ್ಟಿನಲ್ಲಿ ಜನಪ್ರತಿನಿಧಿಗಳ ಭಾಷೆಗೆ ಯಾವುದೇ ಲಗಾಮು ಇಲ್ಲದಂತಾಗಿದೆ.

ದೇಶ, ರಾಜ್ಯದ ಜ್ವಲಂತ ಸಮಸ್ಯೆಗಳ ಬಗ್ಗೆ ಗಂಭೀರವಾಗಿ ಚರ್ಚೆ ನಡೆದು ಜನರ ಹಿತಕ್ಕೆ ಪೂರಕವಾಗಿ ನೀತಿ ನಿರೂಪಣೆಗಳನ್ನು ಜಾರಿ ಮಾಡಬೇಕಿರುವ ಪ್ರಜಾಪ್ರಭುತ್ವದ ಪ್ರಮುಖ ಸಂಸ್ಥೆಗಳು ಸ್ವಾರ್ಥ, ಅಧಿಕಾರದಾಹಿಗಳ ಕೈವಶವಾಗಿ ತಾವು ಮಾಡಿದ್ದೇ ಶಾಸನ ಎಂಬಂತಾಗಿದೆ. ಪರಸ್ಪರ ಘನತೆ ಗೌರವದ ನಡವಳಿಕೆಗಳು ರಾಜಕಾರಣಿಗಳಲ್ಲಿ ಮರೆಯಾಗುತ್ತಿರುವುದು ಅಪೇಕ್ಷಣೀಯವಲ್ಲ. ಎಲ್ಲಾ ಪಕ್ಷಗಳಲ್ಲಿ, ಸರ್ಕಾರಗಳಲ್ಲಿ ಭ್ರಷ್ಟರು, ಅತ್ಯಾಚಾರಿಗಳು, ಕೊಲೆ ಪಾತಕಿಗಳು, ಅನಕ್ಷರಸ್ಥರು, ರೌಡಿಗಳು ತುಂಬಿದ್ದಾರೆ. ಅವರದಿಂದ ಆಳಿಸಿಕೊಳ್ಳುವ ದುರಂತ ಸ್ಥಿತಿ ದೇಶವಾಸಿಗಳದ್ದು. ಇದನ್ನು ಸ್ವಚ್ಛ ಮಾಡುವವರು ಯಾರು ಎಂಬುದೇ ಸದ್ಯದ ಬಹುದೊಡ್ಡ ಪ್ರಶ್ನೆ.

ಗಮನ ಸೆಳೆಯುತ್ತಿರುವ ರಾಜ್ಯಪಾಲರು; ಬಿಜೆಪಿ ಕೈಗೊಂಬೆಯಾಯಿತೇ ಪ್ರಮುಖ ಹುದ್ದೆ!



ಗುರುವಾರ (ಜ.5), ಪಶ್ಚಿಮ ಬಂಗಾಳ ಬಜೆಟ್ ಅಧಿವೇಶನದಲ್ಲಿ ಸದನವನ್ನು ಉದ್ದೇಶಿಸಿ ಸುಮಾರು ನಾಲ್ಕೂವರೆ ನಿಮಿಷಗಳ ಕಾಲ ಲಿಖಿತ ಭಾಷಣವನ್ನು ಓದಿದ ರಾಜ್ಯಪಾಲ ಸಿ.ವಿ. ಆನಂದ ಬೋಸ್ ಅವರು ಭಾಷಣವನ್ನು ಹಠಾತ್ತನೆ ನಿಲ್ಲಿಸಿ, ಸದನದಿಂದ ಹೊರನಡೆದರು. ತಮಿಳುನಾಡು, ಕೇರಳ ಮತ್ತು ಕರ್ನಾಟಕದ ರಾಜ್ಯಪಾಲರು ತೋರಿದ ಪ್ರವೃತ್ತಿಯನ್ನೇ ಬಂಗಾಳದ ರಾಜ್ಯಪಾಲರು ಕೂಡ ಮೆರೆದಿದ್ದಾರೆ. ಬಿಜೆಪಿಯೇತರ ಸರ್ಕಾರಗಳು ಅಧಿಕಾರದಲ್ಲಿರುವ ರಾಜ್ಯಗಳಲ್ಲಿ ರಾಜ್ಯಪಾಲರ ಧೋರಣೆಗಳು ಹೊಸ ಚಹರೆಯನ್ನು ಹುಟ್ಟುಹಾಕಿವೆ. ಸದನದಲ್ಲಿ ಸರ್ಕಾರವು ಕೊಟ್ಟ ಭಾಷಣವನ್ನು ಓದಲು ತಿರಸ್ಕರಿಸುವುದು, ಸರ್ಕಾರಗಳ ನೀತಿ-ನಿರೂಪಣೆಯ ಅಧಿಕಾರವನ್ನು ನಿರ್ಬಂಧಿಸುವ ಪ್ರವೃತ್ತಿ ಹೆಚ್ಚಾಗಿದೆ.

ಸಂವಿಧಾನದ 176ನೇ ವಿಧಿಯು ಶಾಸಕಾಂಗ ಸಭೆಗೆ ನಡೆವ ಸಾರ್ವತ್ರಿಕ ಚುನಾವಣೆಯ ನಂತರದ ಮೊದಲ ಅಧಿವೇಶನ ಮತ್ತು ಪ್ರತಿ ವರ್ಷದ ಮೊದಲ ಅಧಿವೇಶನದ ಆರಂಭದಲ್ಲಿ, ರಾಜ್ಯಪಾಲರು ವಿಧಾನಸಭೆಯನ್ನು, ವಿಧಾನ ಪರಿಷತ್ ಅನ್ನು ಹೊಂದಿದ್ದರೆ ಎರಡೂ ಸದನಗಳನ್ನು ಉದ್ದೇಶಿಸಿ ಮಾತನಾಡಬೇಕು ಎಂದು ಹೇಳುತ್ತದೆ.

ಆದರೆ, ಕೇರಳ ರಾಜ್ಯಪಾಲರು ಭಾಷಣ ಮಾಡುವುದಕ್ಕೇ ನಿರಾಕರಿಸಿದರು, ತಮಿಳುನಾಡು ಮತ್ತು ಕರ್ನಾಟಕದ ರಾಜ್ಯಪಾಲರು ತಮ್ಮಿಷ್ಟದ ಎರಡು ಸಾಲು ಭಾಷಣ ಮಾಡಿ ಹೊರನಡೆದರು. ಈಗ, ಬಂಗಾಳದ ರಾಜ್ಯಪಾಲರೂ ನಾಲ್ಕು ನಿಮಿಷ ಭಾಷಣ ಮಾಡಿ, ಹಠಾತ್ತನೆ ಭಾಷಣ ನಿಲ್ಲಿಸಿದರು. ಆದರೆ, ಏಕಾಏಕಿ ಹೊರನಡೆಯುವ ಬದಲಿಗೆ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ ಕುರ್ಚಿಯ ಬಳಿಗೆ ತೆರಳಿ, ಅವರ ಕೈ ಹಿಡಿದು ಮಾತನಾಡಿದರು. ಸದನದಲ್ಲಿ ಆಡಳಿತ ಪಕ್ಷದೊಂದಿಗಿನ ಸಂಭವನೀಯ ಘರ್ಷಣೆಯನ್ನು ತಪ್ಪಿಸಿದರು.

ಆದಾಗ್ಯೂ, ರಾಜ್ಯಪಾಲರ ನಡೆಗೆ ಬಹುಪರಾಕ್ ಹಾಕಿದ ವಿಪಕ್ಷ ಬಿಜೆಪಿಗರು ''ರಾಜಪಾಲರ ಕ್ರಮವು ಮಮತಾ ಬ್ಯಾನರ್ಜಿ ಸರ್ಕಾರ ರಚಿಸಿದ ಭಾಷಣವನ್ನು ಸಾಂಕೇತಿಕವಾಗಿ ತಿರಸ್ಕರಿಸಿದಂತಿದೆ'' ಎಂದು ಬಣ್ಣಿಸಿದ್ದಾರೆ. ಸದ್ಯ, ರಾಜ್ಯಪಾಲರು ಮತ್ತು ಮುಖ್ಯಮಂತ್ರಿ ನಡುವಿನ ಸಂಭಾಷಣೆಯಲ್ಲಿ ಏನಿತ್ತು ಎಂಬುದು ಗುಟ್ಟಾಗಿ ಉಳಿದಿದೆ.

ಅದೇನೆ ಇರಲಿ, ರಾಜ್ಯಪಾಲ ಬೋಸ್ ಅವರು ಕೇಂದ್ರ ಸರ್ಕಾರವನ್ನು ಟೀಕಿಸುವ ಸಾಲುಗಳನ್ನು ತಪ್ಪಿಸುವುದಕ್ಕಾಗಿಯೇ ಭಾಷಣವನ್ನು ಅರ್ಧಕ್ಕೆ ಮೊಟಕುಗೊಳಿಸಿದ್ದಾರೆ ಎಂಬುದು ಸ್ಪಷ್ಟ. ಅದನ್ನು, ಟಿಎಂಸಿಯ ಶಾಸಕರೂ ಹೇಳುತ್ತಾರೆ. ಅಂತೆಯೇ, ಕರ್ನಾಟಕ, ತಮಿಳುನಾಡು ಹಾಗೂ ಕೇರಳ ರಾಜ್ಯಪಾಲರೂ ಕೂಡ ಮನರೇಗಾ. ಹಿಂದಿ ಹೇರಿಕೆ ಸೇರಿದಂತೆ ಕೆಲ ವಿಚಾರವಾಗಿ ಕೇಂದ್ರ ಸರ್ಕಾರವನ್ನು ಟೀಕಿಸುವುದರಿಂದ ತಪ್ಪಿಸಿಕೊಳ್ಳುವುದಕ್ಕಾಗಿಯೇ ಸದನದಲ್ಲಿ ಭಾಷಣ ಮಾಡಲು ಹಿಂದೇಟು ಹಾಕಿದ್ದರು.

ಕರ್ನಾಟಕದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯಪಾಲರ ಕ್ರಮಗಳು ಸಂವಿಧಾನದ ಉಲ್ಲಂಘನೆ ಎಂದು ಕರೆದರು. ರಾಜ್ಯಪಾಲರು ಕೇಂದ್ರ ಸರ್ಕಾರದ ಕೈಗೊಂಬೆಯಾಗಿ ವರ್ತಿಸಿದ್ದಾರೆ. ಅವರು ಓದಿದ ಭಾಷಣವನ್ನು ದೆಹಲಿಯಲ್ಲಿ ಸಿದ್ಧಪಡಿಸಲಾಗಿದೆ ಎಂದು ಆರೋಪಿಸಿದರು.

ಈ ಬೆಳವಣಿಗೆಗಳು ಬಿಜೆಪಿಯೇತರ ಸರ್ಕಾರಗಳ ವಿರುದ್ಧ ರಾಜ್ಯಪಾಲರನ್ನು ಅಸ್ತ್ರವಾಗಿ ಮೋದಿ ಸರ್ಕಾರ ಬಳಸುತ್ತಿದೆ. ಗೌರವಾನ್ವಿತ ಪ್ರಮುಖ ಹುದ್ದೆಯನ್ನು ದುರುಪಯೋಗ ಮಾಡಿಕೊಳ್ಳುತ್ತಿದೆ ಎಂಬ ಚರ್ಚೆಯನ್ನು ಮತ್ತೊಮ್ಮೆ ಹುಟ್ಟುಹಾಕಿವೆ. ಪರಿಣಾಮವಾಗಿ, ಹಲವರು ರಾಜ್ಯಪಾಲ ಎಂಬ ಹುದ್ದೆಯನ್ನೇ ರದ್ದುಗೊಳಿಸುವಂತೆ ಒತ್ತಾಯಿಸುತ್ತಿದ್ದಾರೆ. ಇನ್ನೂ ಕೆಲವರು, ರಾಜ್ಯಗಳ ಶಾಸಕಾಂಗವನ್ನು ಉದ್ದೇಶಿಸಿ ರಾಜ್ಯಪಾಲರು ಭಾಷಣ ಮಾಡಬೇಕು ಎಂಬ ನಿಯಮವನ್ನೇ ರದ್ದುಗೊಳಿಸಬೇಕು ಎಂದು ವಾದಿಸುತ್ತಿದ್ದಾರೆ. ರಾಜ್ಯಪಾಲ ಎಂಬ ಹುದ್ದೆ ಅನಗತ್ಯವೆಂದು ಹೇಳುತ್ತಿದ್ದಾರೆ.

ತಮಿಳುನಾಡು ಮುಖ್ಯಮಂತ್ರಿ ಎಂ.ಕೆ ಸ್ಟಾಲಿನ್ ಕೂಡ, ಸದನದಲ್ಲಿ ರಾಜಪಾಲರ ಭಾಷಣವನ್ನು ರದ್ದುಗೊಳಿಸಲು ಅಗತ್ಯ ಸಾಂವಿಧಾನಿಕ ತಿದ್ದುಪಡಿಗಳಿಗೆ ಒತ್ತಾಯಿಸುತ್ತೇವೆ. ಡಿಎಂಕೆ ಮೈತ್ರಿಕೂಟವು ಬಿಜೆಪಿ ಸರ್ಕಾರದ ಆದೇಶಗಳಿಗೆ ಎಂದಿಗೂ ತಲೆಬಾಗುವುದಿಲ್ಲ'' ಎಂದು ಬಲವಾಗಿ ಪ್ರತಿಪಾದಿಸಿದ್ದಾರೆ. ಮರುಮಲರ್ಚಿ ದ್ರಾವಿಡ ಮುನ್ನೇತ್ರ ಕಳಗಂ (ಎಂಡಿಎಂಕೆ) ನಾಯಕ ವೈಕೊ ಅವರು ತಮಿಳುನಾಡು ರಾಜ್ಯಪಾಲ ಆರ್.ಎನ್. ರವಿ ಅವರನ್ನು ಪದಚ್ಯುತಗೊಳಿಸುವಂತೆ ಕೋರಿ ರಾಷ್ಟ್ರಪತಿಗಳಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

ಅಂತೆಯೇ, ಕರ್ನಾಟಕದ ಬಿಜೆಪಿ ಶಾಸಕ ಸುರೇಶ್ ಕುಮಾರ್ ಕೂಡ ರಾಜ್ಯಪಾಲರು ಶಾಸಕಾಂಗಗಳನ್ನು ಉದ್ದೇಶಿಸಿ ಮಾತನಾಡುವ ಪದ್ಧತಿಯನ್ನು ಪುನರ್ವಿಮರ್ಶೆ ಮಾಡಬೇಕು. ಇದರ ಮಹತ್ವ, ಉದ್ದೇಶ ಮತ್ತು ಪಾವಿತ್ರ್ಯ ಕಣ್ಮರೆಯಾಗಿದೆ ಎಂದು ಹೇಳಿದ್ದಾರೆ.

ಗಮನಾರ್ಹವಾಗಿ, ಮಾಜಿ ರಾಷ್ಟ್ರಪತಿ ಆರ್. ವೆಂಕಟರಾಮನ್ ಅವರು ರಾಜಪಾಲರ ಭಾಷಣವನ್ನು ಅರ್ಥಹೀನ ಔಪಚಾರಿಕತೆ ಎಂದು ಬಣ್ಣಿಸಿದ್ದು, ಭಾಷಣದಲ್ಲಿ ನನ್ನ ಸರ್ಕಾರ ಎಂಬ ಪದವನ್ನು ಸರ್ಕಾರ ಎಂದು ಬದಲಾಯಿಸಬೇಕೆಂದು ಸೂಚಿಸಿದ್ದಾರೆ. ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರು 2016ರಲ್ಲಿಯೇ ರಾಜ್ಯಪಾಲರ ಹುದ್ದೆಯನ್ನು ರದ್ದುಗೊಳಿಸುವಂತೆ ಕರೆ ನೀಡಿದ್ದರು. ರಾಜ್ಯಪಾಲ ಹುದ್ದೆಯು ಫೆಡರಲ್ ಪ್ರಜಾಪ್ರಭುತ್ವ ರಚನೆಗೆ ಹೊಂದಿಕೆಯಾಗುವುದಿಲ್ಲ ಎಂದು ವಾದಿಸಿದ್ದರು. ಭಾರತೀಯ ಕಮ್ಯುನಿಸ್ಟ್ ಪಕ್ಷವೂ ಕೂಡ ರಾಜ್ಯಪಾಲ ಹುದ್ದೆಯ ರದ್ದತಿಯನ್ನು ಪ್ರತಿಪಾದಿಸಿದೆ. ಈಗ, ಇದೇ ಪ್ರತಿಪಾದನೆಗೆ ಕಾಂಗ್ರೆಸ್, ಟಿಎಂಸಿಗಳೂ ಸೇರಿಕೊಂಡಿವೆ.

ಪ್ರಸ್ತುತ ರಾಜಕೀಯ ಸನ್ನಿವೇಶದಲ್ಲಿ ರಾಜಪಾಲ ಎಂಬ ಹುದ್ದೆಯೇ ಬೇಕು-ಬೇಡಗಳ ಚರ್ಚೆಯಲ್ಲಿ ಸಿಲುಕಿದೆ. ಸ್ವತಂತ್ರ್ಯ ಸಂದರ್ಭದ ಸಂವಿಧಾನ ಸಭೆಯ ಚರ್ಚೆಗಳು ರಾಜ್ಯಪಾಲರು ಕನಿಷ್ಠ ವಿವೇಚನೆಯನ್ನು ಚಲಾಯಿಸಬೇಕೆಂದು ಸೂಚಿಸುತ್ತವೆ. ಸಂವಿಧಾನ ಕರ್ತೃ, ಮೊದಲ ಕಾನೂನು ಸಚಿವ ಡಾ. ಬಿ.ಆರ್. ಅಂಬೇಡ್ಕರ್ ಅವರು ''ರಾಜ್ಯಪಾಲರು ಒಕ್ಕೂಟದ ಏಜೆಂಟರಾಗಿ ಕಾರ್ಯ ನಿರ್ವಹಿಸಬಾರದು ಅಥವಾ ಚುನಾಯಿತ ಸರ್ಕಾರಗಳ ಕಾರ್ಯಗಳಲ್ಲಿ ಹಸ್ತಕ್ಷೇಪ ಮಾಡಬಾರದು'' ಎಂದು ಒತ್ತಿ ಹೇಳಿದ್ದರು.

ಸುಪ್ರೀಂ ಕೋರ್ಟ್ ರಾಜಪಾಲರನ್ನು ತತ್ವಜ್ಞಾನಿಗಳು, ಸ್ನೇಹಿತರು ಹಾಗೂ ಮಾರ್ಗದರ್ಶಕರು ಎಂದು ಬಣ್ಣಿಸಿದೆ. ಇದೇ ರೀತಿಯ ಅಭಿಪ್ರಾಯವನ್ನು ಮಾಜಿ ರಾಷ್ಟ್ರಪತಿ ರಾಮ್ ನಾಥ್ ಕೋವಿಂದ್ ಕೂಡ ವ್ಯಕ್ತಪಡಿಸಿದ್ದಾರೆ.

ಆದರೆ, ಇಂದು ರಾಜ್ಯಪಾಲರು ಬ್ರಿಟಿಷ್ ಗವರ್ನರ್-ಜನರಲ್‌ಗಳಿಗಿಂತ ಹೆಚ್ಚಿನ ಅಧಿಕಾರವನ್ನು ಹೊಂದಿದ್ದಾರೆ ಎಂದು ವಿಮರ್ಶಕರು ವಾದಿಸುತ್ತಾರೆ. ಸರ್ಕಾರದ ಸರ್ಕಾರದ ನಿಲುವು-ಧೋರಣೆಗಳನ್ನು ರಾಜ್ಯಗಳ ಮೇಲೆ ಹೇರುತ್ತಿದ್ದಾರೆ. ಶಾಸಕಾಂಗಗಳು ಅಂಗೀಕರಿಸಿದ ಮಸೂದೆಗಳಿಗೆ ಒಪ್ಪಿಗೆ ನೀಡದೆ, ಅವುಗಳನ್ನು ದೀರ್ಘಕಾಲದವರೆಗೆ ತಡೆಹಿಡಿಯುವ ಛಾಳಿಯನ್ನೂ ರಾಜ್ಯಪಾಲರುಗಳು ಮೈಗೂಡಿಸಿಕೊಂಡಿದ್ದಾರೆ. ಅವರ ಈ ಧೋರಣೆಯನ್ನು ವಿಪಕ್ಷಗಳು ಪಾಕೆಟ್ ವೀಟೋ ಎಂದು ಕರೆದಿವೆ. ಆದಾಗ್ಯೂ, ಮಸೂದೆಗಳನ್ನು ಅನಿರ್ದಿಷ್ಟವಾಗಿ ತಡೆಹಿಡಿಯಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ.

ಇನ್ನು, ರಾಜ್ಯಪಾಲರುಗಳು ರಾಷ್ಟ್ರಪತಿಗಳಂತೆಯೇ ಆರೋಪ ಮತ್ತು ಕಾನೂನು ಕ್ರಮಗಳಿಂದ ವಿನಾಯಿತಿ ಪಡೆದಿದ್ದಾರೆ. ಆದ್ದರಿಂದಲೇ, 1988ರಲ್ಲಿ ಸರ್ಕಾರಿಯಾ ಆಯೋಗವು ರಾಜ್ಯಪಾಲರ ವಿರುದ್ಧ ಗಂಭೀರ ಆರೋಪಗಳು ಬಂದರೆ, ಅವರ ವಿರುದ್ಧ ದೋಷಾರೋಪಣೆ ರೂಪಿಸಲು ಕಾರ್ಯವಿಧಾನವನ್ನು ಶಿಫಾರಸು ಮಾಡಿತು. ಆದರೆ, ಈ ಪ್ರಸ್ತಾವನೆಯನ್ನು ಸತತ ಕೇಂದ್ರ ಸರ್ಕಾರಗಳು ನಿರ್ಲಕ್ಷಿಸಿವೆ. ಈಗ, ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಕೇಂದ್ರ, ಸಂಸ್ಥೆಗಳ ಕೆಲಸವನ್ನು ಸಂಘಟಿಸುವುದು ಸೇರಿದಂತೆ ರಾಜ್ಯಪಾಲರಿಗೆ ಹೆಚ್ಚಿನ ಕಾರ್ಯನಿರ್ವಾಹಕ ಅಧಿಕಾರಗಳನ್ನು ನೀಡಲು ಎದುರು ನೋಡುತ್ತಿದೆ.

ರಾಜ್ಯಪಾಲರು ಬಿಜೆಪಿಯ ರಾಜಕೀಯ ಉದ್ದೇಶಗಳನ್ನು ಸಾಧಿಸುವ ಸಾಧನಗಳಾಗಿ ಮಾರ್ಪಟ್ಟಿದ್ದಾರೆ. ಇದು ರಾಜ್ಯಗಳ ಸ್ವಾಯತ್ತತೆಗೆ ಧಕ್ಕೆಯಾಗಿದ್ದು, ಪ್ರಜಾಪ್ರಭುತ್ವದ ಮೇಲೆ ಕಾರ್ಮೋಡ ಕವಿಯುಂತೆ ಮಾಡಿದೆ.

ಜಾಗತಿಕ ಶಿಕ್ಷಕ ಪ್ರಶಸ್ತಿ' ಮುಡಿಗೇರಿಸಿಕೊಂಡ ಭಾರತೀಯ ಶಿಕ್ಷಕಿ ರೂಬಲ್ ನಾಗಿ

'ಲಿವಿಂಗ್ ವಾಲ್ಸ್ ಆಫ್ ಲರ್ನಿಂಗ್' ಯೋಜನೆ ಮೂಲಕ ಕೊಳೆಗೇರಿಗಳ ಗೋಡೆಗಳ ಮೇಲೆ ಭಿತ್ತಿಚಿತ್ರಗಳನ್ನು ಬಿಡಿಸಿ, ಅವುಗಳನ್ನು ಶೈಕ್ಷಣಿಕ ಸಾಧನಗಳಾಗಿ ಬಳಸಿಕೊಂಡಿದ್ದಾರೆ. ಗೋಡೆಗಳನ್ನು ತಮ್ಮ ಕಲೆ ಪ್ರದರ್ಶನಕ್ಕಾಗಿ ಬಳಸದೆ ಕಲೆ ಮೂಲಕವೇ ಅಕ್ಷರಮಾಲೆ, ಸಂಖ್ಯೆಗಳು, ವಿಜ್ಞಾನ, ಆರೋಗ್ಯ ಮತ್ತು ನೈರ್ಮಲ್ಯ, ಪರಿಸರ ಜಾಗೃತಿ ಹಾಗೂ ಸಾಮಾಜಿಕ ಮೌಲ್ಯಗಳನ್ನು ಬೋಧಿಸುವ ಕಾರ್ಯವನ್ನು ಮಾಡಿದ್ದಾರೆ.

ದೇಶದಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಅಗಾಧವಾದ ಕೊಡುಗೆಯನ್ನು ನೀಡಿರುವ ಶಿಕ್ಷಕಿ, ಸಾಮಾಜಿಕ ಕಾರ್ಯಕರ್ತೆ ರೂಬಲ್ ನಾಗಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡಿದ್ದು ಜಾಗತಿಕ ಶಿಕ್ಷಕ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ. ದುಬೈನಲ್ಲಿ ನಡೆದ ಸಮಾರಂಭದಲ್ಲಿ ರೂಬಲ್ ನಾಗಿ ಅವರಿಗೆ ಈ ಪ್ರಶಸ್ತಿ ನೀಡಲಾಗಿದ್ದು 2015ರಲ್ಲಿ ಜಾಗತಿಕ ಶಿಕ್ಷಕ ಪ್ರಶಸ್ತಿಯನ್ನು ಸ್ಥಾಪಿಸಿದ ವರ್ಕಿ ಫೌಂಡೇಶನ್ ಈ ಪ್ರಶಸ್ತಿಯನ್ನು ಘೋಷಿಸುತ್ತದೆ.



ಶಿಕ್ಷಣ ಕ್ಷೇತ್ರದ ನೊಬೆಲ್ ಪ್ರಶಸ್ತಿ ಎಂದೇ ಪರಿಗಣಿಸಲಾಗುವ ಜಾಗತಿಕ ಶಿಕ್ಷಕ ಪ್ರಶಸ್ತಿಯು 1 ಮಿಲಿಯನ್ ಡಾಲರ್ (ಸುಮಾರು ₹8.3 ಕೋಟಿ) ಬಹುಮಾನ ಮೊತ್ತವನ್ನು ಒಳಗೊಂಡಿದೆ. ವರ್ಲ್ಡ್ ಗವರ್ನಮೆಂಟ್ ಸಮಿಟ್‌ನಲ್ಲಿ ದುಬೈನ ಕ್ರೌನ್ ಪ್ರಿನ್ಸ್ ಶೇಖ್ ಹಮ್ದಾನ್ ಬಿನ್ ಮೊಹಮ್ಮದ್ ಈ ಪ್ರಶಸ್ತಿಯನ್ನು ಪ್ರದಾನ ಮಾಡಿದರು. 20220ರಲ್ಲಿ ಮಹಾರಾಷ್ಟ್ರದ ಪರಿತೇವಾಡಿ ಗ್ರಾಮದ ಶಿಕ್ಷಕರಾದ ರಂಜಿತ್ ಸಿನ್ಹಾ ಡಿಸಾಲೆ ಮೊದಲ ಬಾರಿಗೆ ಈ ಪ್ರಶಸ್ತಿ ಪಡೆದಿದ್ದು, ಇದೀಗ ರೂಬಲ್ ನಾಗಿ ಶಿಕ್ಷಣ ಕ್ಷೇತ್ರದ ಅತ್ಯುನ್ನತ ಪ್ರಶಸ್ತಿಯನ್ನು ಗೆದ್ದ ಎರಡನೇ ಭಾರತೀಯರು ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಭಾರತೀಯ ಶಿಕ್ಷಕಿ ರೂಬಲ್ ನಾಗಿ ಯಾರು?

1980ರ ಜುಲೈ 8ರಂದು ಜಮ್ಮು ಮತ್ತು ಕಾಶ್ಮೀರದ ಒಂದು ಸಣ್ಣ ಹಳ್ಳಿಯಲ್ಲಿ ಜನಿಸಿದ ರೂಬಲ್ ನಾಗಿ ಸೇನಾ ಅಧಿಕಾರಿಯ ಮಗಳು. ತಂದೆಯ ಉದ್ಯೋಗದ ಕಾರಣದಿಂದಾಗಿ ದೇಶದ ವಿವಿಧ ಭಾಗಗಳಲ್ಲಿರುವ ಮಿಲಿಟರಿ ಕ್ಯಾಂಟೋನ್ಮೆಂಟ್‌ಗಳಲ್ಲಿ ತಮ್ಮ ಬಾಲ್ಯವನ್ನು ಕಳೆದವರು. ತಮ್ಮ ಆರಂಭಿಕ ಶಿಕ್ಷಣವನ್ನು ಆರ್ಮಿ ಸ್ಕೂಲ್‌ನಲ್ಲಿ ಪೂರೈಸಿದ್ದು, ನಂತರ ಲಂಡನ್‌ನ ಸ್ಲೇಡ್ ಸ್ಕೂಲ್ ಆಫ್ ಫೈನ್ ಆರ್ಟ್‌ನಲ್ಲಿ ಕಲಾ ವಿಭಾಗದಲ್ಲಿ ಉನ್ನತ ಶಿಕ್ಷಣ ಪಡೆದಿದ್ದಾರೆ.

ರೂಬಲ್ ಅವರನ್ನು ವೈದ್ಯರನ್ನಾಗಿಸಬೇಕು ಎಂಬುದು ಅವರ ತಂದೆಯವರ ಬಯಕೆಯಾಗಿತ್ತು. ಆದರೆ ರೂಬಲ್ ಬಾಲ್ಯದಿಂದಲೇ ಸೃಜನಶೀಲ ಕೆಲಸಗಳಲ್ಲಿ ಮತ್ತು ಕಲೆಯ ಮೇಲೆ ಹೆಚ್ಚಿನ ಆಸಕ್ತಿ ಹೊಂದಿದ್ದವರು. ಶಾಲಾ ದಿನಗಳಲ್ಲೇ ಬಣ್ಣ ಮತ್ತು ಶಿಲ್ಪಕಲೆಗಳಲ್ಲಿ ಪ್ರಯೋಗಗಳನ್ನು ಪ್ರಾರಂಭಿಸಿದ್ದರು. ತಂದೆಯ ಉದ್ಯೋಗದಿಂದಾಗಿ ವಿವಿಧ ರಾಜ್ಯಗಳಲ್ಲಿ ಬೆಳೆದ ರೂಬಲ್ ಅವರಿಗೆ ವಿಭಿನ್ನ ಭಾಷೆಗಳು, ಉಡುಪುಗಳು ಮತ್ತು ಸಂಸ್ಕೃತಿಗಳ ಪರಿಚಯವಿದ್ದು, ಈ ಅನುಭವವೂ ಅವರ ಕಲಾತ್ಮಕ ಬೆಳವಣಿಗೆಗೆ ಪ್ರಮುಖ ಪ್ರೇರಣೆಯಾದವು. ಶಿಲ್ಪಕಲೆ, ಕಲಾಕೃತಿಗಳು ಮತ್ತು ವರ್ಣಚಿತ್ರಗಳಲ್ಲಿ ಪರಿಣತಿ ಹೊಂದಿರುವ ನಾಗಿ ಅವರ ಸುಮಾರು 800ಕ್ಕೂ ಹೆಚ್ಚು ಭಿತ್ತಿಚಿತ್ರಗಳನ್ನು () ವಿಶ್ವದಾದ್ಯಂತ 150ಕ್ಕೂ ಹೆಚ್ಚು ಪ್ರದರ್ಶನಗಳನ್ನು ಕಂಡಿದೆ. ಮುಂಬೈ ನಗರದ ಸೌಂದರ್ಯೀಕರಣಕ್ಕಾಗಿ ಹಲವು ಕಲಾಕೃತಿಗಳನ್ನು ಸ್ಥಾಪಿಸಿದ್ದಾರೆ. ನವದೆಹಲಿಯ ರಾಷ್ಟ್ರಪತಿ ಭವನದ ಮ್ಯೂಸಿಯಂನಲ್ಲಿ ಪ್ರದರ್ಶನ ನೀಡಲು ಆಹ್ವಾನ ಪಡೆದ ಮೊದಲ ಕಲಾವಿದೆ ಎಂಬ ಹೆಗ್ಗಳಿಕೆಯೂ ರೂಬಲ್ ಅವರಿಗೆ ಸಲ್ಲುತ್ತದೆ.

ರೂಬಲ್ ಸಾಮಾಜಿಕ ಕಾರ್ಯಗಳು

ರೂಬಲ್ ಕಲೆಯಲ್ಲಿ ಮಾತ್ರವಲ್ಲ ತಮ್ಮ ಕಲೆಯ ಮೂಲಕ ಸಾಮಾಜಿಕ ಕಾರ್ಯಗಳನ್ನೂ ಮಾಡಿದವರು. ರೂಬಲ್ ಮುಂಬೈನಲ್ಲಿ ರೂಬಲ್ ನಾಗಿ ಆರ್ಟ್ ಫೌಂಡೇಶನ್ () ಎಂಬ ಎನ್‌ಜಿಒ ಸ್ಥಾಪಿಸಿದ್ದು ಈ ಸಂಸ್ಥೆಯು ಮುಖ್ಯವಾಗಿ ಕಲೆಯ ಮೂಲಕ ಸಮುದಾಯದ ಅಭಿವೃದ್ಧಿ ಮತ್ತು ಶಿಕ್ಷಣವನ್ನು ಉತ್ತೇಜಿಸುವ ಕಾರ್ಯ ಮಾಡುತ್ತಾ ಬಂದಿದೆ. ಈ ಸಂಸ್ಥೆ ಮಿಸಾಲ್ ಮುಂಬೈ/ಮಿಸಾಲ್ ಇಂಡಿಯಾ ಎಂಬ ಕೊಳೆಗೇರಿ ರೂಪಾಂತರ ಉಪಕ್ರಮವನ್ನು ಆರಂಭಿಸಿದ್ದು, 1,50,000ಕ್ಕೂ ಹೆಚ್ಚು ಮನೆಗಳಿಗೆ ಬಣ್ಣ ಹಚ್ಚುವ ಮೂಲಕ ನೈರ್ಮಲ್ಯ ಮತ್ತು ಸೌಂದರ್ಯೀಕರಣದ ಜಾಗೃತಿ ಮೂಡಿಸಿದ್ದಾರೆ.

ಲಿವಿಂಗ್ ವಾಲ್ಸ್ ಆಫ್ ಲರ್ನಿಂಗ್ ಯೋಜನೆ ಮೂಲಕ ಕೊಳೆಗೇರಿಗಳ ಗೋಡೆಗಳ ಮೇಲೆ ಭಿತ್ತಿಚಿತ್ರಗಳನ್ನು ಬಿಡಿಸಿ, ಅವುಗಳನ್ನು ಶೈಕ್ಷಣಿಕ ಸಾಧನಗಳಾಗಿ ಬಳಸಿಕೊಂಡಿದ್ದಾರೆ. ಗೋಡೆಗಳನ್ನು ತಮ್ಮ ಕಲೆ ಪ್ರದರ್ಶನಕ್ಕಾಗಿ ಬಳಸದೆ ಕಲೆ ಮೂಲಕವೇ ಅಕ್ಷರಮಾಲೆ, ಸಂಖ್ಯೆಗಳು, ವಿಜ್ಞಾನ, ಆರೋಗ್ಯ ಮತ್ತು ನೈರ್ಮಲ್ಯ, ಪರಿಸರ ಜಾಗೃತಿ ಹಾಗೂ ಸಾಮಾಜಿಕ ಮೌಲ್ಯಗಳನ್ನು ಬೋಧಿಸುವ ಕಾರ್ಯವನ್ನು ಮಾಡಿದ್ದಾರೆ. ಮುಖ್ಯವಾಗಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಿಕ್ಷಣದತ್ತ ಆಕರ್ಷಿಸುವುದು ಮತ್ತು ಸಮುದಾಯದಲ್ಲಿ ಕಲಿಕೆಯ ವಾತಾವರಣವನ್ನು ನಿರ್ಮಿಸುವುದು ಈ ಯೋಜನೆಯ ಮುಖ್ಯ ಗುರಿಯಾಗಿತ್ತು. ಇದರಿಂದಾಗಿ ಹತ್ತು ಲಕ್ಷ ಮಕ್ಕಳು ಶಿಕ್ಷಣದತ್ತ ಆಕರ್ಷಣೆಗೊಳ್ಳಲು ಸಾಧ್ಯವಾಗಿದೆ ಎಂದು ವರದಿಗಳು ಹೇಳುತ್ತವೆ.

ರೂಬಲ್ ನಾಗಿ ಆರ್ಟ್ ಫೌಂಡೇಶನ್‌ನಿಂದ ಮಹಿಳಾ ಸಬಲೀಕರಣ ಕಾರ್ಯಗಳನ್ನೂ ಮಾಡಿದೆ. ಸ್ಟುಡಿಯೋ ಸಕ್ಷಮ್ ( ) ಎಂಬ ಮಹಿಳಾ ನೇತೃತ್ವದ ಯೋಜನೆ ಮೂಲಕ ಗ್ರಾಮೀಣ ಮತ್ತು ಕೊಳೆಗೇರಿ ಪ್ರದೇಶದ ಮಹಿಳೆಯರಿಗೆ ಕೌಶಲ್ಯ ತರಬೇತಿ ನೀಡಿ ಅವರನ್ನು ಉದ್ಯಮಿಗಳನ್ನಾಗಿ ರೂಪಿಸುವ ಕೆಲಸವನ್ನು ರೂಬಲ್ ಅವರು ತಮ್ಮ ಸಂಸ್ಥೆ ಮೂಲಕ ಮಾಡಿದ್ದಾರೆ. ಮುಂಬೈ ಮತ್ತು ಕಾಶ್ಮೀರದಂತಹ ಪ್ರದೇಶಗಳಲ್ಲಿ ವಿಶೇಷವಾಗಿ ಮಹಿಳೆಯರಿಗಾಗಿ ಕೌಶಲ್ಯ ಕೇಂದ್ರಗಳನ್ನು ತೆರೆದಿದ್ದಾರೆ. ಹಾಗೆಯೇ ಲಾಕ್‌ಡೌನ್ ಮತ್ತು ಇತರ ತುರ್ತು ಸಂದರ್ಭಗಳಲ್ಲಿ ಕೊಳೆಗೇರಿ ಪ್ರದೇಶದ ಮಹಿಳೆಯರಿಗೆ ಸ್ಯಾನಿಟರಿ ನ್ಯಾಪ್‌ಕಿನ್ ವಿತರಣೆ ಮತ್ತು ವೈಯಕ್ತಿಕ ನೈರ್ಮಲ್ಯದ ಬಗ್ಗೆ ಕಾರ್ಯಾಗಾರಗಳನ್ನು ಇದೇ ಸಂಸ್ಥೆ ಮೂಲಕ ರೂಬಲ್ ನಡೆಸಿದ್ದಾರೆ.

ಶಿಕ್ಷಣ ತಜ್ಞೆಯಾದ ರೂಬಲ್ ನಾಗಿ ಸಾಮಾಜಿಕ ಕಾರ್ಯ ಹಾಗೂ ಕಲಾ ಕ್ಷೇತ್ರದಲ್ಲಿನ ಸಾಧನೆಗಾಗಿ ಅನೇಕ ಪ್ರತಿಷ್ಠಿತ ಗೌರವಗಳನ್ನು ಪಡೆದಿದ್ದಾರೆ. ಆ ಪೈಕಿ ಇತ್ತೀಚೆಗೆ ಲಭಿಸಿದ ಜಾಗತಿಕ ಶಿಕ್ಷಕ ಪ್ರಶಸ್ತಿ ಕೂಡಾ ಒಂದು. 2013ರಲ್ಲಿ ಕಲೆ ಮತ್ತು ಸಾಮಾಜಿಕ ಸೇವೆಯಲ್ಲಿನ ಅವರ ಗಮನಾರ್ಹ ಕೊಡುಗೆಗಾಗಿ ಜಿಜಾಮಾತಾ ಪ್ರಶಸ್ತಿ ಪಡೆದಿದ್ದಾರೆ. ಅದೇ ವರ್ಷ ಅತ್ಯುತ್ತಮ ಮಹಿಳಾ ಕಲಾವಿದೆ ವಿಭಾಗದಲ್ಲಿ 8 ಪ್ರಶಸ್ತಿಗೆ ಪಾತ್ರರಾಗಿ ದ್ದಾರೆ. 2017ರಲ್ಲಿ ನೋಬೆಲ್ ಆರ್ಟಿಸ್ಟ್ ಪ್ರಶಸ್ತಿ, ಮಹಿಳಾ ಸಬಲೀಕರಣ ಮತ್ತು ಸಮಾಜ ಸುಧಾರಣೆಯ ಕೆಲಸಗಳಿಗಾಗಿ ಹಲೋ! ಊರ್ಜಾ ಪ್ರಶಸ್ತಿ ಪ್ರಶಸ್ತಿ, ಪ್ರಶಸ್ತಿಯನ್ನೂ ಪಡೆದಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR